02 January 2025 Friday

SINCE 1957

ಬೆಳಗಿನ ಪ್ರಾದೇಶಿಕ ದಿನಪತ್ರಿಕೆ

# ವರ್ತಮಾನ

ಸಂಪಾದಕ: ಕೆ.ಎನ್.ರವಿ

ಭವಿಷ್ಯದ ಮುನ್ನುಡಿ

info.varthaman@gmail.com

9742504916 | ಮೈಸೂರು | ಮಂಡ್ಯ | ಬೆಂಗಳೂರು | ಹಾಸನ | ಚಾಮರಾಜನಗರ | ರಾಮನಗರ | ಬೆಂಗಳೂರು ಗ್ರಾಮಾಂತರ | ಕೊಡಗು | ಕಾರ್ಯನಿರ್ವಾಹಕ ಸಂಪಾದಕ - ಕೆ.ಆರ್.ಮಿಹಿರ್ ಆಕಾಶ್

VARTHAMAN Volume: 69 Issue: 68 Pages: 06 KA/SK/MYS/1098/2023-2025 R.N.I. No.3577/1957 www.varthaman.in Price-3

**ಭಾವನಾಂತರಂಗ**

ನಮ್ಮ ಪ್ರತಿ ಪ್ರಶ್ನೆಗೂ ಜೀವನ ಉತ್ತರ ನೀಡುವುದಿಲ್ಲ, ಕೆಲವೊಮ್ಮೆ ಹೊಸ ಆರಂಭವನ್ನು ನೀಡುತ್ತದೆ!

-ಸ್ನೇಹಾ ಆನಂದ್

**ಒಂದೊಳ್ಳೆ ಮಾತು**

ಗೆಲುವು ಖಾತ್ರಿ
ಆದಮೇಲೆ ಅರ್ಜುನ
ಆಗೋಕೆ ಎಲ್ಲರೂ ಸಿದ್ಧ...,
ಸೋಲುತ್ತೇನೆ ಅಂತ
ತಿಳಿದಿದ್ದರೂ ಕರ್ಣ ಆಗೋಕೆ
ಗುಂಡಿಗೆ ಬೇಕು

ಮೈಲಾರ ಸಾವಿತ್ರಿಬಾಯಿ

## ಮರ್ಯಾದಾ ಹತ್ಯೆ ತಡೆಗೆ ಕಾನೂನು

### ಮಾನ್ಯ ಹೆಸರಿನಲ್ಲಿ ಕಾಯ್ದೆ ಜಾರಿಗೆ ಅಧಿವೇಶನದಲ್ಲಿ ಚರ್ಚೆ: ಎಚ್.ಸಿ.ಮಹದೇವಪ್ಪ

**ಹುಬ್ಬಳ್ಳಿ:** ರಾಜ್ಯದಲ್ಲಿ ಮರ್ಯಾದಾ ಹತ್ಯೆಯಂತಹ ಪ್ರಕರಣಗಳ ತಡೆಗೆ ಮುಂದಿನ ಅಧಿವೇಶನದಲ್ಲಿ ಕಠಿಣ ಕಾನೂನು ಜಾರಿಗೆ ತರುವ ಕುರಿತು ಪರಿಶೀಲಿಸಲಾಗುವುದು. ಮಾನ್ಯ ಹೆಸರಿನಲ್ಲಿ ಕಾಯ್ದೆ ತರುವ ಕುರಿತು ಚರ್ಚಿಸಲಾಗುವುದು ಎಂದು ಸಮಾಜ ಕಲ್ಯಾಣ ಸಚಿವ ಡಾ.ಎಚ್.ಸಿ.ಮಹದೇವಪ್ಪ ತಿಳಿಸಿದರು.



ಮರ್ಯಾದೆಗೇಡು ಹತ್ಯೆಯಾದ ಮಾನ್ಯಾಳ ಕುಟುಂಬಸ್ಥರನ್ನು ಗುರುವಾರ ಭೇಟಿಯಾಗಿ ಸಾಂತ್ವನ ಹೇಳಿ ಮಾತನಾಡಿದ ಅವರು, ಈ ಕೃತ್ಯವನ್ನು ಸರ್ಕಾರ ತೀವ್ರವಾಗಿ ಖಂಡಿಸಿದೆ. ಮನುವಾದದ ಮನಸ್ಸುಗಳನ್ನು ಹತ್ತಿಕ್ಕಲೇ ಬೇಕು. ಈ ಪ್ರಕರಣದಲ್ಲಿ ಭಾಗಿಯಾದವರನ್ನು ಸುಮ್ಮನೆ ಬಿಡುವುದಿಲ್ಲ ಎಂದು ಹೇಳಿದರು.

ಇದು ಮರ್ಯಾದೆ ಹತ್ಯೆಯಲ್ಲ, ಉಗ್ರವಾದ ಕೊಲೆ. ನಮ್ಮ ಭಾಗದಲ್ಲಿ ಕಂಡುಬಂದಿರಲಿಲ್ಲ. ರಾಜಸ್ಥಾನ, ಹರಿಯಾಣ ಸೇರಿ ಇತರ ರಾಜ್ಯದಲ್ಲಿತ್ತು. ನಮ್ಮ ಕರ್ನಾಟಕ ಮುಂದುವರಿದ ರಾಜ್ಯ. ಪ್ರಾಯಕ್ಕೆ ಬಂದ ಯುವತಿ ತನ್ನ ಮದುವೆ ಆಯ್ಕೆಯ ಸ್ವಾತಂತ್ರ್ಯ ಹೊಂದಿದ್ದಾಳೆ. ಹಕ್ಕನ್ನು ಹತ್ತಿಕ್ಕುವ ವ್ಯಕ್ತಿಗಳನ್ನು ಹಾಗೂ ಬೆಂಬಲಿಸುವವರನ್ನು ಸರ್ಕಾರ ಬಿಡುವುದಿಲ್ಲ. ಅವರ ಮೇಲೆ ಕಠಿಣ ಕ್ರಮ ಜರುಗಿಸಲಾಗುವುದು ಎಂದರು.

ಸಮಾಜ ಕಲ್ಯಾಣ ಇಲಾಖೆಯ ವೈಫಲ್ಯದ ಆರೋಪ ಕುರಿತು ತನಿಖೆ

# ಸಿಎಂ ಸಿದ್ದು 'ಪವರ್ ಪಾಲಿಟಿಕ್ಸ್'

## ಶೀಘ್ರವೇ ಬಜೆಟ್ ಸಿದ್ಧತೆ ಶುರು | ಬಾಣ ಬಿಟ್ಟ ಸಿದ್ದರಾಮಯ್ಯ

**ಬೆಂಗಳೂರು:** ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಕುರ್ಚಿ ಗಟ್ಟಿ ಮಾಡಿಕೊಳ್ಳಲು ಹೊಸ ವರ್ಷದ ಮೊದಲ ದಿನವೇ ಪವರ್ ಫುಲ್ ಸಂದೇಶ ಕಳುಹಿಸಿದ್ದಾರೆ. ನಾನೇ ಈ ಬಾರಿ ಬಜೆಟ್ ಮಂಡನೆ ಮಾಡುತ್ತೇನೆ. ಬಜೆಟ್ ಸಿದ್ಧತೆ ಈ ತಿಂಗಳಿನಿಂದ ಶುರು ಮಾಡುವುದಾಗಿ ಸಿಎಂ ತಿಳಿಸಿದರು. ಈ ಮೂಲಕ ಕುರ್ಚಿ ಕದನಕ್ಕೆ ಹೊಸ ಟ್ವಿಸ್ಟ್ ಕೊಟ್ಟಿದ್ದಾರೆ.

ವಿಧಾನಸೌಧದಲ್ಲಿ ಗುರುವಾರ ಮಾತನಾಡಿದ ಸಿಎಂ ಸಿದ್ದರಾಮಯ್ಯ ಅವರು, ನಾಡಿನ ಜನರಿಗೆ ಹೊಸ ವರ್ಷದ ಶುಭಾಶಯಗಳು, ಬಾಳಲ್ಲಿ ಹರ್ಷವನ್ನು ಉಂಟು ಮಾಡಲಿ ಎಂದು ಹೇಳಿದರು. ಮಾಧ್ಯಮಗಳು ಈ ಸಂದರ್ಭದಲ್ಲಿ ಬಜೆಟ್ ಸಿದ್ಧತೆ ಯಾವಾಗ ಪ್ರಾರಂಭ ಆಗಲಿದೆ ಎಂದು ಕೇಳಿದ್ದಕ್ಕೆ, ಈ ತಿಂಗಳಿನಿಂದ ಬಜೆಟ್ ಸಿದ್ಧತೆ ಶುರು ಮಾಡುತ್ತೇನೆ ಎಂದು ಉತ್ತರಿಸಿದರು.

ಸಿಎಂ ಈ ಹೇಳಿಕೆ ನೀಡುವ ಮೂಲಕ ಬಜೆಟ್ ಮುಗಿಯುವರೆಗೂ ಕುರ್ಚಿ ಬದಲಾವಣೆ ಚರ್ಚೆ ಇಲ್ಲ ಎಂಬ ಸಂದೇಶವನ್ನು ಕಳುಹಿಸಿದ್ದಾರೆ. ಸಾಧಾರಣವಾಗಿ ಫೆಬ್ರವರಿ ಕೊನೆಯ ವಾರ ಮಾರ್ಚ್ ಮೊದಲ ವಾರದಲ್ಲಿ ಕರ್ನಾಟಕ ಬಜೆಟ್ ಮಂಡನೆಯಾಗುತ್ತದೆ. ಸಿದ್ದರಾಮಯ್ಯ ಹಣಕಾಸು ಮಂತ್ರಿಯಾಗಿರುವ ಕಾರಣ ಅವರೇ ಮಂಡಿಸುತ್ತಾರೆ.

ವಿಧಾನಸೌಧದಲ್ಲಿ ಸರ್ಕಾರದ ಅಪರ ಕಾರ್ಯದರ್ಶಿಗಳು, ಕಾರ್ಯದರ್ಶಿ, ಬೆಂಗಳೂರಿನಲ್ಲಿ ಕಾರ್ಯ ನಿರ್ವಹಿಸುತ್ತಿರುವ ಐಜಿಪಿಸಿಸಿಎಫ್ ಹಾಗೂ ಪೊಲೀಸ್ ಮತ್ತು ಅರಣ್ಯ ಇಲಾಖೆ ಅಧಿಕಾರಿಗಳು ಸಿಎಂ ಭೇಟಿಯಾಗಿ ಶುಭ ಹಾರೈಸಿದರು.




## ಹೊಸ ವರ್ಷದಲ್ಲಿ ರಾಜಕೀಯ ಬಡ್ತಿ!

### ಮುಖ್ಯಮಂತ್ರಿ ಹುದ್ದೆ ಆಕಾಂಕ್ಷೆ ವ್ಯಕ್ತಪಡಿಸಿದ ಸಚಿವ ಪರಮೇಶ್ವರ್

**ಬೆಂಗಳೂರು:** ಎಲ್ಲರಂತೆ ನನಗೂ ಮಹತ್ವಾಕಾಂಕ್ಷೆ ಇದೆ. ಕಾಂಗ್ರೆಸ್ ಹೈಕಮಾಂಡ್ ನಿರ್ಧರಿಸಿದರೆ ಈ ವರ್ಷ ನನಗೆ ರಾಜಕೀಯ ಬಡ್ತಿ ಸಿಗುವ ನಿರೀಕ್ಷೆಯಲ್ಲಿದ್ದೇನೆ ಎಂದು ಹೇಳುವ ಮೂಲಕ ಸಚಿವ ಪರಮೇಶ್ವರ್ ಅವರು ತಾವೂ ಮುಖ್ಯಮಂತ್ರಿ ಹುದ್ದೆಯ ಆಕಾಂಕ್ಷೆ ಎಂಬ ಸುಳಿವು ನೀಡಿದ್ದಾರೆ.

ನಗರದಲ್ಲಿ ಗುರುವಾರ ಮಾತನಾಡಿದ ಅವರು, ರಾಜಕೀಯ ಬಡ್ತಿ 2026ರಲ್ಲಿ ಆಗಬೇಕು. ಅದು ನಮ್ಮ ಹೈಕಮಾಂಡ್‌ಗೆ ಬಿಟ್ಟದ್ದು. ಹೈಕಮಾಂಡ್ ನಿರ್ಧಾರ ಮಾಡಿದರೆ ಅದು ಆಗುತ್ತದೆ ಎಂದು ಪರಮೇಶ್ವರ್ ಅವರು ಉತ್ತರಿಸಿದರು.

ಸಿಎಂ ಹುದ್ದೆಯ ಬಗ್ಗೆ ನೀವು ಆಶಾವಾದಿಯೇ ಎಂದು ಕೇಳಿದಾಗ, ನಾನು ಇಲ್ಲಿಯವರೆಗೆ ಆಶಾವಾದಿಯಾಗಿ ಬದುಕಿದ್ದೇನೆ, ಆದ್ದರಿಂದ ಅದು ನನಗೆ ಹೊಸದೇನಲ್ಲ. ಜೀವನದಲ್ಲಿ ಏನಾದರೂ ಆಗಬೇಕೆಂಬ ಮಹತ್ವಾಕಾಂಕ್ಷೆ ನಿಮಗೆ ಇಲ್ಲವೇ? ಮನುಷ್ಯನಿಗೆ ಮಹತ್ವಾಕಾಂಕ್ಷೆ ಇರಬೇಕು. ಇಲ್ಲದಿದ್ದರೆ ಅವನು ಮನುಷ್ಯನಲ್ಲ ನನಗೂ ಎಲ್ಲರಂತೆ ಮಹತ್ವಾಕಾಂಕ್ಷೆ ಇದೆ. ನಾನು ರಾಜಕೀಯಕ್ಕೆ ಸೇರಿದಾಗ, ಸ್ವಾಭಾವಿಕವಾಗಿಯೇ ನನಗೆ ಶಾಸಕ ಮತ್ತು ಸಚಿವನಾಗುವ ಮಹತ್ವಾಕಾಂಕ್ಷೆ ಇತ್ತು. ಪ್ರತಿ ಹೆಜ್ಜೆಯಿಂದ ಇನ್ನೂ ಪುಟ 2ಕ್ಕೆ



## ನಗರದಲ್ಲಿ ಹೊಸ ವರ್ಷದ ರಂಗು ದೇವಾಲಯಗಳಲ್ಲಿ ಭಕ್ತರ ದಂಡು

**ಮೈಸೂರು:** ಹೊಸ ವರ್ಷದ ಮೊದಲ ದಿನವಾದ ಜನವರಿ 1ರಂದು ಗುರುವಾರ ನಗರದ ಎಲ್ಲಾ ದೇಗುಲಗಳಲ್ಲಿ ಭಕ್ತರ ಕಿಕ್ಕಿರಿದ ಜನಸಂದಣಿ ಇತ್ತು. ಕುಟುಂಬ ಸದಸ್ಯರೊಂದಿಗೆ ಭೇಟಿ ನೀಡಿದ ಭಕ್ತರು ದೇವರ ದರ್ಶನ ಪಡೆದು ಪುನೀತರಾದರು.

ಹೊಸ ವರ್ಷದಲ್ಲಿ ತಮ್ಮೆಲ್ಲಾ ಆಸೆಗಳು ಈಡೇರಲಿ ಎಂದು ಪ್ರಾರ್ಥಿಸಿ ವಿಶೇಷ ಪೂಜೆ ಸಲ್ಲಿಕೆ ಮಾಡಿದರು. ಹಲವು ದೇಗುಲಗಳಲ್ಲಿ ಭಕ್ತರಿಗೆ ಪ್ರಸಾದ ವಿನಿಯೋಗ ವ್ಯವಸ್ಥೆ ಮಾಡಲಾಗಿತ್ತು. ನಗರದ ಶಿವ, ವೆಂಕಟೇಶ್ವರ ದೇಗುಲಗಳಲ್ಲಿ ಜನಸಂದಣಿ ಕಂಡುಬಂತು. ವಿಜಯನಗರದ ಯೋಗಾ ನರಸಿಂಹ ದೇಗುಲದಲ್ಲಿ 2 ಲಕ್ಷ ಭಕ್ತರಿಗೆ ತಿರುಪತಿ ಮಾದರಿ ಲಡ್ಡು ವಿತರಣೆ ಮಾಡಲಾಯಿತು.

ಮೈಸೂರಿನ ಚಾಮುಂಡಿ ಬೆಟ್ಟಕ್ಕೆ ಅಪಾರ ಸಂಖ್ಯೆಯ ಭಕ್ತರು ಆಗಮಿಸಿದ್ದರು. ಹೊಸ ವರ್ಷದ ಮೊದಲ ದಿನವಾದ ಗುರುವಾರ ತಾಯಿ ಚಾಮುಂಡಿ ದರ್ಶನ ಮಾಡಿದರೆ ಒಳಿತಾಗುತ್ತದೆ ಎಂಬುದು ಭಕ್ತರ ನಂಬಿಕೆ. ಹೀಗಾಗಿ, ಅಪಾರ ಸಂಖ್ಯೆಯ ಭಕ್ತರು ಬೆಳಗ್ಗೆಯಿಂದಲೇ ತಾಯಿ ಚಾಮುಂಡಿ ದರ್ಶನ ಪಡೆದರು. ನಟ ದರ್ಶನ್ ಪತ್ನಿ ವಿಜಯಲಕ್ಷ್ಮಿ ಚಾಮುಂಡಿ ಪುಟ 2ಕ್ಕೆ

### 2 ಲಕ್ಷ ಲಾಡು ವಿತರಣೆ

**ಮೈಸೂರು:** ನಗರದ ವಿಜಯನಗರದ ಯೋಗ ನರಸಿಂಹಸ್ವಾಮಿ ದೇವಾಲಯದಲ್ಲಿ ಬೆಳಿಗ್ಗೆ 4 ರಿಂದಲೇ ವಿಶೇಷವಾಗಿ ಲಾಡು ವಿತರಿಸುವ ಕಾರ್ಯ ಆರಂಭವಾಯಿತು. ದೇವಾಲಯದ ಸಂಸ್ಥಾಪಕರಾದ ಭಾಷ್ಯಂ ಸ್ವಾಮೀಜಿ ನೇತೃತ್ವದಲ್ಲಿ ಬೆಳಿಗ್ಗೆ ದೇವರಿಗೆ ವಿಶೇಷಪೂಜೆ, ಅರ್ಚನೆ ಹಾಗೂ ಅಭಿಷೇಕದ ಮೂಲಕ ಲಾಡು ವಿತರಣೆಗೆ ಚಾಲನೆ ನೀಡಲಾಯಿತು. ದೇವಾಲಯದಿಂದ ಆಚೆಗೂ ಉದ್ದನೆಯ ಪುಟ 2ಕ್ಕೆ

### ಅರಮನೆ ಆವರಣದಲ್ಲಿ ಸಂಭ್ರಮ

ಮೈಸೂರು ಅರಮನೆ ಆವರಣದಲ್ಲಿ ರಾತ್ರಿ ಅರಮನೆ ಬ್ಯಾಂಡ್, ಇಂಗ್ಲಿಷ್ ವಾದನದ ಸದ್ದಿಗೆ ಜನರು ತಲೆದೂಗಿದರು. ತಡರಾತ್ರಿ ಅರಮನೆ ಮುಂಭಾಗ 15 ನಿಮಿಷಕ್ಕೂ ಹೆಚ್ಚು ಕಾಲ ಬಾನಲ್ಲಿ ಹಸಿರು ಪಟಾಕಿ ಸಿಡಿಸಿ ಚಿತ್ತಾರ ಮೂಡಿಸಲಾಯಿತು. ಹೊಸ ಪುಟ 2ಕ್ಕೆ

# 2027ಕ್ಕೆ ಮೊದಲ ಬುಲೆಟ್ ರೈಲು

## ಸೂರತ್‌ನಿಂದ ಬಿಲಿಮೋರಾವರೆಗೆ ಸಂಚಾರ: ಸಚಿವ ಅಶ್ವಿನಿ ವೈಷ್ಣವ್

**ನವದೆಹಲಿ:** ದೇಶದ ಮೊದಲ ಬುಲೆಟ್ ರೈಲು 2027ರ ಆಗಸ್ಟ್ 15ರಂದು ಸಂಚಾರ ಆರಂಭಿಸಲಿದೆ ಎಂದು ಕೇಂದ್ರ ರೈಲ್ವೇ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಮೊದಲು ಸೂರತ್‌ನಿಂದ ಬಿಲಿಮೋರಾವರೆಗೆ ಸಂಚರಿಸಲಿದೆ. ನಂತರ ವಾಪಿಯಿಂದ ಸೂರತ್‌ವರೆಗೆ, ನಂತರದ ಹಂತದಲ್ಲಿ ಅಹಮದಾಬಾದ್, ಥಾಣೆ, ಕೊನೆಗೆ ಮುಂಬೈನಿಂದ ಅಹಮದಾಬಾದ್‌ವರೆಗೆ ಸಂಚರಿಸಲಿದೆ ಎಂದು ಹೇಳಿದರು.

ಮೊದಲ ವಂದೇ ಭಾರತ್ ಸ್ಲೀಪರ್ ರೈಲು ಗುವಾಹಟಿ– ಕೋಲ್ಕತ್ತಾ ಮಾರ್ಗದಲ್ಲಿ ಸಂಚರಿಸಲಿದೆ. ಮುಂದಿನ ದಿನಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಈ ಸೇವೆಗೆ ಚಾಲನೆ ನೀಡಲಿದ್ದಾರೆ ಎಂದು ತಿಳಿಸಿದರು.

ಹೊಸ ಸೇವೆಯು ಪ್ರಯಾಣಿಕರಿಗೆ ಮಾತ್ರವಲ್ಲದೆ ಕುಟುಂಬಗಳು, ವಿದ್ಯಾರ್ಥಿಗಳು ಮತ್ತು ಎರಡು ಪ್ರಮುಖ ನಗರಗಳ ನಡುವೆ ವೇಗವಾಗಿ ಮತ್ತು ಹೆಚ್ಚು ವಿಶ್ವಾಸಾರ್ಹ ರಾತ್ರಿ ಪ್ರಯಾಣವನ್ನು ಬಯಸುವ ಪ್ರವಾಸಿಗರಿಗೆ ಪ್ರಯೋ



ಜನ ಸಿಗಲಿದೆ ಎಂದರು.

ವಂದೇ ಭಾರತ್ ಸ್ಲೀಪರ್ ರೈಲು ಒಟ್ಟು 16 ಬೋಗಿಗಳನ್ನು ಒಳಗೊಂಡಿರುತ್ತದೆ, ಇದರಲ್ಲಿ 11 ಮೂರು ಹಂತದ ಎಸಿ ಕೋಚ್‌ಗಳು, 4 ಎರಡು ಹಂತದ ಎಸಿ ಕೋಚ್‌ಗಳು ಮತ್ತು 1 ಮೊದಲ ಎಸಿ ಕೋಚ್ ಸೇರಿವೆ. ಈ ರೈಲು ಒಟ್ಟು 823 ಪ್ರಯಾಣಿಕರ ಸಾಮರ್ಥ್ಯವನ್ನು ಹೊಂದಿದ್ದು 3 ಟಯರ್ ಎಸಿಯಲ್ಲಿ 611, 2 ಟಯರ್ ಎಸಿಯಲ್ಲಿ 188 ಮತ್ತು 1 ಟಯರ್ ಎಸಿಯಲ್ಲಿ 24 ಪುಟ 2ಕ್ಕೆ

### ಬೆಂಗಳೂರು–ಮಂಗಳೂರು ನಡುವೆ ವಂದೇ ಭಾರತ್ ರೈಲು: ಸೋಮಣ್ಣ

**ಮಂಗಳೂರು:** ಬೆಂಗಳೂರು–ಮಂಗಳೂರು ನಡುವೆ ಬಹುನಿರೀಕ್ಷಿತ ಸೆಮಿ ಹೈಸ್ಪೀಡ್ ರೈಲು ಸೇವೆ ಆರಂಭವಾಗಲಿದೆ. ವಂದೇ ಭಾರತ್ ಸೇವೆಯನ್ನು ಬೆಂಗಳೂರು–ಮಂಗಳೂರು ಮಾರ್ಗದಲ್ಲಿ ಓಡಿಸಲು ಯೋಜಿಸಲಾಗಿದೆ ಎಂದು ಕೇಂದ್ರ ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದರು.



ಸಕಲೇಶಪುರ–ಸುಬ್ರಹ್ಮಣ್ಯ ರಸ್ತೆ ಘಾಟ್ ವಿಭಾಗದ ವಿದ್ಯುದ್ದೀಕರಣ ಕಾರ್ಯ ಪೂರ್ಣಗೊಳಿಸಿದೆ. ಇದು ರೈಲ್ವೆ ಜಾಲದ ಅತ್ಯಂತ ಪುಟ 2ಕ್ಕೆ

# ಭರ್ಜರಿ ಕಿಕ್ಕೇರಿಸಿದ ಹೊಸ ವರ್ಷಾಚರಣೆ!

### ಡಿ.30ರಂದು 261 ಕೋಟಿ, 31ರಂದು 204 ಕೋಟಿ ರೂ. ಆದಾಯ

ಬೆಂಗಳೂರು: ರಾಜ್ಯ ಸರ್ಕಾರಕ್ಕೆ ಹೊಸ ವರ್ಷಾಚರಣೆ ಹಿನ್ನೆಲೆಯಲ್ಲಿ ಮದ್ಯ ಮಾರಾಟದಿಂದ ಭರ್ಜರಿ ಆದಾಯ ಸಂಗ್ರಹವಾಗಿದೆ. ಕಳೆದ ವರ್ಷಕ್ಕೆ ಹೋಲಿಸಿದರೆ ಈ ವರ್ಷ ಡಿಸೆಂಬರ್‌ನಲ್ಲಿ 454.58 ಕೋಟಿ ರೂ. ಹೆಚ್ಚು ಅಬಕಾರಿ ಆದಾಯ ಬಂದಿದೆ.

2024ರ ಡಿ.30ರಂದು 154.04 ಕೋಟಿ ರೂ., ಡಿ.31ರಂದು 266.73 ಕೋಟಿ ರೂ. ಆದಾಯ ಸಂಗ್ರಹವಾಗಿತ್ತು. ಆದರೆ ಈ ಬಾರಿ ಡಿ.30ರಂದು 261.09 ಕೋಟಿ ರೂ., ಡಿ.31ರಂದು 204.10 ಕೋಟಿ ರೂ. ಆದಾಯ ಸಂಗ್ರಹವಾಗಿದೆ. 2024ರ ಡಿಸೆಂಬರ್ ತಿಂಗಳಿನಲ್ಲಿ 3,104 ಕೋಟಿ ರೂ. ಆದಾಯ ಸಂಗ್ರಹವಾಗಿತ್ತು. ಈ ವರ್ಷ ಬರೋಬ್ಬರಿ 3,559.08 ಕೋಟಿ ರೂ. ಆದಾಯ ಸಂಗ್ರಹವಾಗಿದೆ.

ಕಳೆದ ವರ್ಷಕ್ಕೆ ಹೋಲಿಕೆ ಮಾಡಿದರೆ ಈ ವರ್ಷ 1.59 ಲಕ್ಷ ಬಾಕ್ಸ್ ಐಎಂಎಲ್ ಹೆಚ್ಚುವರಿಯಾಗಿ ಮಾರಾಟವಾಗಿದೆ. ಕಳೆದ ವರ್ಷಕ್ಕೆ ಹೋಲಿಕೆ ಮಾಡಿದರೆ ಈ ವರ್ಷ ಐಎಂಎಲ್ ಮತ್ತು ಬಿಯರ್ ವ್ಯಾಪಾರದಿಂದ ಅಬಕಾರಿ ಇಲಾಖೆಗೆ ಹೆಚ್ಚುವರಿಯಾಗಿ 166.74 ಕೋಟಿ ರೂ. ಆದಾಯ ಬಂದಿದೆ.

## ಮೆಟ್ರೋಗೆ ಒಂದೇ ದಿನ 3.08 ಕೋಟಿ ಆದಾಯ



**ಬೆಂಗಳೂರು:** ಹೊಸ ವರ್ಷದ ಹಿನ್ನೆಲೆಯಲ್ಲಿ ಡಿ.31ರಂದು ಒಂದೇ ದಿನ 8.93 ಲಕ್ಷ ಜನರು ನಮ್ಮ ಮೆಟ್ರೋದಲ್ಲಿ ಪ್ರಯಾಣಿಸಿದ್ದಾರೆ. 3.08 ಕೋಟಿ ರೂ. ಆದಾಯ ಸಂಗ್ರಹವಾಗಿದೆ.

ಹೊಸ ವರ್ಷಾಚರಣೆ ಹಿನ್ನೆಲೆ ಬಿಎಂಆರ್‌ಸಿಎಲ್ ಮೂರು ಮಾರ್ಗಗಳಾದ ನೇರಳೆ, ಹಸಿರು ಹಾಗೂ ಹಳದಿ ಮೆಟ್ರೋ ರೈಲುಗಳ ಸೇವಾ ಪುಟ 2ಕ್ಕೆ

## ಅರ್ಹರಿಗೆ ಮಾತ್ರ ಮನೆ

**ಬೆಂಗಳೂರು:** ಕೋಗಿಲು ಲೇಔಟ್‌ನಲ್ಲಿ ಅಕ್ರಮ ಶೆಡ್ ತೆರವು ಹಿನ್ನೆಲೆ ನಿರಾಶ್ರಿತರಿಗೆ ಮನೆ ಕೊಡಲು ರಾಜ್ಯ ಸರ್ಕಾರ ಮುಂದಾಗಿದ್ದು, ನಿರಾಶ್ರಿತರಿಗೆ ನಾಳೆಯೇ ಜಿಬಿಎ, ರಾಜೀವ್ ಗಾಂಧಿ ವಸತಿ ನಿಗಮದಿಂದ ಮನೆಗಳ ವಿತರಣೆಗೆ ಮಾಡಲಿದೆ ಎನ್ನಲಾಗಿದೆ.



ಈ ಕುರಿತು ಮಾತನಾಡಿರುವ ನಗರಾಭಿವೃದ್ಧಿ ಇಲಾಖೆ ಸಚಿವ ಭೈರತಿ ಸುರೇಶ್, ಸ್ಥಳೀಯರು ಅರ್ಹರಿಗೆ ಮಾತ್ರ ಮನೆ ಕೊಡುತ್ತೇವೆ. ಈಗಾಗಲೇ ಪರಶೀಲನೆ ನಡೆಸಲಾಗಿದ್ದು, ಪರಿಶೀಲನೆ ವೇಳೇ 90 ಜನ ಮಾತ್ರ ಸ್ಥಳೀಯರಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ. ಈ 90 ಫಲಾನುಭವಿಗಳಿಗೆ ಮಾತ್ರ ಮನೆ ನೀಡುತ್ತೇವೆ ಎಂದು ತಿಳಿಸಿದ್ದಾರೆ.

## 6 ತಿಂಗಳು ಮುಷ್ಕರ ನಿಷೇಧ: ಸಾರಿಗೆ ನೌಕರರಿಗೆ ಸರ್ಕಾರ ಶಾಕ್

**ಬೆಂಗಳೂರು:** ರಾಜ್ಯ ಸರ್ಕಾರ ಸಾರಿಗೆ ನೌಕರರಿಗೆ ಹೊಸ ವರ್ಷದ ಮೊದಲ ದಿನವೇ ಶಾಕ್ ನೀಡಿದೆ. 2026ರ ಜ.1ರಿಂದ ಅನ್ವಯವಾಗುವಂತೆ 6 ತಿಂಗಳವರೆಗೆ ಮುಷ್ಕರ ಮಾಡದಂತೆ ಸರ್ಕಾರ ಸಾರಿಗೆ ನೌಕರರಿಗೆ ಅಧಿಸೂಚನೆ ಹೊರಡಿಸಿದೆ. ಯಾವುದೇ ಸಂದರ್ಭದಲ್ಲಿಯೂ ಕೂಡ ಮುಷ್ಕರ ಮಾಡದಂತೆ ಸೂಚನೆ ನೀಡಿದೆ.

ಇದಕ್ಕೂ ಮುನ್ನ ನೀಡಿದ್ದ ಅಧಿಸೂಚನೆ 2025ರ ಡಿ.31ಕ್ಕೆ ಕೊನೆಯಾದ ಹಿನ್ನೆಲೆ ಈಗ ಮುಷ್ಕರ ನಿರ್ಬಂಧಿಸಿ ಆದೇಶ ಹೊರಡಿಸಿದೆ. ಸರ್ಕಾರದ ಆದೇಶ ಉಲ್ಲಂಘಿಸಿದಲ್ಲಿ ಎಸ್ಮಾ ಜಾರಿ ಮಾಡಲಾಗುವುದು ಎಂದು ಎಚ್ಚರಿಕೆ ನೀಡಿದೆ. ಆದೇಶದ ಪ್ರತಿಯನ್ನು ಸಂಸ್ಥೆಯ ಎಲ್ಲಾ ಘಟಕಗಳು ಹಾಗೂ ನೌಕರರ ಗಮನಕ್ಕೆ ತರುವಂತೆ ಸೂಚನೆ ನೀಡಲಾಗಿದೆ. ಸಾರಿಗೆ ನೌಕರರು ತಮ್ಮ ವಿವಿಧ ಬೇಡಿಕೆ ಈಡೇರಿಸುವಂತ ಆಗ್ರಹಿಸಿ ಹೊಸ ವರ್ಷದಲ್ಲಿ ಮುಷ್ಕರ ನಡೆಸುವುದಾಗಿ ಘೋಷಣೆ ಮಾಡಿದ್ದರು.

## ಫೆ.1ರಿಂದ ತಂಬಾಕು ಉತ್ಪನ್ನಗಳ ಜಿಎಸ್‌ಟಿ ಏರಿಕೆ

**ನವದೆಹಲಿ:** ಫೆಬ್ರವರಿ 1ರಿಂದ ತಂಬಾಕು ಉತ್ಪನ್ನಗಳ ಮೇಲೆ ಹೆಚ್ಚುವರಿ ಅಬಕಾರಿ ಸುಂಕ ಮತ್ತು ಪಾನ್ ಮಸಾಲಾ ಮೇಲೆ ಹೊಸ ಸೆಸ್ ವಿಧಿಸಲಾಗುವುದು ಎಂದು ಕೇಂದ್ರ ಸರ್ಕಾರ ಅಧಿಸೂಚನೆ ಹೊರಡಿಸಿದೆ.

ತಂಬಾಕು ಮತ್ತು ಪಾನ್ ಮಸಾಲಾ ಮೇಲಿನ ಹೊಸ ಸುಂಕಗಳು ಜಿಎಸ್‌ಟಿ ದರಕ್ಕಿಂತ ಹೆಚ್ಚಿರುತ್ತವೆ. ಸರಕುಗಳ ಮೇಲೆ ಪ್ರಸ್ತುತ ವಿಧಿಸಲಾಗುತ್ತಿರುವ ಪರಿಹಾರ ಸೆಸ್ ಅನ್ನು ಬದಲಾಯಿಸುತ್ತವೆ. ಫೆ.1ರಿಂದ ಪಾನ್ ಮಸಾಲಾ, ಸಿಗರೇಟ್, ತಂಬಾಕು ಮತ್ತು ಅಂತಹುದೇ ಉತ್ಪನ್ನಗಳಿಗೆ ಶೇ. 40ರಷ್ಟು ಜಿಎಸ್‌ಟಿ ದರ ಇರಲಿದೆ. ಬೀಡಿಗಳಿಗೆ ಶೇ.18ರಷ್ಟು ಸರಕು ಮತ್ತು ಸೇವಾ ತೆರಿಗೆ (ಜಿಎಸ್‌ಟಿ) ಬೀಳಲಿದೆ ಎಂದು ಸರ್ಕಾರಿ ಅಧಿಸೂಚನೆಯಲ್ಲಿ ತಿಳಿಸಿದೆ.

ಪಾನ್ ಮಸಾಲಾ ಮೇಲೆ ಆರೋಗ್ಯ ಮತ್ತು




ರಾಷ್ಟ್ರೀಯ ಭದ್ರತಾ ಸೆಸ್ ವಿಧಿಸಲಾಗುವುದು. ಆದರೆ ತಂಬಾಕು ಮತ್ತು ಸಂಬಂಧಿತ ಉತ್ಪನ್ನಗಳ ಮೇಲೆ ಹೆಚ್ಚುವರಿ ಅಬಕಾರಿ ಸುಂಕವನ್ನು ವಿಧಿಸುತ್ತವೆ.

ಡಿಸೆಂಬರ್‌ನಲ್ಲಿ ಸಂಸತ್, ಪಾನ್ ಮಸಾಲಾ ತಯಾರಿಕೆಯ ಮೇಲೆ ಹೊಸ ಆರೋಗ್ಯ ಮತ್ತು ರಾಷ್ಟ್ರೀಯ ಭದ್ರತಾ ಸೆಸ್ ಹಾಗೂ ತಂಬಾಕಿನ ಮೇಲಿನ ಅಬಕಾರಿ ಸುಂಕವನ್ನು ವಿಧಿಸಲು ಅನುಮತಿಸುವ ಎರಡು ಮಸೂದೆಗಳನ್ನು ಅಂಗೀಕರಿಸಿತ್ತು.

## ವಾಣಿಜ್ಯ ಗ್ಯಾಸ್ ಸಿಲಿಂಡರ್ ಬೆಲೆ 111 ರೂ. ಏರಿಕೆ

**ನವದೆಹಲಿ:** ಹೊಸ ವರ್ಷದ ಮೊದಲ ದಿನವೇ ವಾಣಿಜ್ಯ ಬಳಕೆ ಎಲ್‌ಪಿಜಿ ಗ್ಯಾಸ್ ಸಿಲಿಂಡರ್ ದರ ಗಣನೀಯವಾಗಿ ಏರಿಕೆಯಾಗಿದೆ. ದಿಢೀರ್ ಆಗಿ 111 ರೂ. ಹೆಚ್ಚಳ ಮಾಡಲಾಗಿದೆ.




19 ಕೆ.ಜಿ ವಾಣಿಜ್ಯ ಸಿಲಿಂಡರ್ ದರವನ್ನು 111 ರೂ. ಹೆಚ್ಚಿಸಲಾಗಿದ್ದು, ಹೋಟೆಲ್, ರೆಸ್ಟೋರೆಂಟ್, ಕ್ಯಾಟರಿಂಗ್ ಸೇವೆ ಮತ್ತು ಸಣ್ಣ ವ್ಯಾಪಾರಗಳ ಮೇಲೆ ಪರಿಣಾಮ ಬೀರಲಿದೆ.

ದೆಹಲಿ– ಎನ್‌ಸಿಆರ್ ಪ್ರದೇಶದಲ್ಲಿ ಗೃಹ ಬಳಕೆ ಪೈಪ್ಡ್ ನೈಸರ್ಗಿಕ ಅನಿಲ ದರವನ್ನು ಪ್ರತಿ ಸ್ಟ್ಯಾಂಡರ್ಡ್ ಕ್ಯೂಬಿಕ್ ಮೀಟರ್‌ಗೆ 0.70 ಪೈಸೆ ಇಳಿಕೆ ಮಾಡಲಾಗಿದೆ. ಗೃಹ ಬಳಕೆಯ 14.2 ಕೆ.ಜಿ. ಎಲ್‌ಪಿಜಿ ಸಿಲಿಂಡರ್ ದರಗಳಲ್ಲಿ ಯಾವುದೇ ಬದಲಾವಣೆಯಿಲ್ಲ. ಭಾರತೀಯ ತೈಲ ಕಂಪನಿಗಳಾದ ಇಂಡಿಯನ್ ಪುಟ 2ಕ್ಕೆ

## ಕೋಗಿಲು ಲೇಔಟ್ ಮಿನಿ ಬಾಂಗ್ಲಾ: ತನಿಖೆಗೆ ಅಶ್ವಥ್ ನಾರಾಯಣ ಆಗ್ರಹ

**ಬೆಂಗಳೂರು:** ಕೋಗಿಲು ಲೇಔಟ್‌ನಲ್ಲಿ ವಾಸಿಸುತ್ತಿದ್ದ ಎಲ್ಲರೂ ಬಾಂಗ್ಲಾ ದೇಶದವರೇ. ಅಕ್ರಮವಾಗಿ ನುಸುಳಿ ರಾಜ್ಯಕ್ಕೆ ಬಂದಿದ್ದಾರೆ. ಈ ಬಗ್ಗೆ ಸರ್ಕಾರ ತನಿಖೆ ಮಾಡಿಸಬೇಕು ಎಂದು ಮಾಜಿ ಡಿಸಿಎಂ ಅಶ್ವಥ್ ನಾರಾಯಣ ಆಗ್ರಹಿಸಿದರು.



ಕೋಗಿಲು ಲೇಔಟ್ ಅಕ್ರಮ ನಿವಾಸಿಗಳಿಗೆ ಮನೆ ಕೊಡುವ ವಿಚಾರಕ್ಕೆ ವಿಧಾನ ಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಕರ್ನಾಟಕದಲ್ಲಿ 25 ಲಕ್ಷಕ್ಕಿಂತ ಜಾಸ್ತಿ ಬಾಂಗ್ಲಾ ದೇಶದವರು ಇದ್ದಾರೆ. ಸರ್ಕಾರ ಹೌದೋ ಇಲ್ಲವೋ ಅಂತ ಸ್ಪಷ್ಟಪಡಿಸಲಿ. ಬಾಂಗ್ಲಾ ದೇಶದವರು ಇಲ್ಲಿ ಇರೋದು ದೊಡ್ಡ ರಾಕೆಟ್. ರಾಜ್ಯ ಸರ್ಕಾರ ಕರ್ನಾಟಕದಲ್ಲಿ ಆತಂಕ ಸ್ಥಿತಿ ನಿರ್ಮಾಣ ಮಾಡುತ್ತಿದೆ. ಇದರ ಬಗ್ಗೆ ಸರ್ಕಾರಕ್ಕೆ ಮಾಹಿತಿ ಇದೆ. ಸರ್ಕಾರ ಬಾಂಗ್ಲಾ ದೇಶದವರ ಬಗ್ಗೆ ಮಾತಾಡಲಿ. ಅದು ಬಿಟ್ಟು ನಾಟಕ ಮಾಡ್ತಾ ಇದ್ದಾರೆ. ಕೋಗಿಲು ಲೇಔಟ್‌ನಲ್ಲಿ ಇರೋರು ನಮ್ಮ ದೇಶದವರೇ ಅಲ್ಲ ಎಂದು ಆರೋಪಿಸಿದರು.

ಬಾಂಗ್ಲಾ ದೇಶವರು ಆಧಾರ್ ಕಾರ್ಡ್ ಸೇರಿದಂತೆ ಎಲ್ಲಾ ದಾಖಲಾತಿ ಮಾಡಿಸಿಕೊಂಡಿದ್ದಾರೆ. ಈ ನುಸುಳುಕೋರರನ್ನ ಹಿಡಿದು ವಾಪಸ್ ಬಾಂಗ್ಲಾದೇಶಕ್ಕೆ ಕಳಿಸುವ ಕೆಲಸವನ್ನು ಸರ್ಕಾರ ಮಾಡಬೇಕು. ಬೆಂಗಳೂರಿನಲ್ಲಿ ಮಿನಿ ಬಾಂಗ್ಲಾದೇಶ ನಿರ್ಮಾಣ ಮಾಡ್ತಾ ಇದ್ದಾರೆ.

ಈ ರಾಕೆಟ್ ಹಿಂದೆ ಯಾರಿದ್ದಾರೆ. ವಾಸೀಂ ಹಿಂದೆ ಯಾರಿದ್ದಾರೆ. ಈ ಜಾಲದ ಬಗ್ಗೆ ತನಿಖೆ ಆಗಬೇಕು ಎಂದು ಆಗ್ರಹಿಸಿದರು.

# ಇಸ್ಲಾಮೀಕರಣಕ್ಕೆ ಸಚಿವ ಜಮೀರ್ ಯತ್ನ

## ಸಿದ್ದರಾಮಯ್ಯ ಮುಸ್ಲಿಮರ ತುಷ್ಟೀಕರಣ ಪರಾಕಾಷ್ಠೆ: ಯತ್ನಾಳ್ ವಾಗ್ದಾಳಿ

**ಬೆಂಗಳೂರು:** ಸಚಿವ ಜಮೀರ್‌ಗೆ ದೇಶ, ರಾಜ್ಯದ ಹಿತಕ್ಕಿಂತ ತಮ್ಮ ಸಮುದಾಯದ ಜನಸಂಖ್ಯೆ, ಮತದಾರರು ಹೆಚ್ಚಾಗಬೇಕು ಅಂತ ಮನೆ ಕೊಡ್ತಿದ್ದಾರೆ ಎಂದು ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ವಾಗ್ದಾಳಿ ನಡೆಸಿದ್ದಾರೆ.



ಕೋಗಿಲು ಲೇಔಟ್ ಅಕ್ರಮ ನಿವಾಸಗಳಿಗೆ ಸರ್ಕಾರದಿಂದ ಮನೆ ಕೊಡ್ತಿರುವ ವಿಚಾರಕ್ಕೆ ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಅವರೆಲ್ಲಾ ಮುಸ್ಲಿಂ ಎಂಬ ಕಾರಣಕ್ಕೆ ಜಮೀರ್ ಮಾತಾಡ್ತಾ ಇದ್ದಾರೆ. ಈ ದೇಶವನ್ನು ಆದಷ್ಟು ಬೇಗ ಇಸ್ಲಾಂಮೀಕರಣ ಮಾಡಬೇಕು ಎಂಬುದನ್ನು ಬಿಟ್ಟರೆ, ಅವರ ತಲೆಯಲ್ಲಿ ಏನು ಇರಲ್ಲ. ದುರ್ದೈವ ಅಂದರೆ ಸಿದ್ದರಾಮಯ್ಯ ಅಂತಹವರಿಗೆ ಜಾತ್ಯಾತೀತ ಅನ್ನೋ



ಹೆಸರಿನಿಂದ ಮುಸ್ಲಿಂ ತುಷ್ಟೀಕರಣ ಮಾಡೋದು ಬಿಟ್ಟು ಬೇರೆ ಜನರ ಸಮಸ್ಯೆ ಗೊತ್ತಿಲ್ಲ ಎಂದು ಕಿಡಿಕಾರಿದರು.

ಸಿದ್ದರಾಮಯ್ಯ ಅವರ ಮುಸ್ಲಿಮರ ತುಷ್ಟೀಕರಣ ಪರಾಕಾಷ್ಠೆ ಮುಟ್ಟಿದೆ. ನಿಜವಾದ ಕನ್ನಡಿಗರು, ಮೂಲ ನಿವಾಸಿಗಳಿಗೆ ವಸತಿ ಕೊಡೋದು ಬಿಟ್ಟು ಕಾಂಗ್ರೆಸ್ ಹೈಕಮಾಂಡ್ ಸಿಎಂ, ಡಿಸಿಎಂಗೆ ವಾರ್ನಿಂಗ್ ಮಾಡಿದ್ದರಿಂದ ಅಕ್ರಮ ಬಾಂಗ್ಲಾ ನಿವಾಸಿಗಳಿಗೆ ಮನೆ ಪುಟ 2ಕ್ಕೆ

### ಯಾರು ಮೇಲಕ್ಕೆ ಹೋಗ್ತಾರೋ?

ಬಿಜೆಪಿಗೆ ವಾಪಸ್ ಬರ್ತಿರಾ? ಎಂಬ ಪ್ರಶ್ನೆಗೆ ಪ್ರತಿಕ್ರಿಯಿಸಿದ ಯತ್ನಾಳ್, ಬಿಜೆಪಿಗೆ ನಾನು ವಾಪಸ್ ಬರಬೇಕು ಅಂತ ಅನೇಕ ಶಾಸಕರ ಅಭಿಪ್ರಾಯ ಇದೆ. 2026 ಏನ್ ಆಗುತ್ತೋ ನೋಡಬೇಕು. ಯಾರಿಗೆ ಶುಭ ಸುದ್ದಿ, ಯಾರಿಗೆ ಅಶುಭ ಸುದ್ದಿ ಆಗುತ್ತೋ, ಯಾರು ಮನೆಗೆ ಹೋಗ್ತಾರೋ, ಯಾರು ಮೇಲೆ ಹೋಗ್ತಾರೋ ಗೊತ್ತಿಲ್ಲ ಎಂದು ಲೇವಡಿ ಮಾಡಿದರು.

ಅನೇಕ ಶಾಸಕರು ಬಿಜೆಪಿಗೆ ಬರಬೇಕು ಅಂತ ಹೇಳ್ತಿದ್ದಾರೆ. ಬೆಳಗಾವಿ ಅಧಿವೇಶನದಲ್ಲಿ ಶಾಸಕರು ಬಿಜೆಪಿಗೆ ಬರಬೇಕು ಅಂತ ಕೇಳಿದರು. ನಾನು ಬಿಜೆಪಿಗೆ ಹೋದರೆ ಜನ ದುಡ್ಡು ಇಲ್ಲದೆ ಸೇರುತ್ತಾರೆ ಎಂದು ತಿಳಿಸಿದರು.

ಮೊದಲ ಪುಟದಿಂದ

## ಮರ್ಯಾದಾ ಹತ್ಯೆ ತಡೆಗೆ ಕಾನೂನು

ನಡೆಸಲಾಗುವುದು. ತನಿಖಾ ವರದಿ ಬಂದ ಬಳಿಕ ತಪ್ಪು ಎಸಗಿದ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುವುದು. ಇದಕ್ಕೂ ಮಿಗಿಲಾದ ಘಟನೆ ನಡೆದಿರುವುದರಿಂದ ಕೊಲೆ ಆರೋಪಿಗಳ ವಿರುದ್ಧ ಕಠಿಣ ಕ್ರಮ ಜರುಗಿಸಲಾಗುವುದು ಎಂದು ಹೇಳಿದರು.

ಮುಖ್ಯಮಂತ್ರಿ ಹಾಗೂ ಗೃಹಸಚಿವರೊಂದಿಗೆ ಸಂತ್ರಸ್ತ ವಿವೇಕಾನಂದ ದೊಡ್ಡಮನಿ ಕುಟುಂಬಕ್ಕೆ ಹೆಚ್ಚಿನ ಭದ್ರತೆ ಒದಗಿಸಲು ಕೋರಲಾಗುವುದು. ಈ ತರಹದ ಘಟನೆಗಳು ಮರುಕಳಿಸದಂತೆ ಮುಂದೇನು ಮಾಡಬೇಕು ಎಂಬುದರ ಕುರಿತು ಚರ್ಚಿಸಲಾಗುವುದು ಎಂದರು. ಇನಾಂ ವೀರಪುರ ಗ್ರಾಮದ ನಿವಾಸಿ ಮಾನ್ಯ ವಿವೇಕಾನಂದ ದೊಡ್ಡಮನಿ (20 ವರ್ಷ) ಎಂಬ ಯುವತಿ, ದಲಿತ ಸಮುದಾಯದ ಯುವಕನನ್ನು ಪ್ರೀತಿಸಿ ಅಂತರ್ಜಾತಿ ವಿವಾಹವಾಗಿದ್ದರು. ಇದರಿಂದ ರೊಚ್ಚಿಗೆದ್ದ ತಂದೆ ಪ್ರಕಾಶ ಗೌಡ ಪಾಟೀಲ ಹಾಗೂ ಸಂಬಂಧಿಕರು ಡಿ.20ರಂದು ಏಳು ತಿಂಗಳ ಗರ್ಭಿಣಿಯನ್ನು ಭೀಕರವಾಗಿ ಕೊಲೆ ಮಾಡಿದ್ದರು.

## ಬೆಂಗಳೂರು–ಮಂಗಳೂರು ನಡುವೆ ವಂದೇ ಭಾರತ್ ರೈಲು: ಸೋಮಣ್ಣ

ಕಷ್ಟಕರವಾದ ಮಾರ್ಗಗಳಲ್ಲಿ ಒಂದಾಗಿದೆ. ಬೆಂಗಳೂರು–ಮಂಗಳೂರು ಮಾರ್ಗ ಈಗ ಸಂಪೂರ್ಣವಾಗಿ ವಿದ್ಯುದ್ದೀಕರಿಸಲ್ಪಟ್ಟಿದೆ. ಕರಾವಳಿಗೆ ಹೋಗುವ ಬೆಂಗಳೂರಿನ ಪ್ರಯಾಣಿಕರು ಶೀಘ್ರದಲ್ಲೇ ವೇಗ ಮತ್ತು ಹೆಚ್ಚು ಆರಾಮದಾಯಕ ರೈಲು ಪ್ರಯಾಣವನ್ನು ಆನಂದಿಸಬಹುದು ಎಂದು ಹೇಳಿದರು.

ವಿದ್ಯುದ್ದೀಕರಣ ಕಾರ್ಯವು ಡಿಸೆಂಬರ್ 2023ರಲ್ಲಿ ಪ್ರಾರಂಭವಾಯಿತು. ಇದೇ ಡಿಸೆಂಬರ್ ನಲ್ಲಿ ವಿದ್ಯುತ್ ಲೋಕೋಮೋಟಿವ್ ಪ್ರಯೋಗವನ್ನು ಯಶಸ್ವಿಯಾಗಿ ನಡೆಸಲಾಗಿದೆ. ವಂದೇ ಭಾರತ್ ಎಕ್ಸ್‌ಪ್ರೆಸ್ ಸೇರಿದಂತೆ ಆಧುನಿಕ ವಿದ್ಯುತ್ ರೈಲುಗಳ ಕಾರ್ಯಾಚರಣೆಯನ್ನು ಬೆಂಬಲಿಸುತ್ತದೆ.

ಈಗಾಗಲೇ ಮಂಗಳೂರು–ಬೆಂಗಳೂರು ವಂದೇ ಭಾರತ್ ಸೇವೆ ಅಂತಿಮವಾಗಿದೆ. ಕರ್ನಾಟಕದ ರಮಣೀಯ ಪಶ್ಚಿಮ ಘಟ್ಟಗಳ ಮೂಲಕ ಐಕಾನಿಕ್ ವಂದೇ ಭಾರತ್ ರೈಲುಗಳು ಶೀಘ್ರದಲ್ಲೇ ಓಡುವುದನ್ನು ಕಾಣಬಹುದು.

## ಇಸ್ಲಾಂಮೀಕರಣಕ್ಕೆ ಸಚಿವ ಜಮೀರ್ ಯತ್ನ

ಕೊಡುತ್ತಿದ್ದಾರೆ. ಅವರೆಲ್ಲಾ ಯಾವ ದೇಶದವರು ಅಂತ ತನಿಖೆ ಮಾಡದೇ ವೋಟ್ ಬ್ಯಾಂಕ್ ಸಲುವಾಗಿ ಸರ್ಕಾರ ಮನೆ ಕೊಡುವ ನಿರ್ಧಾರ ಮಾಡ್ತಿದೆ. ರಾಜ್ಯದಲ್ಲಿ ನುಸುಳುಕೋರರು, ಬಾಂಗ್ಲಾದೇಶದವರು, ರೋಹಿಂಗ್ಯಾಗಳು ಯಾರು ಇದ್ದಾರೆ ಅವರನ್ನ ತನಿಖೆ ಮಾಡಿ ಎಂದು ಆಗ್ರಹಿಸಿದರು.

ಉತ್ತರ ಕರ್ನಾಟಕದ ಜನ ಕೂಲಿ–ನಾಲಿ, ಜೀವನ ಮಾಡಲು ದಶಕಗಳಿಂದ ಬೆಂಗಳೂರು ಬಂದಿದ್ದಾರೆ. ಅವರಿಗೆ ಪುನರ್ ವಸತಿ ಕಲ್ಪಿಸಬೇಕು. ಆದರೆ ಕಾಂಗ್ರೆಸ್ ಹೈಕಮಾಂಡ್‌ಗೆ ತಲೆಬಾಗಿ ಕನ್ನಡಿಗರಿಗೆ ಅಪಮಾನ ಮಾಡುವ ಕೆಲಸ ಈ ಸರ್ಕಾರ ಮಾಡ್ತಿದೆ. ಅಕ್ರಮ ಬಾಂಗ್ಲಾದೇಶದವರ ಬಗ್ಗೆ ಕೇಂದ್ರ ಸರ್ಕಾರ ತನಿಖೆ ಶುರು ಮಾಡಿತ್ತು. ಈಗ ಯಾಕೆ ನಿಂತಿದೆ ಗೊತ್ತಿಲ್ಲ ಎಂದು ಹೇಳಿದರು.

## 2027ಕ್ಕೆ ಮೊದಲ ಬುಲೆಟ್ ರೈಲು

ಸೀಟ್ ಇರಲಿದೆ.

3 ಟಯರ್ ಎಸಿ ದರವು ಆಹಾರ ಸೇರಿದಂತೆ ಸುಮಾರು 2,300 ರೂ. ಆಗಿರುತ್ತದೆ. 2 ಟಯರ್ ಎಸಿ ದರವು ಸುಮಾರು 3,000 ರೂ. ಆಗುವ ನಿರೀಕ್ಷೆಯಿದ್ದರೆ, 1 ಟಯರ್ ಎಸಿ ದರ ಸುಮಾರು 3,600 ರೂ. ಆಗುವ ನಿರೀಕ್ಷೆಯಿದೆ. 2017ರ ಸೆಪ್ಟೆಂಬರ್ 14ರಂದು ಪ್ರಧಾನಿ ನರೇಂದ್ರ ಮೋದಿ ಹಾಗೂ ಜಪಾನ್ ಪ್ರಧಾನಿ ಶಿಂಜೋ ಅಬೆ ಅವರು ಭಾರತದ ಹೈ ಸ್ಪೀಡ್ ಬುಲೆಟ್ ರೈಲು ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿದ್ದರು.

## ವಾಣಿಜ್ಯ ಗ್ಯಾಸ್ ಸಿಲಿಂಡರ್ ಬೆಲೆ 111 ರೂ. ಏರಿಕೆ

ಆಯಿಲ್ ಕಾರ್ಪೊರೇಷನ್ ನೇತೃತ್ವದಲ್ಲಿ ಪ್ರತಿ ತಿಂಗಳ ಮೊದಲ ದಿನ ಎಲ್‌ಪಿಜಿ ದರಗಳನ್ನು ಪರಿಷ್ಕರಿಸಲಾಗುತ್ತದೆ. ಈ ಬಾರಿ ವಾಣಿಜ್ಯ ಸಿಲಿಂಡರ್‌ಗಳ ದರ ಏರಿಕೆಯಾಗಿದೆ.

## 2 ಲಕ್ಷ ಲಾಡು ವಿತರಣೆ

ಕ್ಯೂ ನಲ್ಲಿ ನಿಂತು ಲಕ್ಷಾಂತರ ಭಕ್ತರು ಸಿಹಿ ಲಾಡು ಪಡೆದರು. ಸ್ವಾಮೀಜಿ ಮಾತನಾಡಿ, ಪ್ರತಿ ವರ್ಷದಂತೆ ತಿರುಪತಿ ಮಾದರಿಯ ಲಾಡನ್ನು ವಿತರಿಸಿ ಹೊಸ ವರ್ಷವನ್ನು ಆರಂಭಿಸಲಾಗಿದೆ. ನಟ ದಿ. ರಾಜಕುಮಾರ್ ಪ್ರೇರಣೆಯಂತೆ ಈ ಕಾರ್ಯ ಬಹಳ ಹಿಂದಿನಿಂದಲೂ ನಡೆಸಿಕೊಂಡು ಬರಲಾಗುತ್ತಿದೆ ಎಂದು ಹೇಳಿದರು.

## ನಗರದಲ್ಲಿ ಹೊಸ ವರ್ಷದ ರಂಗು ದೇವಾಲಯಗಳಲ್ಲಿ ಭಕ್ತರ ದಂಡು

ಬೆಟ್ಟಕ್ಕೆ ತೆರಳಿ ದೇವರ ದರ್ಶನ ಪಡೆದರು. ಚಾಮುಂಡಿ ಬೆಟ್ಟದಲ್ಲಿ ದೇಗುಲದಿಂದ ಮಾತ್ರವಲ್ಲದೆ ಭಕ್ತರಿಂದಲೂ ಪ್ರಸಾದ ವಿನಿಯೋಗ ನಡೆಯಿತು.

ವರ್ಷಾರಂಭದ ಮೊದಲ ದಿನವಾದ್ದರಿಂದ ಚಾಮುಂಡಿ ಬೆಟ್ಟ, ಒಂಟಿಕೊಪ್ಪಲು ದೇವಾಲಯ, ಗುಂಡ್ಲುಪೇಟೆ ಹಿಮವದ್ ಗೋಪಾಲಸ್ವಾಮಿ ದೇವಾಲಯ, ನಿಮಿಷಾಂಭ ದೇವಾಲಯ, ಜಯನಗರದ ಇಸ್ಕಾನ್ ದೇವಾಲಯ ಮೊದಲಾದ ದೇವಾಲಯಗಳ ಕಡೆ ಭಕ್ತರ ದಂಡೇ ಹರಿದು ಬಂದಿತು. ಸಫಾರಿ ಬಂದ್ ಆಗಿದ್ದ ಹಿನ್ನೆಲೆಯಲ್ಲಿ ಅರಮನೆ, ಮೃಗಾಲಯ, ರಂಗನತಿಟ್ಟು ಪಕ್ಷಿಧಾಮ ಸೇರಿದಂತೆ ಎಲ್ಲಾ ಕಡೆ ಜನವೋ ಜನ ಸಾಗರವೇ ನೆರೆದಿತ್ತು. ಚಾಮುಂಡಿ ಬೆಟ್ಟದಲ್ಲಿ ಸಂಪೂರ್ಣ ಟ್ರಾಫಿಕ್ ಜಾಮ್ ಉಂಟಾಗಿ ದೇವಾಲಯ ಪ್ರವೇಶಕ್ಕೂ ಕೆಲವರು ಪರದಾಡಿದರು.

## ಹೊಸ ವರ್ಷದಲ್ಲಿ ರಾಜಕೀಯ ಬಡ್ತಿ!

ಒಂದು ಹೆಜ್ಜೆ ಮುಂದೆ ಹೋಗುವ ಬಯಕೆ ಇರುತ್ತದೆ. ಆದರೆ ಅದೆಲ್ಲವೂ ನಮ್ಮ ಹೈಕಮಾಂಡ್‌ಗೆ ಬಿಟ್ಟದ್ದು ಎಂದು ಹೇಳಿದರು.

ಪರಿಸ್ಥಿತಿ ನಿಮಗೆ ಅನುಕೂಲಕರವಾಗಿದೆಯೇ ಎಂದು ಕೇಳಿದಾಗ, ನೀವು (ಮಾಧ್ಯಮ) ಪರಿಸ್ಥಿತಿ ಯಾರಿಗೆ ಅನುಕೂಲಕರವಾಗಿದೆ ಮತ್ತು ಯಾರಿಗೆ ಅಲ್ಲ ಎಂಬುದನ್ನು ಪ್ರತಿದಿನ ಗಮನಿಸುತ್ತಿದ್ದೀರಿ ಎಂದು ಪರಮೇಶ್ವರ್ ಹೇಳಿದರು.

ರಾಜ್ಯದಲ್ಲಿ ನಾಯಕತ್ವ ಬದಲಾವಣೆ ಚರ್ಚೆ ದಿನಕ್ಕೊಂದು ತಿರುವು ಪಡೆದುಕೊಳ್ಳುತ್ತಿದೆ. ಈ ಹಿಂದೆ ಎರಡು ಅವಧಿಗೆ ರಾಜ್ಯ ಕಾಂಗ್ರೆಸ್ ಮುಖ್ಯಸ್ಥರಾಗಿ ಸೇವೆ ಸಲ್ಲಿಸಿದ್ದ ಹಿರಿಯ ನಾಯಕರಾದ ಪರಮೇಶ್ವರ್ ಅವರು, ಮುಖ್ಯಮಂತ್ರಿ ಹುದ್ದೆಯ ಬದಲಾವಣೆಯ ಬಗ್ಗೆ ತೀವ್ರ ಚರ್ಚೆ ನಡೆಯುತ್ತಿರುವಾಗ ತಾವು ಕೂಡ ಮುಖ್ಯಮಂತ್ರಿ ಹುದ್ದೆಯ ಸ್ಪರ್ಧೆಯಲ್ಲಿರುವುದಾಗಿ ಹೇಳಿದ್ದರು.

## ಮೆಟ್ರೋಗೆ ಒಂದೇ ದಿನ 3.08 ಕೋಟಿ ಆದಾಯ

ಸಮಯ ವಿಸ್ತರಿಸಿತ್ತು. 2025ರ ಡಿ.31ರಂದು ಬೆಳಿಗ್ಗೆ 5 ಗಂಟೆಯಿಂದ ಮಧ್ಯರಾತ್ರಿ 3.10ರವರೆಗೆ ಮೆಟ್ರೋ ರೈಲುಗಳು ಸಂಚರಿಸಿವೆ. ಈ ಅವಧಿಯಲ್ಲಿ 8,93,903 ಜನರು ಮೆಟ್ರೋದಲ್ಲಿ ಪ್ರಯಾಣಿಸಿದ್ದಾರೆ. ಒಂದೇ ದಿನದಲ್ಲಿ ಮೂರು ಮಾರ್ಗ ಒಟ್ಟಾಗಿ ಬರೋಬ್ಬರಿ 3.08 ಕೋಟಿ ರೂ. ಆದಾಯ ಹರಿದುಬಂದಿದೆ.

# ಪರಿಸರ ಜಾಗೃತಿಗಾಗಿ ಚಿತ್ತಾರ ಅಭಿಯಾನ



ಹಾಸನ: ಚಿತ್ಕಲಾ ಫೌಂಡೇಷನ್ ಹಾಗು ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಿಂದ ನಗರದ ಸತ್ಯಮಂಗಲ ಕೆರೆ ಆವರಣದಲ್ಲಿ ಗುರುವಾರ ಪರಿಸರ ಜಾಗೃತಿಗಾಗಿ ಚಿತ್ತಾರ ಅಭಿಯಾನ ಹಮಿಕೊಳ್ಳಲಾಗಿತ್ತು.

ಅಭಿಯಾನಕ್ಕೆ ಚಾಲನೆ ನೀಡಿದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಜೆ. ಆರ್.ಕೆಂಚೇಗೌಡ ಅವರು ಮಾತನಾಡಿ, ಚಿತ್ಕಲಾ ಫೌಂಡೇಷನ್ ಅಧ್ಯಕ್ಷ ಬಿ.ಎಸ್.ದೇಸಾಯಿ ಅವರು ಹಲವು ದಶಕಗಳಿಂದ ಚಿತ್ರಕಲಾ ಕೌಶಲದ ಮೂಲಕ ಪರಿಸರ ಜಾಗೃತಿ ಮೂಡಿಸುತ್ತಿದ್ದಾರೆ. ಚಿತ್ರಕಲಾ ಶಿಕ್ಷಕರಾಗಿ ಹಾಸನದಲ್ಲಿ ನೆಲೆಯೂರಿದ ಅವರು ಕಾರ್ಯಕ್ಷಮತೆಯ ಮೂಲಕ ಉತ್ತಮ ಕಲಾವಿದರಾಗಿ ಗುರುತಿಸಿಕೊಂಡಿದ್ದಾರೆ. ತಮದೇಯಾದ ಆತೀಯ ಬಳಗ ಸೃಷ್ಟಿಸಿ ಜಿಲ್ಲೆಯ ಪ್ರಾಕೃತಿಕ ಸ್ಥಳ, ಬೆಟ್ಟಗುಡ್ಡ, ಕೆರೆಕಟ್ಟೆಗಳನ್ನು ಸುತ್ತಾಡಿ ಕಲಾ ಕುಂಚದಿಂದ ವಿಶ್ವಕ್ಕೆ ಪರಿಚಯಿಸಿದ್ದಾರೆ. ಹುಣಸಿನಕೆರೆ ಹಾಗು ಅಲ್ಲಿಗೆ ವಿದೇಶಗಳಿಂದ ಬರುವ ಅಪರೂಪದ ಪಕ್ಷಿಗಳನ್ನು ಜಗತ್ತಿಗೆ ಪರಿಚಯಿಸಿದ ಕೀರ್ತಿ ದೇಸಾಯಿ ಅವರಿಗೆ ಸಲ್ಲುತ್ತದೆ. ನೂರಾರು ಮಕ್ಕಳಿಗೆ ಚಿತ್ರಕಲೆಯ ತರಬೇತಿ ನೀಡಿ ಉತ್ತಮ ಭವಿಷ್ಯ ಕಟ್ಟಿಕೊಟ್ಟಿದ್ದಾರೆ. ಬಿ.ಎಸ್.ದೇಸಾಯಿ ಅವರ ಪರಿಸರ ಪ್ರಿಯ ಕಾರ್ಯಗಳಿಗೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಬೆಂಬಲವಾಗಿ ಇರುತ್ತದೆಂದರು.

ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ ಅವರ ಮಾತನಾಡಿ, ಜನರಲ್ಲಿ ಪರಿಸರ ಜಾಗೃತಿ ಮೂಡಿಸಲು ಕಾರ್ಯಕ್ರಮ ಹಮಿಕೊಳ್ಳಲಾಗಿದೆ. ಬಿ.ಎಸ್.ದೇಸಾಯಿ ಅಂತಹ ವ್ಯಕ್ತಿ ನಮ ಜಿಲ್ಲೆಗೆ ಸಿಕ್ಕಿದ್ದು ಸೌಭಾಗ್ಯ. ಸ್ವಾರ್ಥಕ್ಕಾಗಿ ಏನನ್ನೂ ಮಾಡದೆ ಸಮಾಜಮುಖಿ ಕೆಲಸಗಳ ಮೂಲಕ ಗುರುತಿಸಿಕೊಂಡಿರುವ ಅವರು ಪರಿಸರ ಸಂರಕ್ಷಣೆಗೆ ತಮದೇಯಾದ ಕೊಡುಗೆ ನೀಡಿದ್ದಾರೆಯೆಂದರು.

ಪ್ರಾಕೃತಿಕವಾಗಿ ಶ್ರೀಮಂತವಾಗಿರುವ ಹಾಸನ ಜಿಲ್ಲೆಯಲ್ಲಿ ಪ್ರವಾಸೋದ್ಯಮ ಉತ್ತೇಜನಕ್ಕೆ ಕ್ರಮ ಕೈಗೊಳ್ಳಬೇಕೆಂದು ಸರ್ಕಾರಕ್ಕೆ ಆಗ್ರಹಿಸುತ್ತಲೇ ಬಂದಿದ್ದೇವೆ. ಆ ಕೆಲಸವನ್ನುಬಿ.ಎಸ್.ದೇಸಾಯಿ ಮೌನವಾಗಿ ಮಾಡುತ್ತಿದ್ದಾರೆ. ಹಲವಾರು ವಿದ್ಯಾರ್ಥಿಗಳಿಗೆ ಚಿತ್ರಕಲೆ ವಿದ್ಯೆ ಕಲಿಸಿ ಮಾದರಿಯಾಗಿದ್ದಾರೆಂದರು.

ಪತ್ರಕರ್ತರ ಸಂಘದ ಮಾಜಿ ಜಿಲ್ಲಾಧ್ಯಕ್ಷ ರವಿ ನಾಕಲಗೂಡು ಅವರು, ಬಿ.ಎಸ್.ದೇಸಾಯಿ ಅವರ ಕೊಡುಗೆಯನ್ನು ಸರಿಸಿದರು.

ಚಿತ್ಕಲಾ ಫೌಂಡೇಷನ್ ಅಧ್ಯಕ್ಷ ಬಿ.ಎಸ್. ದೇಸಾಯಿ ಅವರು ಮಾತನಾಡಿ, ಹಾಸನ ನೈಸರ್ಗಿಕವಾಗಿ ಶ್ರೀಮಂತ ಜಿಲ್ಲೆ. ಆದರೆ ಇತ್ತೀಚಿನ ದಿನಗಳಲ್ಲಿ ಇಲ್ಲಿಯೂ ಪರಿಸರ ಜಾಗೃತಿ ಮೂಡಿಸುವ ಅನಿವಾರ್ಯತೆ ಸೃಷ್ಟಿಯಾಗಿರುವುದು ವಿಷಾದನೀಯ. ಅಭಿವೃದ್ಧಿ ನೆಪದಲ್ಲಿ ಪರಿಸರವನ್ನು ಹಾಳು ಮಾಡುತ್ತಿದ್ದೇವೆ. ಈ ಸಂಬಂಧ ಸಾರ್ವಜನಿಕರಲ್ಲಿ ಅರಿವು ಮೂಡಿಸುವ ಉದ್ದೇಶದಿಂದ ಚಿತ್ಕಲಾ ಫೌಂಡೇಷನ್‌ನಿಂದ ಪ್ರತಿ ತಿಂಗಳ ಮೊದಲ ಭಾನುವಾರ ಜಿಲ್ಲಾದ್ಯಂತ ಕಾರ್ಯಕ್ರಮ ಹಮಿಕೊಳ್ಳಲು ನಿರ್ಧರಿಸಿದ್ದು ಅದಕ್ಕೆ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಕೈ ಜೋಡಿಸಿರುವುದು ಸಂತಸ ತಂದಿದೆಯೆಂದರು.

ಕನ್ನಡ ಸಾಹಿತ್ಯ ಪರಿಷತ್ ಮಾಜಿ ಜಿಲ್ಲಾಧ್ಯಕ್ಷ ಉದಯರವಿ, ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್, ಶಶಿಕಲಾ ದೇಸಾಯಿ, ಕಿಶೋರ ಕಲಾವಿದರಾದ ತನಿಷಾ, ಸಾನ್ವಿ, ಪೋಷಕರಾದ ಸವಿತಾ, ಮಂಜುಳಾ ಶಿವಕುಮಾರ್ ಹಾಗು ಇತರರಿದ್ದರು.

# ಕುಂಬಾರ, ನೇಕಾರ ಮೊದಲಾದ ಕಸುಬುಗಳು ಕಣ್ಮರೆ: ಡಾ.ತಿಮ್ಮಯ್ಯ

### ಕಿರುರಂಗ ಮಂದಿರದಲ್ಲಿ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ





ಮೈಸೂರು: ಇತ್ತೀಚೀನ ದಿನಗಳಲ್ಲಿ ಕುಂಬಾರ, ನೇಕಾರ ವೃತ್ತಿ ಸೇರಿದಂತೆ ಅನೇಕ ಕುಲ ಕಸುಬುಗಳು ಕಣ್ಮರೆಯಾಗುತ್ತಿದೆ. ಅವುಗಳನ್ನು ಮುಂದಿನ ಪೀಳಿಗೆಗೆ ತಲುಪಿಸವ ಕೆಲಸ ಮಾಡಬೇಕು ಎಂದು ವಿಧಾನ ಪರಿಷತ್ ಸದಸ್ಯ ಡಾ.ಡಿ.ತಿಮ್ಮಯ್ಯ ತಿಳಿಸಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಮೈಸೂರು ಮಹಾನಗರ ಪಾಲಿಕೆ ವತಿಯಿಂದ ಕಲಾಮಂದಿರದ ಆವರಣದಲ್ಲಿರುವ ಕಿರುರಂಗ ಮಂದಿರದಲ್ಲಿ ಆಯೋಜಿಸಿದ್ದ ವಿಶ್ವಕರ್ಮ ಅಮರ ಶಿಲ್ಪಿ ಜಕಣಾಚಾರಿ ಸಂಸ್ಮರಣಾ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು. ಅಮರ ಶಿಲ್ಪಿ ಜಕಣಾಚಾರಿ ಅವರು ಎಷ್ಟೇ ವರ್ಷವಾದರೂ ಅಮರವಾಗಿ ಇರುತ್ತಾರೆ. ಈಗ ನಾವು ಇರುವ ಕಲಿಯುಗದಲ್ಲಿ ಯಂತ್ರಗಳೇ ಎಲ್ಲವನ್ನು ನಿರ್ವಹಿಸುತ್ತವೆ. ಆದರೆ ಈ ಹಿಂದೆ ಕಲ್ಲಿನಲ್ಲಿ ಒಂದು ರೂಪ ಕೊಡುವುದು ಬಹಳ ಕಷ್ಟದ ಕೆಲಸವಾಗಿತ್ತು. ಆದರೆ, ಅಂದಿನ ಶಿಲ್ಪಿಗಳ ಶ್ರಮ, ಶ್ರದ್ದೆಯಿಂದಲೇ ಶಿಲ್ಪಕಲೆಯಲ್ಲಿ ಭಾರತವೇ ಶ್ರೇಷ್ಠವಾಗಿದೆ. ಅವರ ಕಲೆಗೆ ಬೆಲೆ ಕಟ್ಟಲು ಸಾಧ್ಯವಿಲ್ಲವೆಂದರು.

ಶಾಸಕ ಕೆ.ಹರೀಶ್‌ಗೌಡ ಮಾತನಾಡಿ, ಅಮರ ಶಿಲ್ಪಿ ಜಕಣಾಚಾರಿ ಅವರು ಸೂರ್ಯ ಚಂದ್ರ ಇರುವವರೆಗೂ ಇರುತ್ತಾರೆ. ಅವರ ಕೆತ್ತನೆ ಕಾರ್ಯಗಳು ಹಾಗೇ ಇದೆ. ವಿಶ್ವಕರ್ಮ ಸಮುದಾಯದವರು ಚಾಮರಾಜ ಕ್ಷೇತ್ರದಲ್ಲಿಯೇ 18 ಸಾವಿರ ಮತದಾರರಿದ್ದಾರೆ. ಅವರ ಮಕ್ಕಳನ್ನು ಸೇರಿದರೆ, 34 ಸಾವಿರಕ್ಕೂ ಹೆಚ್ಚಿದ್ದಾರೆ. ನಿಮ್ಮ ಬಗ್ಗೆ ನಮಗೆ ವಿಶೇಷ ಕಾಳಜಿ ಇದೆ. ಇಂದು ಎಲ್ಲರ ಕಸುಬು ಬದಲಾವಣೆ ಆಗಿದೆ. ಸಮುದಾಯ ಪ್ರಭಲವಾಗಬೇಕು ಎಂದರೆ ಕಾಲಕ್ಕ ತಕ್ಕಂತೆ ಬದಲಾಗಬೇಕು. ದಿನದಿಂದ ದಿನಕ್ಕೆ ಎಲ್ಲಾ ಕ್ಷೇತ್ರದಲ್ಲಿಯೂ ಪೈಪೋಟಿ ಹೆಚ್ಚಳವಾಗುತ್ತಿದೆ. ಅದಕ್ಕೆ ತಕ್ಕಂತೆ ಮಕ್ಕಳನ್ನು ಬೆಳೆಸಿ ಎಂದು ಸಲಹೆ ನೀಡಿದರು. ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಮಾತನಾಡಿ, ಇಂದು ಕಾರ್ಯಕ್ರಮಕ್ಕೆ ಜನ ಪ್ರತಿನಿಧಿಗಳು ಬಂದಿಲ್ಲ ಎಂದು ದೂರುತ್ತಿದ್ದಿರಿ. ಅದು ಸರಿ. ಆದರೆ ಮೊದಲು ನೀವು ಸಂಘಟಿತರಾಗಿ ಮುಂದಿನ ವರ್ಷ ಕಲಾಮಂದಿರದಲ್ಲಿ ಕಾರ್ಯಕ್ರಮ ನಡೆಯಬೇಕು ಆ ರೀತಿ ಜನರನ್ನು ಸೇರಿಸಬೇಕು. ಆಗ ಸಿಎಂ, ಪಿಎಂ ಎಲ್ಲರೂ ತಾವಾಗೇ ಬರುತ್ತಾರೆ. ಮೊದಲು ನೀವು ಹಕ್ಕನ್ನು ಕೇಳುವ ಮುನ್ನ ನಿಮ್ಮ ಕರ್ತವ್ಯ ಮಾಡಿ ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಎಡಿಸಿ ಶಿವರಾಜು, ನಿವೃತ್ತ ಡಿಡಿಪಿಐ ಮಂಟೇಲಿಂಗಾಚಾರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಜಂಟಿ ನಿರ್ದೇಶಕ ಮಲ್ಲಿಕಾರ್ಜುನ ಸ್ವಾಮಿ, ಸಹಾಯಕ ನಿರ್ದೇಶಕ ಎಂ.ಡಿ.ಸುದರ್ಶನ್ ಮತ್ತಿತರರು ಉಪಸ್ಥಿತರಿದ್ದರು.

### ಡಿಸಿ, ಜನಪ್ರತಿನಿಧಿಗಳ ಗೈರು: ಪ್ರತಿಭಟನೆ

ಮೈಸೂರು: ಅಮರಶಿಲ್ಪಿ ಜಕಣಾಚಾರಿ ಜಯಂತಿ ಮಹೋತ್ಸವ ಪೂರ್ವ ನಿಯೋಜಿತವಾಗಿದ್ದರೂ ಸಮಾರಂಭಕ್ಕೆ ಜಿಲ್ಲಾ ಉಸ್ತುವಾರಿ ಸಚಿವ, ಜಿಲ್ಲಾಧಿಕಾರಿ ಸೇರಿ ಅನೇಕ ಜನ ಪ್ರತಿನಿಧಿ ಗೈರಾಗಿದ್ದನ್ನು ಖಂಡಿಸಿ ವಿಶ್ವಕರ್ಮ ಸಮುದಾಯದ ಮುಖಂಡರು ಕಲಾಮಂದಿರದ ಮುಂಭಾಗ ಪ್ರತಿಭಟನೆ ನಡೆಸಿದರು.

ಸಮುದಾಯದ ಕಾರ್ಯಕ್ರಮದಲ್ಲಿ ಭಾಗ ವಹಿಸದೇ ನಿರ್ಲಕ್ಷ್ಯ ತೋರಲಾಗುತ್ತಿದೆ. 10.30ರ ಕಾರ್ಯಕ್ರಮಕ್ಕೆ 12ಗಂಟೆಯಾದರೂ ಯಾವೊಬ್ಬ ಜನಪ್ರತಿನಿಧಿ ಬಾರದಿರುವುದು ಖಂಡನೀಯ. ಜಿಲ್ಲಾಡಳಿತದ ಪ್ರತಿನಿಧಿ ಜಿಲ್ಲಾಧಿಕಾರಿಗಳು ಆಗಮಿಸದೇ ಅಗೌರವ ತೋರಲಾಗುತ್ತಿದೆ ಎಂದು ಆರೋಪಿಸಿ ಪ್ರತಿಭಟಿಸಿದರು. ವಿಷಯ ತಿಳಿದು ಆಗಮಿಸಿದ ಶಾಸಕ ಕೆ.ಹರೀಶ್‌ಗೌಡ ಜಿಲ್ಲಾ ಸಚಿವರು ಬೇರೆ ಕಾರ್ಯಕ್ರಮಕ್ಕೆ ತೆರಳಿದ್ದು, ಸರ್ಕಾರ ಸದಾಕಾಲ ನಿಮ್ಮ ಪರವಾಗಿರಲಿದೆ ಎಂದು ಮನವೊಲಿಸಿದ ಬಳಿಕ ಕಾರ್ಯಕ್ರಮ ನಡೆಯಿತು.

## ದಿನದರ್ಶಿಕೆ ಬಿಡುಗಡೆ

ಮೈಸೂರು: ಕರ್ನಾಟಕ ಸೇನಾ ಪಡೆಯ 2026ನೇ ನೂತನ ಕ್ಯಾಲೆಂಡರ್ ಅನ್ನು ವಿಜಯನಗರದ ಶ್ರೀ ಯೋಗಾನರಸಿಂಹ ಸ್ವಾಮಿ ದೇವಸ್ಥಾನದ ಆವರಣದಲ್ಲಿ ವಿಧಾನ ಪರಿಷತ್ ಸದಸ್ಯ ಸಿ.ಎನ್.ಮಂಜೇಗೌಡ ಬಿಡುಗಡೆ ಮಾಡಿದರು.

ಯೋಗಾನರಸಿಂಹ ಸ್ವಾಮಿ ದೇವಸ್ಥಾನದ ನಿರ್ವಾಹಕ ಕಾರ್ಯದರ್ಶಿ ಶ್ರೀನಿವಾಸ್, ನಟ ಎಸ್.ಜಯಪ್ರಕಾಶ್, ಡಾ.ರಘುರಾಂ ಕೆ ವಾಜಪೇಯಿ, ರಾಜ್ಯ ಒಕ್ಕಲಿಗರ ಸಂಘದ ಪ್ರಧಾನ ಕಾರ್ಯದರ್ಶಿ ಸಿ.ಜಿ. ಗಂಗಾಧರ್, ಮೈಸೂರು ವಾಣಿಜ್ಯ ಮತ್ತು ಕೈಗಾರಿಕಾ ಸಂಸ್ಥೆ ಅಧ್ಯಕ್ಷ ಕೆ.ಬಿ.ಲಿಂಗರಾಜು, ಮೈಸೂರು–ಚಾಮರಾಜನಗರ ಸಹಕಾರಿ ಬ್ಯಾಂಕ್ ನಿರ್ದೇಶಕ ಡಾ.ಎಂ.ಬಿ.ಮಂಜೇಗೌಡ, ಬಿ.ಎಚ್. ಗೋವಿಂದೇಗೌಡ, ಎಂ.ಎನ್.ದೊರೆಸ್ವಾಮಿ, ಜಯಣ್ಣ, ಕರ್ನಾಟಕ ಸೇನಾ ಪಡೆ ಅಧ್ಯಕ್ಷ ತೇಜೇಶ್ ಲೋಕೇಶ್ ಗೌಡ, ನರಸಿಂಹೇಗೌಡ, ಪ್ರಭುಶಂಕರ, ಸುಬ್ಬೇಗೌಡ, ಸಿಂದುವಳ್ಳಿ ಶಿವಕುಮಾರ್, ನೇಹಾ, ಭಾಗ್ಯಮ್ಮ , ಶಿವಲಿಂಗಯ್ಯ, ಪ್ರಭಾಕರ್ ,ಗಣೇಶ್ , ಬೋಗಾದಿ ಸಿದ್ದೇಗೌಡ, ಕೃಷ್ಣಪ್ಪ, ಕುಮಾರ್ , ಕೃಷ್ಣೇಗೌಡ, ಹೊನ್ನೇಗೌಡ, ಜೋತಿ, ಸುಜಾತಾ, ಶಿವರಾಂ ಸೇರಿ ಇನ್ನಿತರರು ಉಪಸ್ಥಿತರಿದ್ದರು.





ಮಂಡ್ಯ ಜಿಲ್ಲಾ ನೂತನ ಪೊಲೀಸ್ ವರಿಷ್ಠಾಧಿಕಾರಿಯಾಗಿ ಡಾ. ಶೋಭಾರಾಣಿ ವಿ.ಜೆ. ಅವರು ಇಂದು ನಿಕಟಪೂರ್ವ ಎಸ್ಪಿ ಮಲ್ಲಿಕಾರ್ಜುನ ಬಾಲದಂಡಿ ಯವರಿಂದ ಗುರುವಾರ ಅಧಿಕಾರ ವಹಿಸಿಕೊಂಡರು.

## ಆರೋಗ್ಯ ಪರೀಕ್ಷೆ ಶಿಬಿರ

**ಬೇಲೂರು:** ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಬಿ.ಸಿ.ಟ್ರಸ್ಟ್, ಬೇಲೂರು ತಾಲೂಕು ವತಿಯಿಂದ ವೈಡಿಎನ್ ಎಮ್ ಹೈಸ್ಕೂಲ್, ತೋಳಲುನಲ್ಲಿ ಆರೋಗ್ಯ ಉಚಿತ ಪರೀಕ್ಷೆ ಶಿಬಿರ ಆಯೋಜಿಸಲಾಗಿತ್ತು.

ಯೋಜನಾಧಿಕಾರಿ ಮಂಜುಳಾ ಮಾತನಾಡಿ, ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವಿವಿಧ ಕಾರ್ಯಕ್ರಮಗಳು ಹಾಗೂ ಬಡವರಿಗೆ ದೊರೆಯುವ ಸೌಲಭ್ಯಗಳ ಕುರಿತು ವಿವರಿಸಿದರು. ಸುನಂದ ಆಸ್ಪತ್ರೆಯ ಆಡಳಿತಾಧಿಕಾರಿ ನವೀನ್, ಶಾಲೆಯ ಸಂಸ್ಥಾಪಕ ಚಂದ್ರೇಗೌಡ ಮಾತನಾಡಿದರು. ಮಹಾಲಕ್ಷ್ಮಿ ಮಂಜಪ್ಪ ಮಲ್ಟಿ ಸ್ಪೆಷಾಲಿಟಿ ಆಸ್ಪತ್ರೆಯ ಮಾರ್ಕೆಟಿಂಗ್ ಮ್ಯಾನೇಜರ್ ಅರುಣ್ ಕುಮಾರ್ ಮಾತನಾಡಿದರು. ಶೋಭಾ ಆಲೂರ್, ನವಿಲಹಳ್ಳಿ ಒಕ್ಕೂಟದ ಉಪಾಧ್ಯಕ್ಷರು, ಜಿಸಿ ರತ್ನಮ್ಮ (ಅಧ್ಯಾಪಕರು, ವೈಡಿಎನ್ ಎಮ್ ಪ್ರೌಢಶಾಲೆ), ವಲಯ ಮೇಲ್ವಿಚಾರಕರಾದ ಸವಿತಾ, ಸೇವಾಪ್ರತಿನಿಧಿಗಳಾದ ಪ್ರತಿಭಾ, ವಸಂತ, ರೂಪ, ರಜನಿ, ಭಾಗ್ಯ, ಪ್ರತಿಮಾ ಭಾಗವಹಿಸಿದ್ದರು.




## ಹುಲ್ಲಿನ ಲಾರಿಗೆ ವಿದ್ಯುತ್ ತಂತಿ ತಗುಲಿ ಬೆಂಕಿ



**ಸಕಲೇಶಪುರ:** ತಾಲೂಕಿನ ಕಾಕನಮನೆ ಸಮೀಪ ರಸ್ತೆಯಲ್ಲಿ ಹುಲ್ಲಿನ ಹೊರೆ ಸಾಗಿಸುತ್ತಿದ್ದ ಲಾರಿಗೆ ವಿದ್ಯುತ್ ತಂತಿ ತಗುಲಿ ಬೆಂಕಿ ಹತ್ತಿಕೊಂಡಿದೆ.

ಹುಲ್ಲಿನ ಹೊರೆ ಲೋಡ್ ತುಂಬಿಕೊಂಡು ಸಾಗುತ್ತಿದ್ದ ಲಾರಿ, ರಸ್ತೆಯ ಮೇಲಿನಿಂದ ಹಾದುಹೋಗಿದ್ದ ವಿದ್ಯುತ್ ತಂತಿಗೆ ತಾಗಿದ ಪರಿಣಾಮ ಏಕಾಏಕಿ ಬೆಂಕಿ ಕಾಣಿಸಿಕೊಂಡಿತು. ಲಾರಿಯಿಂದ ಹೊಗೆ ಮತ್ತು ಬೆಂಕಿ ಕಾಣುತ್ತಿದ್ದಂತೆಯೇ ಸ್ಥಳೀಯರು ತಕ್ಷಣವೇ ಅಗ್ನಿಶಾಮಕ ದಳಕ್ಕೆ ಮಾಹಿತಿ ನೀಡಿದರು.

ಮಾಹಿತಿ ಪಡೆದ ಅಗ್ನಿಶಾಮಕ ದಳದ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ, ಸ್ಥಳೀಯರ ಸಹಕಾರದೊಂದಿಗೆ ಬೆಂಕಿ ನಂದಿಸುವ ಕಾರ್ಯ ಕೈಗೊಂಡರು. ಸಮಯೋಚಿತ ಕಾರ್ಯಾಚರಣೆಯಿಂದ ಲಾರಿ ಸಂಪೂರ್ಣವಾಗಿ ಬೆಂಕಿಗೆ ಆಹುತಿಯಾಗುವುದನ್ನು ತಪ್ಪಿಸಲಾಗಿದೆ ಎಂದು ತಿಳಿದುಬಂದಿದೆ.

ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಆದರೆ ಲಾರಿಯಲ್ಲಿ ತುಂಬಿದ್ದ ಹುಲ್ಲಿನ ಹೊರೆಗೆ ಭಾಗಶಃ ಹಾನಿಯಾಗಿದೆ. ಈ ಸಂಬಂಧ ಸ್ಥಳೀಯ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಹೆಚ್ಚಿನ ತನಿಖೆ ನಡೆಯುತ್ತಿದೆ.

ಮೊದಲ ಪುಟದಿಂದ

## ಅರಮನೆ ಆವರಣದಲ್ಲಿ ಸಂಭ್ರಮ

ವರ್ಷಕ್ಕೆ ಮತ್ತಷ್ಟು ಮೆರುಗು ನೀಡಿತು. ಅರಮನೆ ಸುತ್ತಲೂ ಸೇರಿ ನಗರದಾದ್ಯಂತ ಪೊಲೀಸರು ಬಿಗಿ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸಿದ್ದರಿಂದ ಯಾವುದೇ ಅಹಿತಕರ ಘಟನೆ ನಡೆಯದೇ ನಿಟ್ಟುಸಿರು ಬಿಡುವಂತಾಯಿತು.

ದಸರಾ ವಸ್ತು ಪ್ರದರ್ಶನ ಪ್ರಾಧಿಕಾರಕ್ಕೆ ಸಂಜೆಯಿಂದಲೇ ಪ್ರವಾಸಿಗರು ಲಗ್ಗೆಯಿಟ್ಟರಲ್ಲದೆ ಸಮಯ ಕಳೆಯುತ್ತಿದ್ದಂತೆ ಕಾಲಿಡಲು ಆಗದಷ್ಟು ಜನಸಾಗರ ಹರಿದು ಬಂದಿತು. ಇನ್ನೇನು ಕೆಲವೇ ದಿನಗಳಲ್ಲಿ ಕೊನೆಗೊಳ್ಳುತ್ತಿರುವ ಹಿನ್ನೆಲೆಯಲ್ಲಿ ವಸ್ತುಪ್ರದರ್ಶನಕ್ಕೆ ಬರುವವರ ಸಂಖ್ಯೆ ಹೆಚ್ಚಳವಾಗಿದೆ.

ವರ್ತಮಾನ
ಜಾಹಿರಾತಿಗೆ ಉತ್ತಮ ಮಾಧ್ಯಮ

ಕರ್ನಾಟಕ ಸರ್ಕಾರ
**ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರ**
**ಕಾವೇರಿ ಜಲಾನಯನ ಯೋಜನೆಗಳು–ಮೈಸೂರು**
ಕಾರ್ಯಪಾಲಕ ಅಭಿಯಂತರವರ ಕಛೇರಿ, ನಂ–2 ವಿಭಾಗ, ಕಾಡಾ,
ಕಾಜಯೋ, ವಿಜಯನಗರ 1 ನೇ ಹಂತ, ಮೈಸೂರು–17
ದೂ.ಸಂ.: 0821–2414090 ಇ–ಮೇಲ್: eecada2mysore@gmail.com

**ಅಲ್ಪಾವಧಿ ಟೆಂಡರ್ ಪ್ರಕಟಣೆ ಸಂಖ್ಯೆ:20/2025–26 ದಿನಾಂಕ:30.12.2025**

**(Through KPPP Portal only)**

ಅಚ್ಚುಕಟ್ಟು ಅಭಿವೃದ್ಧಿ ಪ್ರಾಧಿಕಾರ, ಕಾವೇರಿ ಜಲಾನಯನ ಯೋಜನೆಗಳು ಮೈಸೂರು ಪ್ರಾಧಿಕಾರದಡಿ ಬರುವ ನಂ.2 ವಿಭಾಗ ಕಛೇರಿಯ ವತಿಯಿಂದ ಮೈಸೂರು ಜಿಲ್ಲಾ ವ್ಯಾಪ್ತಿಯಲ್ಲಿ ಬರುವ ಹೆಚ್.ಡಿ.ಕೋಟೆ ತಾಲ್ಲೂಕಿನ ಒಂದು ಭೂಕ್ಷಾರ ನಿವಾರಣಾ ಕಾಮಗಾರಿಗೆ K/W-1ರ ಪ್ರಕಾರ KPPP Portal ಮೂಲಕ ಐಟಂವಾರು ಟೆಂಡರ್ ಅನ್ನು ಏಕಲಕೋಟೆ ಪದ್ಧತಿಯಲ್ಲಿ ಕರೆಯಲಾಗಿದೆ. ಭಾಗವಹಿಸಲು ಇಚ್ಛಿಸುವ ಗುತ್ತಿಗೆದಾರರು ಟೆಂಡರ್‌ಗೆ ಸಂಬಂಧಿಸಿದಂತೆ ಎಲ್ಲಾ ಮಾಹಿತಿಗಳನ್ನು https://kppp.karnataka.gov.in ನಲ್ಲಿ ಪಡೆಯಬಹುದಾಗಿರುತ್ತದೆ. ಟೆಂಡರ್‌ನ್ನು ಡೌನ್‌ಲೋಡ್ ಮಾಡಿಕೊಳ್ಳುವ ದಿ: 31.12.2025 ರಿಂದ ಟೆಂಡರ್‌ದಾರರು ಟೆಂಡರ್‌ನ್ನು ಸಲ್ಲಿಸಲು ಕೊನೆಯ ದಿ: 08.01.2026 ಸಂಜೆ 4.00 ಗಂಟೆಯವರೆಗೆ ಟೆಂಡರ್ ತೆರೆಯುವ ದಿ: 09.01.2026 ಸಂಜೆ 4.30 ಗಂಟೆಯ ನಂತರ. ಹೆಚ್ಚಿನ ಮಾಹಿತಿಯನ್ನು ಕೆ.ಪಿ.ಪಿ–ಪೋರ್ಟಲ್ ನಲ್ಲಿ ಪಡೆಯತಕ್ಕದು.

**ವಿಶೇಶ ಸೂಚನೆ:** ಟೆಂಡರ್‌ನಲ್ಲಿ ಯಾವುದೇ ಬದಲಾವಣೆಗಳು ಆದಲ್ಲಿ ಕೆ.ಪಿ.ಪಿ–ಪೋರ್ಟಲ್ ನಲ್ಲಿ ಮಾತ್ರ ಪ್ರಕಟಿಸಲಾಗುವುದು.

ಸಹಿ/– ಕಾರ್ಯಪಾಲಕ ಅಭಿಯಂತರರು,
ನಂ.2 ವಿಭಾಗ, ಕಾಡಾ, ಕಾಜಯೋ, ಮೈಸೂರು.
DIPR/DDMYS/1448/KSMCA/823/2025-26

## ಭೀಮಾ ಕೋರೇಗಾಂವ್ ವಿಜಯೋತ್ಸವ ಆಚರಣೆ



ಕೆ.ಆರ್.ಪೇಟೆ: 1818ರಲ್ಲಿ 500ಮಂದಿ ಮಹರ್ ದಲಿತರು ಭೀಮಾ ಕೋರೇಗಾವ್ ನಲ್ಲಿ ಮರಾಠಿ ಪೇಶ್ವೆಗಳಿಂದ ತಮಗೆ ಆಗುತ್ತಿದ್ದ ಅಸ್ಪೃಷ್ಯತೆ, ಅಪಮಾನ ತಾಳಲಾರದೆ ತಮ್ಮ ಸ್ವಾಭಿಮಾನ, ಆತ್ಮಗೌರವಕ್ಕಾಗಿ ಹೋರಾಡಿ ಸುಮಾರು 28ಸಾವಿರ ಪೇಶ್ವೆಗಳ ವಿರುದ್ದ 1818ರ ಜ.1ರಂದು ವಿಜಯ ಸಾಧಿಸಿದ ಈ ದಿನವನ್ನು ಭೀಮಾ ಕೋರೇಗಾಂವ್ ವಿಜಯದ ದಿನವನ್ನಾಗಿ ಆಚರಿಸಲಾಗುತ್ತಿದೆ ಎಂದು ಛಲವಾದಿ ಮಹಾಸಭಾ ರಾಜ್ಯ ಸಮಿತಿ ಸದಸ್ಯರು ಹಾಗೂ ಪುರಸಭೆ ಸದಸ್ಯರಾದ ಡಿ.ಪ್ರೇಂಕುಮಾರ್ ತಿಳಿಸಿದರು.

ಪಟ್ಟದ ಪ್ರವಾಸಿ ಮಂದಿರದಲ್ಲಿ ಕೆ.ಆರ್.ಪೇಟೆ ಛಲವಾದಿ ಮಹಾಸಭಾ ವತಿಯಿಂದ ಕೋರೇಗಾಂವ್ ವಿಜಯೋತ್ಸವ ಸಮಾರಂಭದ ಅಂಗವಾಗಿ ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿ ಮಾತನಾಡಿದರು.

1818 ರಲ್ಲಿ ನೂರಾರು ಮಹರ್ ಸೈನಿಕರು 28ಸಾವಿರ ಪೇಳ್ವೆಗಳೊಂದಿಗೆ ಅಂದರೆ 2 ನೇ ಬಾಜೀರಾಯನ ಸೈನ್ಯವನ್ನು ಮಣಿಸಿ ವಿಜಯ ಸಾಧಿಸಿದ ಆ ಯುದ್ಧದಲ್ಲಿ 22 ವೀರ ಸೇನಾನಿಗಳು ಮೃತರಾದ ಹಿನ್ನಲೆ ಅವರ ಸ್ಮರಣಾರ್ಥ ಕೋರೆಗಾಂವ್ ನಲ್ಲಿ 75 ಅಡಿ ಎತ್ತರ ಸ್ಥಂಭ ನಿರ್ಮಿಸಲಾಗಿದೆ. ಈ ವಿಷಯವನ್ನು ಇಲ್ಲಿನ ಇತಿಹಾಸಕಾರರು ಮರೆಮಾಚಿದ್ದರು. ಆದರೆ ಡಾ.ಬಿ.ಆರ್.ಅಂಬೇಡ್ಕರ್ ರವರು ವಿದೇಶದಲ್ಲಿ ವ್ಯಾಸಂಗ ಮಾಡುವಾಗ ಅಲ್ಲಿನ ಪುಸ್ತಕಗಳನ್ನು ಓದಿ ಭಾರತದಲ್ಲಿ ನಡೆದ ನೈಜ ಇತಿಹಾಸ ಗುರುತಿಸಿದರು. ಈ ನೈಜ ಇತಿಹಾಸ ಈಗಿನ ಯುವ ಪೀಳಿಗೆ ತಿಳಿಸಬೇಕಾಗಿದೆ. ಈ ಕೋರೇಗಾಂವ್ ಯುದ್ಧವು ಅಸ್ಪೃಶ್ಯರ ಹೋರಾಟದ ಇತಿಹಾಸದಲ್ಲಿ ಒಂದು ಮೈಲುಗಲ್ಲಾಗಿ ಸ್ಫೂರ್ತಿಯ ಸಂಕೇತವಾದ್ದರಿಂದ ಡಾ.ಬಿ.ಆರ್. ಅಂಬೇಡ್ಕರ್ ರವರು ಪ್ರಪಂಚದ ಯಾವ ಮೂಲೆಯಲ್ಲಿದ್ದರೂ ಜನವರಿ 1 ರಂದು ಮಾತ್ರ ಕೋರೇಗಾಂವ್ ನಲ್ಲಿರುವ ವಿಜಯ ಸ್ತಂಬಕ್ಕೆ ಬಂದು ಗೌರವ ಸಲ್ಲಿಸುತ್ತಿದ್ದರು. ಈ ಹಿನ್ನೆಲೆಯಲ್ಲಿ ನಾವು ಕೋರೇಗಾಂವ್ ವಿಜಯೋತ್ಸವ ಆಚರಿಸುತ್ತಿದ್ದೇವೆ ಎಂದು ತಿಳಿಸಿದರು.

"ಛಲವಾದಿ ಮಹಾಸಭಾ ಕೆ.ಆರ್.ಪೇಟೆ ತಾಲೂಕು ಘಟಕದ ಅಧ್ಯಕ್ಷ ಉಚನಹಳ್ಳಿ ನಟರಾಜು ಮಾತನಾಡಿ ಭೀಮಾ ಕೋರೆಗಾಂವ್ ವಿಜಯೋತ್ಸವ ಆಚರಣೆಯು ನಮ್ಮ ದಲಿತ ಸಮುದಾಯ ಅತಿ ದೊಡ್ಡ ವಿಜಯವಾಗಿದೆ. ಅಸ್ಪೃಶ್ಯತೆ ಆಚರಣೆ ಮಾಡುತ್ತಾ ದಲಿತರನ್ನು ಕಡೆಗಣಿಸುತ್ತಿದ್ದ ಪೇಶ್ವೆಗಳಿಗೆ ತಕ್ಕ ಪಾಠ ಕಲಿಸಿದ ದಿನವನ್ನು ಅಂಬೇಡ್ಕರ್ ಅವರು ಭೀಮಾ ಕೋರೇಗಾಂವ್ ವಿಜಯೋತ್ಸವ ಎಂದು ನಮ್ಮ ಅನೇಕ ಪುಸ್ತಕಗಳಲ್ಲಿ ಉಲ್ಲೇಕ ಮಾಡಿದ್ದಾರೆ. ಆದರೆ ಇತಿಹಾಸಕಾರರು ಈ ವಿಜಯೋತ್ಸವನ್ನು ಎಲ್ಲಿಯೂ ಬರೆಯದೇ ಇರುವುದು ದಲಿತರಿಗೆ ಮಾಡಿದ ಅಪಮಾನವಾಗಿದೆ ಎಂದು ಇತಿಹಾಸ ತಿರುಚಿದ ಬಗ್ಗೆ ಅನೇಕ ಪತ್ರಿಕೆಗಳಿಗೆ ಲೇಖನ ಬರೆದು ಬಹಿರಂಗಪಡಿಸಿದರು ಎಂದರು.

ಈ ಸಂದರ್ಭದಲ್ಲಿ ಛಲವಾದಿ ಮಹಾಸಭಾ ತಾಲೂಕು ಉಚನಹಳ್ಳಿ ನಟರಾಜ್, ತಾಲ್ಲೂಕು ಗೌರವಾಧ್ಯಕ್ಷ ಸೋಮಸುಂದರ್, ಛಲವಾದಿ ಮಹಾಸಭಾದ ಹಾಸನ, ಮಂಡ್ಯ ಜಿಲ್ಲಾ ಉಸ್ತುವಾರಿ ಮಾಂಬಳ್ಳಿ ಜಯರಾಮ್, ಮುದುಗೆರೆ ಮಹೇಂದ್ರ, ತಾಲ್ಲೂಕು ಕರವೇ ಸ್ವಾಭಿಮಾನಿ ಸೇನೆ ಅಧ್ಯಕ್ಷ ಸಮೀರ್, ಗೌರವಾಧ್ಯಕ್ಷ ಎ.ಸಿ.ಕಾಂತರಾಜು, ದಲಿತ ಯುವ ಮುಖಂಡರಾದ ಹರಿಹರಪುರ ನರಸಿಂಹ, ಬೊಮ್ಮೇನಹಳ್ಳಿ ವೀರಭದ್ರ, ಆಲಂಬಾಡಿ ಕಾವಲು ಚನ್ನಕೃಷ್ಣ, ಐಪನಹಳ್ಳಿ ರವಿ, ತೆಂಡೇಕೆರೆ ಶಿವಕುಮಾರ್, ಕಳ್ಳನಕೆರೆ ಶಂಕರ್, ರವಿ ಕಾಗೆಪುರ,ಬಲ್ಲೇನಹಳ್ಳಿ ಯೋಗೇಶ್, ಬೂಕನಕೆರೆ ತಮ್ಮಯ್ಯ, ಮಾಕವಳ್ಳಿ ರಮೇಶ್, ಚಟ್ಟೇನಹಳ್ಳಿ ರಾಮು, ಬಸ್ತಿ ಪ್ರದೀಪ್ ಕುಮಾರ್, ಚಿಕ್ಕಗಾಡಿಗನಹಳ್ಳಿ ಬಸವರಾಜು, ಮೆಣಸ ಬಾಲು, ಚಿಕ್ಕಗಾಡಿಗನಹಳ್ಳಿ ಶ್ರೀಧರ್, ಯೋಗೇಂದ್ರ ವಿವೇಕ್, ಐಪನಹಳ್ಳಿ ಶೃತಿ ರವೀಶ್ ಸೇರಿದಂತೆ ಉಪಸ್ಥಿತರಿದ್ದರು.

## ಸಮುದಾಯ ಜಾಗೃತಿ ಟ್ರಸ್ಟ್ ಉದ್ದೇಶ



ಚಾಮರಾಜನಗರ, ಉಪ್ಪಾರ ಸಮುದಾಯವನ್ನು ಜಾಗೃತಿ ಮೂಡಿಸುವ ಉದ್ದೇಶದೊಂದಿಗೆ ಶ್ರೀಭಗೀರಥ ಸೇವಾ ಟ್ರಸ್ಟ್ ಸ್ಥಾಪಿಸಲಾಗಿದೆ ಎಂದು ಟ್ರಸ್ಟ್ ಅಧ್ಯಕ್ಷ ಕೋರಿಯರ್ ಮಹದೇವಸ್ವಾಮಿ ಹೇಳಿದರು.

ನಗರದ ಚೆನ್ನೀಪುರಮೋಳೆಯಲ್ಲಿರುವ ಶ್ರೀಭಗೀರಥ ಸೇವಾ ಟ್ರಸ್ಟ್ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಟ್ರಸ್ಟ್‌ನ 2026ನೇ ಸಾಲಿನ ವಾರ್ಷಿಕ ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿದರು. ಶ್ರೀಭಗೀರಥ ಸೇವಾ ಟ್ರಸ್ಟ್ 2026 ನೇ ಸಾಲಿನ ಕ್ಯಾಲೆಂಡರ್ ನ್ನು ಹೊರ ತರಲಾಗಿದೆ. ಹಿಂದುಳಿದ ಉಪ್ಪಾರ ಸಮುದಾಯದ ಜಾಗೃತಿಗಾಗಿ, ಅಭಿವೃದ್ಧಿಗಾಗಿ ಈ ಟ್ರಸ್ಟ್ ಸ್ಥಾಪಿಸಲಾಗಿದೆ. ಮುಂದಿನ ದಿನಗಳಲ್ಲಿ ಆರ್ಥಿಕವಾಗಿ, ಶೈಕ್ಷಣಿಕವಾಗಿ ಸಮುದಾಯ ಜಾಗೃತಿ ಮೂಡಿಸಲಾಗುವುದು ಜೊತೆಗೆ ಸಮು ದಾಯ ವಾಸಮಾಡುವ ಗ್ರಾಮ, ಬೀದಿಗಳಿಗೆ ಮೂಲ ಭೂತ ಸೌಕರ್ಯಗಳನ್ನು ಸರ್ಕಾರದಿಂದ ಒದಗಿಸಿಕೊಡುವ ಕೆಲಸವನ್ನು ಮಾಡಲಾಗುತ್ತದೆ ಎಂದು ಹೊಸ ವರ್ಷದ ಶುಭಾಶಯ ಕೋರಿದರು. ಸಭೆಯಲ್ಲಿ ಶ್ರೀಭಗೀರಥ ಸೇವಾ ಟ್ರಸ್ಟ್ ಉಪಾಧ್ಯಕ್ಷ ಪಿ.ಲೋಕೇಶ್, ಕಾರ್ಯದರ್ಶಿ ರಂಗಸ್ವಾಮಿ, ಖಜಾಂಚಿ ಪಿ.ಲಿಂಗರಾಜು, ಸಹ ಕಾರ್ಯದರ್ಶಿ ಆರ್.ಮಹದೇವಶೆಟ್ಟಿ, ನಿರ್ದೇಶಕರಾದ ಮಹದೇವಶೆಟ್ಟಿ ಡೇರಿ, ನಾಗರಾಜು, ಎಂ.ನಾಗರಾಜು, ಮಹದೇವಶೆಟ್ಟಿ, ಸಿ.ರಾಜು ಇದ್ದರು.

## ಡಿಬಿಟಿ ಮೂಲಕ ಕಮಿಷನ್ ನೀಡಲು ಆಗ್ರಹ



ಮೈಸೂರು: ರಾಜ್ಯದಲ್ಲಿ ಸುಮಾರು 20ಸಾವಿರ ಪಡಿತರ ವಿತರಕರಿದ್ದು, ಇವರಿಗೆ ಕಮಿಷನ್ ನೀಡಿಕೆ ತಾಂತ್ರಿಕ ಕಾರಣದಿಂದ ವಿಳಂಬವಾಗುತ್ತಿದೆ. ಹೀಗಾಗಿ ಡಿಬಿಟಿ ಮೂಲಕ ಪ್ರತಿ ತಿಂಗಳೂ ನೀಡಬೇಕೆಂದು ರಾಜ್ಯ ಸರ್ಕಾರಿ ಪಡಿತರ ವಿತರಕರ ಸಂಘದ ಅಧ್ಯಕ್ಷ ಟಿ.ಕೃಷ್ಣಪ್ಪ ಸರ್ಕಾರಕ್ಕೆ ಮನವಿ ಮಾಡಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಇವರ ಕಮಿಷನ್ ಸಹಾ ಹೆಚ್ಚಿಸಬೇಕು, ಒಂದು ದೇಶ ಒಂದು ಪಡಿತರ ಚೀಟಿ ಯೋಜನೆ ಜಾರಿಯಲ್ಲಿದ್ದು, ಸಮರ್ಪಕ ವಿತರಣೆಗೆ ಏಕರೂಪ ತಂತ್ರಜ್ಞಾನ ಒದಗಿಸುವುದರೊಡನೆ ಸರ್ವರ್ ಸಮಸ್ಯೆ ಬಗೆಹರಿಸಬೇಕು, ಪಡಿತರ ವಿತರಕರಿಗೆ ಸರ್ಕಾರದಿಂದ ಉಚಿತವಾಗಿ ಕಂಪ್ಯೂಟರ್, ಬಯೋ ಯಂತ್ರ ಹಾಗೂ ಪ್ರಿಂಟರ್ ಯಂತ್ರ ಉಚಿತವಾಗಿ ವಿತರಿಸಬೇಕು ಎಂದು ಕೋರಿದರು.

ಉಪ್ಪು, ಬೇಳೆ, ಅಡುಗೆ ಎಣ್ಣೆ, ಸಕ್ಕರೆ, ಬೆಲ್ಲ ಹಾಗೂ ವಿವಿಧ ಬಗೆಯ ಕಾಳುಗಳನ್ನು ನೀಡಿದರೆ ರಾಜ್ಯದ ಪಡಿತರ ಚೀಟಿದಾರರಿಗೆ ಅನುಕೂಲವಾಗುತ್ತದೆ. ಅಪೌಷ್ಠಿಕತೆ ತೊಡೆದು ಹಾಕಬಹುದಾಗಿದೆ. ಇನ್ನು, ಸುಮಾರು 6 ವರ್ಷದಿಂದ ಬರಬೇಕಾಗಿರುವ ಇಕೆವೈಸಿ ಹಣವನ್ನು ಬಿಡುಗಡೆಗೊಳಿಸಲು ಸರ್ಕಾರ ಆದೇಶಿಸಬೇಕು, ಭಾರತ್ ರೈಸ್, ಭಾರತ್ ದಾಲ್, ಭಾರತ್ ಗೋಧಿ, ಭಾರತ್ ಸಕ್ಕರೆ, ಭಾರತ್ ಅಡುಗೆ ಎಣ್ಣೆ ಮೊದಲಾದ ಕಾರ್ಡುದಾರರಿಗೆ ಬೇಕಾದವನ್ನು ಇಲ್ಲಿ ದೊರಕುವಂತೆ ಮಾಡಬೇಕೆಂದು ಸಲಹೆ ನೀಡಿದರು. ಗೋಪಾಲ್, ರವಿ ಮಂಚೇಗೌಡನಕೊಪ್ಪಲು, ನಂಜನಗೂಡು ದೊರೆಸ್ವಾಮಿ, ಶಿವಣ್ಣ ಮೊದಲಾದವರು ಇದ್ದರು.

# ರಸ್ತೆ ಸುರಕ್ಷತಾ ನಿಯಮಗಳ ಬಗ್ಗೆ ಜನ ಜಾಗೃತಿ ಮೂಡಿಸಲು ಅಧಿಕಾರಿಗಳಿಗೆ ಕರೆ

## ಜ.31ರವರೆಗೆ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ

ರಾಮನಗರ: 2026ರ ಜನವರಿ 1 ರಿಂದ 31ರವರೆಗೆ ರಸ್ತೆ ಸುರಕ್ಷತಾ ಮಾಸಾಚರಣೆ ನಡೆಯುತ್ತಿದ್ದು, ಜಿಲ್ಲೆಯ ಎಲ್ಲಾ ತಾಲ್ಲೂಕುಗಳಲ್ಲಿ ರಸ್ತೆ ಸುರಕ್ಷತೆಯ ಬಗ್ಗೆ ಜನ ಜಾಗೃತಿ ಮೂಡಿಸಲು ಜಿಲ್ಲಾಡಳಿತ ಮುಂದಾಗಿದೆ.

ಈ ಸಂಬಂಧ ಜಿಲ್ಲೆಯ ವಿವಿಧ ಸರ್ಕಾರಿ ಇಲಾಖೆಗಳ ಅಧಿಕಾರಿಗಳೊಂದಿಗೆ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಶಶಿಧರ ಶೆಟ್ಟಿಯವರು ವೀಡಿಯೋ ಕಾನ್ಫರೆನ್ಸ್ ಮೂಲಕ ಪತ್ರಿಕಾಗೋಷ್ಠಿ ನಡೆಸಿದರು.

ರಸ್ತೆ ಅಪಘಾತ ಪ್ರಮಾಣವನ್ನು ಕಡಿಮೆ ಮಾಡುವುದು ಅಥವಾ ಅಪಘಾತವಾಗದಂತೆ ಎಚ್ಚರ ವಹಿಸುವುದು ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು, ರಸ್ತೆ ಸುರಕ್ಷತೆ ಕುರಿತು ಸಾರ್ವಜನಿಕರಲ್ಲಿ ಅರಿವು ಮೂಡಿಸುವುದು ಅತ್ಯಗತ್ಯವಾಗಿದೆ ಎಂದು ಅವರು ಅಧಿಕಾರಿಗಳಿಗೆ ತಿಳಿಸಿದ್ದಾರೆ.

2026ರ ಜನವರಿ 01 ರಿಂದ 31 ರವರೆಗೆ ರಾಷ್ಟ್ರೀಯ ರಸ್ತೆ ಸುರಕ್ಷತಾ ಮಾಸಾಚರಣೆ ಹಮ್ಮಿಕೊಳ್ಳಲಾಗಿದ್ದು, ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ, ಸಾರಿಗೆ ಇಲಾಖೆ, ಪೋಲೀಸ್ ಇಲಾಖೆ, ಆರೋಗ್ಯ ಇಲಾಖೆ, ಶಿಕ್ಷಣ ಇಲಾಖೆ, ಉನ್ನತ ಶಿಕ್ಷಣ ಇಲಾಖೆ, ಲೋಕೋಪಯೋಗಿ ಇಲಾಖೆ, ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರ, ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರ, ಜಿಲ್ಲಾಡಳಿತ, ಸ್ಥಳೀಯ ವಕೀಲರ ಸಂಘ, ವಿಮಾ ಕಂಪನಿಗಳ ಪ್ರತಿನಿಧಿಗಳ ಸಹಯೋಗದೊಂದಿಗೆ ರಸ್ತೆ ಸುರಕ್ಷತೆ ಕುರಿತು ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯ ಮಟ್ಟದಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ರಮಗಳನ್ನು ಹೆಚ್ಚಾಗಿ ಆಯೋಜಿಸಬೇಕೆಂದು ಸಲಹೆ ನೀಡಿದರು. ಸಾರಿಗೆ ಇಲಾಖೆಯ ಆಯುಕ್ತರಾದ ಯೋಗೇಶ್ ಗೌಡ, ಹೆಚ್ಚುವರಿ ಆಯುಕ್ತಾರದ ಮಲ್ಲಿಕಾರ್ಜುನ್, ಬೆಂಗಳೂರಿನ ವಕೀಲರ ಸಂಘದ ಅಧ್ಯಕ್ಷರಾದ ವಿವೇಕ್ ಸುಬ್ಬಾ ರೆಡ್ಡಿ ವೀಡಿಯೋ ಕಾನ್ಫರೆನ್ಸ್ ಮೂಲಕ ನಡದ ಪತ್ರಿಕಾ ಗೋಷ್ಠಿಯಲ್ಲಿ ಹಾಜರಿದ್ದರು.



### ಸುಪ್ರೀಂಕೋರ್ಟಿನ ನಿರ್ದೇಶನಗಳನ್ನು ಜಾರಿಗೊಳಿಸಿ

ರಸ್ತೆ ಸುರಕ್ಷತಾ ಕಾರ್ಯಕ್ರಮದ ಅಂಗವಾಗಿ, ಸುಪ್ರೀಂ ಕೋರ್ಟ್‌ನ ರಸ್ತೆ ಸುರಕ್ಷತಾ ಸಮಿತಿ ನಿರ್ದೇಶನದಂತೆ ಯೋಜನೆ ಜಾರಿ ಹಾಗೂ ಅನುಷ್ಠಾನದ ಬಗ್ಗೆ ಹೆಚ್ಚಿನ ಅರಿವು ಮೂಡಿಸಬೇಕು. ವಾಹನ ಅಪಘಾತವಾದ ಸಂದರ್ಭಗಳಲ್ಲಿ ನಗದು ರಹಿತ ಚಿಕಿತ್ಸೆ, ವಿಮಾ ಮೊತ್ತ ಪಾವತಿಗೆ ಸಂಬಂಧಿಸಿದಂತೆ ನಮೂನೆಗಳ ಭರ್ತಿ ಇನ್ನಿತರೆ ಅಂಶಗಳ ಕುರಿತು ತರಬೇತಿ, ಕಾರ್ಯಾಗಾರ, ಸೆಮಿನಾರ್, ಪ್ಯಾನಲ್ ಚರ್ಚೆ, ಇನ್ನಿತರ ಕಾರ್ಯಕ್ರಮಗಳ ಮೂಲಕ ಅರಿವು ಮತ್ತು ಮಾಸ್ಟರ್ ಟ್ರೈನರ್‌ಗಳಿಗೆ ಉನ್ನತ ಮಟ್ಟದ ತರಬೇತಿ ಕಾರ್ಯಕ್ರಮಗಳನ್ನು ಪಾಲುದಾರ ಇಲಾಖೆಗಳಾದ ಸಾರಿಗೆ, ಪೋಲಿಸ್, ಸಿಬ್ಬಂದಿಯವರಿಗೆ ನೀಡಲಾಗುತ್ತದೆ ಎಂದರು.

### ಬಸ್ ಚಾಲಕರಿಗೂ ಅರಿವು

ಬಿ.ಎಂ.ಟಿ.ಸಿ, ಕೆ.ಎಸ್.ಆರ್.ಟಿ.ಸಿ ಹಾಗೂ ಖಾಸಗಿ ಬಸ್‌ಗಳ ಚಾಲಕರಿಗೆ ಹಾಗೂ ನಿರ್ವಾಹಕರಿಗೆ ಬಸ್ ಚಾಲನೆ ಹಾಗೂ ರಸ್ತೆ ಸುರಕ್ಷತೆ ಬಗ್ಗೆ ಅರಿವು ಮೂಡಿಸಲು ಪರಿಣಾಮಕಾರಿಯಾದ ರಸ್ತೆ ಸುರಕ್ಷತೆ ಮಾಸಾಚರಣೆ ಅವಧಿಯಲ್ಲಿ ಹೆಚ್ಚಿನ ಹಾಗೂ ಪರಿಣಾಮಕಾರಿ ಚಟುವಟಿಕೆಗಳನ್ನು ಕೈಗೊಳ್ಳಬೇಕು ಎಂದರು.

### ಜನ ಜಾಗೃತಿ ಹೇಗೆ?

ವಾಕಥಾನ್, ಮ್ಯಾರಾಥಾನ್, ವಿಂಟೇಜ್ ಕಾರ್ ರ‍್ಯಾಲಿ, ಸೈಕಲ್ ಜಾಥಾ, ಮಾನವ ಸರಪಳಿ ನಿರ್ಮಾಣದ ಮೂಲಕ ಜಾಗೃತಿ, ಸಂಚಾರ ಲೈವ್ ಪ್ರಾತ್ಯಕ್ಷಿಕೆ, ಪ್ಯಾನಲ್ ಚರ್ಚೆ, ಕಾರ್ಯಗಾರ, ವಾಣಿಜ್ಯ ವಾಹನ ಮಾಲೀಕರು, ವಾಹನ ಚಾಲಕರ ವಿವಿಧ ಸಂಘಟನೆಗಳ ಸದಸ್ಯರಿಗೆ ರಸ್ತೆ ಸುರಕ್ಷತೆ ಕುರಿತು ಅರಿವು ಮೂಡಿಸುವ ಕಾರ್ಯಾಗಾರ ಮತ್ತು ಉಚಿತ ಆರೋಗ್ಯ ತಪಾ ಸಣಾ ಶಿಬಿರ, ರಕ್ತ ದಾನ ಶಿಬಿರ, ಸುರಕ್ಷತಾ ಕ್ರಮಗಳ ಬಗ್ಗೆ ಅರಿವು ಮೂಡಿಸುವುದು, ಶಾಲಾ ಮತ್ತು ಕಾಲೇಜು ವಿದ್ಯಾರ್ಥಿಗಳಿಗೆ ರಸಪ್ರಶ್ನೆ, ಪ್ರಬಂಧ ರಚನೆ, ಕಿರು ನಾಟಕ, ಚಿತ್ರಕಲಾ ಸ್ಪರ್ಧೆ, ಸಾಮಾಜಿಕ ಜಾಲತಾಣದಲ್ಲಿ ರಸ್ತೆ ಸುರಕ್ಷತೆಯ ಸ್ಲೋಗನ್ ಪ್ರದರ್ಶನ, ಪತ್ರಿಕಾ ಮಾಧ್ಯಮ ಮತ್ತು ಎಲೆಕ್ಟ್ರಾನಿಕ್ ಮಾಧ್ಯ ಮಗಳಲ್ಲಿ ಪ್ರಚಾರ, ರೇಡಿಯೋ ಜಿಂಗಲ್ಸ್ ಮತ್ತು ಸಿನಿಮಾ ಮಂದಿರಗಳಲ್ಲಿ ಜಾಹೀರಾತು ಪ್ರದರ್ಶನ ಇತ್ಯಾದಿಗಳ ಮೂಲಕ ಪರಿಣಾಮಕಾರಿಯಾಗಿ ರಸ್ತೆ ಸುರಕ್ಷತೆ ಬಗ್ಗೆ ಅರಿವು ಮೂಡಿಸಬೇಕು ಎಂದರು.

## ಡಾ.ಶ್ಯಾಮನೂರು ಶಿವಶಂಕರಪ್ಪಗೆ ನುಡಿ ನಮನ



ಮೈಸೂರು: ಬಸವೇಶ್ವರ ಸಾಂಸ್ಕೃತಿಕ ಪ್ರತಿಷ್ಠಾನದಿಂದ ನಗರದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಗಣ್ಯರು ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆಗೊಳಿಸಿದರು. ಅಲ್ಲದೆ, ಈಚೆಗೆ ಅಗಲಿದ ಹಿರಿಯ ರಾಜಕಾರಣಿ ಡಾ.ಶ್ಯಾಮನೂರು ಶಿವಶಂಕರಪ್ಪ ಅವರಿಗೆ ನುಡಿನಮನ ಸಲ್ಲಿಸಲಾಯಿತು.

ಸಾಹಿತಿ ಡಾ.ಕೆ.ಲೀಲಾಪ್ರಕಾಶ್ ಮಾತನಾಡಿ, ಹೊಸ ವರ್ಷವನ್ನು ಸ್ವಾಗತಿಸುವ ವೇಳೆ ಹಲವಾರು ಯುವಜನರು ಕುಣಿದು ಕುಪ್ಪಳಿಸುವಾಗ ಸಭ್ಯತೆ ಮೀರಿದ್ದುದು ಬೇಸರದ ಸಂಗತಿಯಾಗಿದೆ. ಇನ್ನು, ಶ್ಯಾಮಣರು ಶೀವಶಂಕರಪ್ಪ ಅಜಾತ ಶತ್ರು ಆಗಿದ್ದರು, ಎಲ್ಲರಿಗೂ ಒಳಿತನ್ನೇ ಬಯಸುತ್ತಿದ್ದರು. ಅವರು ಬೆಳೆದ ರೀತಿ ಅಸಾಧಾರಣವಾದುದಾಗಿದೆ. ತಮ್ಮ ಜೀವನವನ್ನು ಸಮಾಜಕ್ಕಾಗಿ ಮುಡಿಪಾಗಿಟ್ಟಿದ್ದರು. ದಾವಣಗೆರೆಯ ಜವಳಿಗೆ ಪುನಶ್ಚೇತನವುಂಟು ಮಾಡಿದರು. ಹೀಗಾಗಿ ಇವರನ್ನು ಮೆಚ್ಚದವರು ಯಾರೂ ಇಲ್ಲ ಎಂದರು. ವಿಷ್ಣು ಸಾಲಿಗ್ರಾಮ ಸ್ವಾಮೀಜಿ ಸಾನ್ನಿಧ್ಯವಹಿಸಿದ್ದರು, ಕೆ.ರಘುರಾಂ ವಾಜಪೇಯಿ, ಅಂಬಳೆ ಶಿವಣ್ಣ, ತನುಜ ಮಹೇಶ್, ರಾಜು ಕಾರ್ಯ, ಸುಪ್ರೀತ್, ಪ್ರತಿಷ್ಠಾನದ ಸಂಸ್ಥಾಪಕ ಅಧ್ಯಕ್ಷ ಬಸವರಾಜೇಂದ್ರ ಸ್ವಾಮಿ ಹಾಜರಿದ್ದರು.

## ಜ.4ಕ್ಕೆ ನಾಮಧಾರಿ ಗೌಡರ ಪ್ರತಿಭಾ ಪುರಸ್ಕಾರ



ಮೈಸೂರು: ಸರಸ್ವತಿಪುರಂ ಗಂಗೋತ್ರಿ ಬಡಾವಣೆಯಲ್ಲಿನ ನಾಮಧಾರಿ ಗೌಡ ಸಂಘದ ವತಿಯಿಂದ ಜ.4ರ ಬೆಳಗ್ಗೆ 10.30ಕ್ಕೆ ಬಡಾವಣೆಯ ಬಾಲಕರ ವಿದ್ಯಾರ್ಥಿ ನಿಲಯದಲ್ಲಿ ಪ್ರತಿಭಾ ಪುರಸ್ಕಾರ ಹಾಗೂ ಸಂತೋಷ ಕೂಟ ಸಮಾರಂಭ ಆಯೋಜಿಸಲಾಗಿದೆ ಎಂದು ಅಧ್ಯಕ್ಷ ಎಂ.ಎನ್.ಸೋಮಶೇಖರ್ ತಿಳಿಸಿದರು.

ಸಂಸದ ಯದುವೀರ್ ಉದ್ಘಾಟಿಸುವರು, ಶಾಸಕ ಕೆ. ಹರೀಶ್‌ಗೌಡ ಮುಖ್ಯ ಅತಿಥಿಗಳಾಗಿರುವರು. ಕೆ.ಟಿ.ಗೋವಿಂದ ರಾಜು ಕ್ಯಾಲೆಂಡರ್ ಬಿಡುಗಡೆಗೊಳಿಸುವರು. ಡಿ.ಸುಂದರದಾಸ್, ಸಿ.ಜಿ.ನಾಗರಾಜು, ಪಿ. ಚನ್ನರೇವಣ್ಣ, ಎಚ್.ಎಸ್.ಅಶೋಕ್, ಪರಿಮಳ ಶ್ಯಾಂಸುಂದರ್ ಇನ್ನಿತರರು ವೇದಿಕೆಯಲ್ಲಿರುವರು, ಈ ವೇಳೆ ಪ್ರೊ.ಲೋಹಿತಾಶ್ವ ಹಲ್ಲಟ್ಟಿ, ಎಂ.ಎನ್.ನಟರಾಜ್ ಸೇರಿ ಹಲವು ಮಾಜಿ ಸೈನಿಕರನ್ನು ಸನ್ಮಾನಿಸಲಾಗುವುದೆಂದರು. ಸುದ್ದಿಗೋಷ್ಠಿಯಲ್ಲಿ ಕೆ.ಟಿ.ಗೋವಿಂದರಾಜು, ರಂಗೇಗೌಡ, ಜ್ಞಾನಾನಂದ ಕಗ್ಗೆರೆ, ಬಿ.ಎಸ್.ನಟರಾಜ್, ಬಿ.ಪಿ.ಸುರೇಶ್ ಹಾಜರಿದ್ದರು.

## ಜ್ಞಾನ ಪ್ರಕಾಶ ಸ್ವಾಮೀಜಿ ಹೇಳಿಕೆ ಸುಳ್ಳು: ಶಿವಲಿಂಗಸ್ವಾಮೀಜಿ



ಮೈಸೂರು: ಕಲ್ಬುರ್ಗಿ ಜಿಲ್ಲೆ ಕೋಡ್ಲಾದಲ್ಲಿನ ಉರಿಲಿಂಗ ಪೆದ್ದಿ ಸಂಸ್ಥಾನ ಹಾಗೂ ಮೈಸೂರಿನ ಗಾಂಧಿನಗರ ಶಾಖಾ ಮಠಗಳ ಪೀಠಾಧಿಕಾರಿ ಜ್ಞಾನಪ್ರಕಾಶ ಸ್ವಾಮೀಜಿ ಅಲ್ಲ ಎಂದು ತಾವು ನೀಡಿದ್ದ ಹೇಳಿಕೆಗೆ ಪ್ರತಿಯಾಗಿ ಜ್ಞಾನಪ್ರಕಾಶ ಸ್ವಾಮೀಜಿ ಮಾಡಿರುವ ವಾದ ಸುಳ್ಳಿನಿಂದ ಕೂಡಿದೆ ಎಂದು ಶಿವಲಿಂಗ ಸ್ವಾಮೀಜಿ ಆರೋಪಿಸಿದರು.

ನಗರದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಮಠಕ್ಕೂ ಜ್ಞಾನಪ್ರಕಾಶ ಸ್ವಾಮೀಜಿಯವರಿಗೂ ಯಾವುದೇ ಸಂಬಂಧವಿಲ್ಲವೆಂದು ನ್ಯಾಯಾಲಯವೊಂದು 2005 ರ ಜ. 31 ರಂದು ಆದೇಶ ನೀಡಿದೆ. ಆದರೆ ಜ್ಞಾನಪ್ರಕಾಶ ಸ್ವಾಮೀಜಿ ತಮ್ಮ ಆರೋಪಕ್ಕೆ ಉತ್ತರಿಸುವ ವೇಳೆ ಈ ಆದೇಶ ಕುರಿತಂತೆ ಮಾತನಾಡಿಲ್ಲ. ಹೀಗಾಗಿ ತಮ್ಮ ಆರೋಪವನ್ನು ಪರೋಕ್ಷವಾಗಿ ಒಪ್ಪಿಕೊಂಡಂತಾಗಿದೆ. ನಂಜುಂಡಸ್ವಾಮಿ ತಮ್ಮನ್ನು ಪೀಠಾಧಿಕಾರಿಯನ್ನಾಗಿ ಘೋಷಿಸಿ ದ್ದಾರೆಂದು ಜ್ಞಾನಪ್ರಕಾಶ ಸ್ವಾಮೀಜಿ ಹೇಳಿಕೊಂಡಿದ್ದಾರೆ. ಆದರೆ ನಂಜುಂಡಸ್ವಾಮಿ ಅವರಿಗೂ ಮಠಕ್ಕೂ ಸಂಬಂಧವಿಲ್ಲ. ಹೀಗಾಗಿ ಜ್ಞಾನಪ್ರಕಾಶ ಸ್ವಾಮೀಜಿ ಉತ್ತರಾಧಿಕಾರಿಯಲ್ಲ ಎಂಬ ನ್ಯಾಯಾಲಯದ ಆದೇಶವಿದೆ ಎಂದು ಹೇಳಿದರು.

ಜೊತೆಗೆ, ಈ ಭಾಗದ ದುದ್ದಗೆರೆಯಲ್ಲಿನ 26.20 ಎಕರೆ ಜಮೀನನ್ನು ಯಾವುದೇ ನ್ಯಾಯಾಲಯದ ಆದೇಶವಿಲ್ಲದೇ, ಅಧಿಕಾರವಿಲ್ಲದೇ ಮಾರಾಟ ಮಾಡಿದ್ದಾರೆ ಎಂಬುದು ತಮ್ಮ ಆರೋಪವಾಗಿತ್ತು. ಇದನ್ನು ಇವರು ನಿರಾಕರಿಸಿಲ್ಲ. ಎರಡೂ ಮಠಗಳಿಗೆ ಉತ್ತರಾಧಿಕಾರಿಯಲ್ಲ ಎಂದ ಮೇಲೆ ಇವುಗಳ ಅಭಿವೃದ್ಧಿಗೆ ಶ್ರಮಿಸುವ ಅಗತ್ಯವಿಲ್ಲ. ಜೊತೆಗೆ, ನನ್ನನ್ನು ಶಿವಯೋಗಿ ಸ್ಮಾರಕ ವಿದ್ಯಾವರ್ಧಕ ಸಂಸ್ಥೆಯಿಂದ 94–95 ರಲ್ಲಿ ವಜಾಗೊಳಿಸಲಾಗಿದೆ ಎಂದಿದ್ದಾರೆ. ಆದರೆ, 2005 ರ ಸಿವಿಲ್ ನ್ಯಾಯಾಲಯದ ಪ್ರಕರಣವೊಂದರಲ್ಲಿ ನನ್ನನ್ನು ಕಾರ್ಯದರ್ಶಿ ಎಂದು ಘೋಷಣೆ ಮಾಡಿಲ್ಲವೇ ಎಂದು ಪ್ರಶ್ನಿಸಿದರು. ಹೀಗಾಗಿ ಜ್ಞಾನಪ್ರಕಾಶ ಸ್ವಾಮೀಜಿಯ ದಬ್ಬಾಳಿಕೆ, ವಂಚನೆ, ನಂಜುಂಡಸ್ವಾಮಿಯವರ ಅನುಮಾನಾಸ್ಪದ ಸಾವು ಕುರಿತು, ನನ್ನ ಕೊಲೆಗೆ ಸಂಚು ರೂಪಿಸಿರುವ ಅನುಮಾನದಿಂದಾಗಿ ವರುಣ ಠಾಣೆಗೆ ಹಾಗೂ ಜಿಲ್ಲಾಧಿಕಾರಿ ಕಚೇರಿಗೆ ದೂರು ನೀಡಿದ್ದೇನೆಂದರು. ಎಂ.ಎಂ.ಪುಟ್ಟಸ್ವಾಮಿ, ಎಸ್.ಮಲ್ಲಿಕಾರ್ಜುನ, ಎಸ್.ಪ್ರಮೋದ್ ಇದ್ದರು.

## ಕೊಳ್ಳೇಗಾಲದವರೆಗೆ ಪಾದಯಾತ್ರೆ



ಕೊಳ್ಳೇಗಾಲ. ಭೀಮಕೋರೆಗಾವ್ ವಿಜಯೋತ್ಸವ ದ ಪ್ರಯುಕ್ತ ಕರ್ನಾಟಕ ದಲಿತ ಸಂಘರ್ಷ ಸಮಿತಿ ವತಿಯಿಂದ ಹನೂರುನಿಂದ ಕೊಳ್ಳೇಗಾಲದವರೆಗೆ ಪಾದಯಾತ್ರೆ ನಡೆಸಿದರು.

ಬಳಿಕ ಡಾ.ಬಿ.ಆರ್.ಅಂಬೇಡ್ಕರ್ ಪ್ರತಿಮೆಗೆ ಮಾಲಾರ್ಪಣೆ ಮಾಡಿ, ಸುಳ್ವಾಡಿ ವಿಷಪ್ರಸಾದ ಪ್ರಕರಣದಲ್ಲಿ ನೊಂದ ಜನರಿಗೆ ವಸತಿ ಹಾಗೂ ಭೂಮಿ ನೀಡಬೇಕು. ಅಂದಿನ ಮುಖ್ಯಮಂತ್ರಿ ಕುಮಾರಸ್ವಾಮಿ ರವರು ಹೇಳಿದಂತೆ ಸರ್ಕಾರ ನಡೆದುಕೊಳ್ಳಬೇಕು. ಉಚಿತ ಕಡ್ಡಾಯ ಶಿಕ್ಷಣ ಸೀಗಬೇಕು. ಸಾರಾಯಿ ನಿಷೇಧವಾಗಬೇಕು ಸೇರಿದಂತೆ ಅನೇಕ ಬೇಡಿಕೆ ಈಡೆರುವಂತೆ ಇಂದಿನ ಮುಖ್ಯಮಂತ್ರಿ ಹಾಗೂ ರಾಜ್ಯಪಾಲರಿಗೆ ಮನವಿಯನ್ನು ಇಲ್ಲಿನ ತಹಶಿಲ್ದಾರ್ ಕುಮಾರ್ ಮುಖಾಂತರ ನೀಡಲಾಗಿದೆ.

ಈ ಪಾದಯಾತ್ರೆಯಲ್ಲಿ ಡಿಎಸ್‌ಎಸ್ ರಾಜ್ಯ ಸಂಘಟನಾ ಸಂಚಾಲಕರು ಸಿದ್ದರಾಜು, ಜಿಲ್ಲಾ ಸಂಚಾಲಕರು ಹಿಂಡಯ್ಯ, ತಾಲ್ಲೂಕು ಸಂಚಾಲಕ ಸಂಚಾಲಕರು ಚಿಕ್ಕದೊಡ್ಡಯ್ಯ, ಕಾಮಗೆರೆ ಸುಂದರಮ್ಮ, ಚಂದ್ರು ನರೀಪುರ ಯಳಂದೂರು ರಾಚಪ್ಪ, ಮುರುಗೇಸ್ ಎಂಜಿ ದೊಡ್ಡಿ, ಮಾದೇಶ ಮಾರ್ಟಳ್ಳಿ, ರಾಮಲಿಂಗಮ್, ಬಿದರಹಳ್ಳಿ ಮಹಿಳಾ ಸಂಘದ ಅಧ್ಯಕ್ಷ ಆಶಾ, ಮಾರ್ಟಳ್ಳಿ ಮಹಿಳಾ ಸಂಘದ ಅಧ್ಯಕ್ಷರು ಮಹೇಶ್ವರಿ, ಬೆಜಿಮಿನ್ ಟೈಲರ್ ಹಾಗೂ ಇತರರು ಇದ್ದರು.

**ಚಾಮುಲ್‌ನಿಂದ 2026ನೇ ಸಾಲಿನ ದಿನದರ್ಶಿಕೆ ಬಿಡುಗಡೆ**

## ಗುಣಮಟ್ಟದ ಹಾಲು ಶೇಖರಣೆಗೆ ಒತ್ತು ನೀಡಿ

ಚಾಮರಾಜನಗರ: ತಳ ಮಟ್ಟದಲ್ಲಿ ಹಾಲು ಸಂಗ್ರಹಿಸುವ ಸಂಘಗಳು ಗುಣಮಟ್ಟಕ್ಕೆ ಹೆಚ್ಚಿನ ಒತ್ತು ನೀಡುವ ಮೂಲಕ ರೈತರ ಸಂಸ್ಥೆಯಾಗಿರುವ ಚಾಮುಲ್ ಪ್ರಗತಿಗೆ ಶ್ರಮಿಸಬೇಕು ಎಂದು ಚಾಮುಲ್ ಹಿರಿಯ ನಿರ್ದೇಶಕ ಎಚ್.ಎಸ್. ಬಸವರಾಜು ತಿಳಿಸಿದರು.

ನಗರದ ರಾಮಸಮುದ್ರ ಬಳಿ ಯ ಚಾಮುಲ್ ಉಪ ಕೇಂದ್ರದಲ್ಲಿ ಜಿಲ್ಲಾ ಹಾಲು ಒಕ್ಕೂಟ ಹೊರ ತಂದಿರುವ 2026ರ ನೂತನ ದಿನದರ್ಶಿಕೆಯನ್ನು ಬಿಡುಗಡೆಗೊಳಿಸಿ ಅವರು ಮಾತನಾಡಿದರು.

ಜಿಲ್ಲೆಯ ಅಭಿವೃದ್ಧಿಯಲ್ಲಿ ತನ್ನದೇ ಅದ ಸೇವೆ ಸಲ್ಲಿಸುತ್ತಿರುವ ಹಾಲು ಒಕ್ಕೂಟವು ಜಿಲ್ಲೆಯ ಹಿರಿಮೆಯಾಗಿದೆ. ಚಾಮುಲ್ ಜಿಲ್ಲೆಯ ರೈತರ ಜೀವನಾಡಿ, ಕೃಷಿಯ ಜೊತೆಗೆ ಹೈನುಗಾರಿಕೆಯನ್ನು ಹೆಚ್ಚು ಅವಲಂಬಿಸಿದ್ದಾರೆ. ಇಂಥ ರೈತರ ಅರ್ಥಿಕ ಪ್ರಗತಿಯಲ್ಲಿ ನಮ್ಮ ಚಾಮುಲ್ ಸಹಕಾರ ನೀಡುತ್ತಿದೆ. ಹೀಗಾಗಿ ನಂದಿನಿ ಹಾಲು ಹಾಗೂ ನಂದಿನ ಉತ್ಪನ್ನಗಳನ್ನು ಬಳಸಬೇಕೆಂದು ಬಸವರಾಜು ತಿಳಿಸಿದರು.



ಮತ್ತೋವ ನಿರ್ದೇಶಕ ಸದಾಶಿವಮೂರ್ತಿ ಮಾತನಾಡಿ, ಸಹಕಾರ ಸಂಘದ ಅಭಿವೃದ್ದಿಯಲ್ಲಿ ಡೇರಿಯ ನೌಕರರ ಪಾತ್ರ ಹೆಚ್ಚಿನದದ್ದಾಗಿದೆ. ಪ್ರತಿ ದಿನ ಬೆಳಗ್ಗೆ ಹಾಗು ಸಾಯಂಕಾಲ ಗುಣಮಟ್ಟದ ಹಾಲು ಸಂಗ್ರಹಿಸಿ ಘಟಕಕ್ಕೆ ಕಳುಹಿಸುವ ಮೂಲಕ ತಮ್ಮದೇ ಅದ ಕೊಡುಗೆಯನ್ನು ನೀಡುತ್ತಿದ್ದಾರೆ. ನೂತನ ವರ್ಷವು ತಮ್ಮೆಲ್ಲರಿಗೂ ಒಳ್ಳೆಯದನ್ನು ಮಾಡಲಿ. 2026ನೇ ವರ್ಷ ತಮ್ಮ ಬಾಳಿನಲ್ಲಿ ನವೋಲ್ಲಾಸವನ್ನು ತರಲಿ ಎಂದು ಆಶಿಸಿದರು. ಬಳಿಕ ಡೇರಿ ಎಲ್ಲಾ ನೌಕರರಿಗೂ ಚಾಮುಲ್‌ನ ನೂತನ ವರ್ಷದ ಕ್ಯಾಲೆಂಡರ್ ಅನ್ನು ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಚಾಮುಲ್ ಉಪ ವ್ಯವಸ್ಥಾಪಕ ಡಾ. ಅಮರ್, ಮಾರ್ಗ ವಿಸ್ತಾರಣಾಧಿಕಾರಿ ಶ್ಯಾಮಸುಂದರ್, ತಾಲೂಕಿನ ಮಾರ್ಗ ವಿಸ್ತಾರಣಾಧಿಕಾರಿಗಳು, ಉಪಸ್ಥಿತರಿದ್ದರು. ತಾಲೂಕಿನ ಹಾಲು ಉತ್ಪಾದರಕ ಸಹಕಾರ ಸಂಘಗಳ ನೌಕರರು

# ಕಂದಾಯ ಇಲಾಖೆಯ ನೌಕರರು ಒಗ್ಗಟ್ಟಿನಿಂದ ಕೆಲಸ ಮಾಡಿ: ಜಿಲ್ಲಾಧಿಕಾರಿ ಡಾ.ಕುಮಾರ





**ಮಂಡ್ಯ:** ಕಂದಾಯ ಇಲಾಖೆಯಲ್ಲಿ ನೌಕರರು ಒಕ್ಕೊರಲಿನಿಂದ ಮತ್ತು ಒಗ್ಗಟ್ಟಿನಿಂದ ಕೆಲಸ ಮಾಡಿದರೆ ಒಳ್ಳೆಯ ಸಾಧನೆ ಮಾಡಬಹುದು ಎಂದು ಜಿಲ್ಲಾಧಿಕಾರಿ ಡಾ. ಕುಮಾರ ಅವರು ತಿಳಿಸಿದರು.

ಗುರುವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಕಂದಾಯ ಇಲಾಖೆ ನೌಕರರ ಸಂಘದವರು ಏರ್ಪಡಿಸಿದ್ದ 2026 ರ ನೂತನ ಹೊಸ ವರ್ಷದ ಶುಭಾಶಯ ಸಲ್ಲಿಸುವ ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರು ಮಾತನಾಡಿದರು.

ಕಂದಾಯ ಇಲಾಖೆಯಲ್ಲಿ ಹೊಣೆಗಾರಿಕೆ ಹೆಚ್ಚು ಇರುತ್ತದೆ. ಜನಸಾಮಾನ್ಯರನ್ನು ಮುಟ್ಟುವ ಏಕೈಕ ಇಲಾಖೆಯಾಗಿದ್ದು ಇಂತಹ ಇಲಾಖೆಯಲ್ಲಿ ಕೆಲಸ ಮಾಡಲು ಸಿಕ್ಕಿರುವ ಅವಕಾಶ ಪುಣ್ಯ ಎಂದು ಹೇಳಿದರು.

ಮಂಡ್ಯ ಜಿಲ್ಲೆ ಎಲ್ಲದರಲ್ಲೂ ಮೊದಲು ಇರಬೇಕು ಅದರ ಮೂಲಕ ಸಾರ್ವಜನಿಕರಿಗೆ ಹಾಗೂ ರೈತರಿಗೆ ಅನುಕೂಲವಾಗಬೇಕು ಆ ನಿಟ್ಟಿನಲ್ಲಿ ಕಂದಾಯ ಇಲಾಖೆ ಕೆಲಸ ಮಾಡಬೇಕು ಎಂದು ಹೇಳಿದರು.

ಹೊಸ ವರ್ಷದಲ್ಲಿ ಹೊಸ ದಿನಗಳು ಬರುತ್ತವೆ. ನಾವುಗಳು ಕೂಡ ಅದಕ್ಕೆ ಸರಿಯಾಗಿ ಹೊಂದಿಕೊಂಡು ಹೋಗಬೇಕು ಸಮಯ ಯಾರನ್ನು ಕಾಯುವುದಿಲ್ಲ. ಬದುಕು ಹಾಗೂ ಸಮಯ ನಿಂತ ನೀರಾಗಲು ಸಾಧ್ಯವಿಲ್ಲ. ಸದಾ ಹರಿಯುವ ನೀರಾಗಿದ್ದರೆ ಮಾತ್ರ ಪರಿಶುದ್ಧವಾಗಿರುತ್ತದೆ ಎಂದು ತಿಳಿಸಿದರು.

ಪ್ರತಿಯೊಂದರಲ್ಲೂ ಕೂಡ ಜೀವನೋತ್ಸಹ ಇಲ್ಲ ಎಂದರೆ ಹೊಸತನ ಹಾಗೂ ಬದುಕಿನಲ್ಲಿ ಒಳ್ಳೆಯ ಕೆಲಸ ಮಾಡಲು ಸಾಧ್ಯವಿಲ್ಲ ಎಂದು ಹೇಳಿದರು. ಈ ಸಂದರ್ಭದಲ್ಲಿ ಕಂದಾಯ ಇಲಾಖೆ ನೌಕರರ ಸಂಘದ ವತಿಯಿಂದ ಅಪರ ಜಿಲ್ಲಾಧಿಕಾರಿ ಬಿ.ಸಿ.ಶಿವಾನಂದ ಮೂರ್ತಿ, ಉಪ ವಿಭಾಗಾಧಿಕಾರಿ ಶಿವಮೂರ್ತಿ, ಹಾಗೂ ತಹಸಿಲ್ದಾರ್ ಅವರಿಗೂ ಹೊಸ ವರ್ಷದ ಶುಭಾಶಯ ಕೋರಿದರು. ಈ ಸಂದರ್ಭದಲ್ಲಿ ಜಿಲ್ಲಾ ಕಂದಾಯ ಇಲಾಖೆಯ ನೌಕರರ ಸಂಘದ ಅಧ್ಯಕ್ಷ ಡಿ.ತಮ್ಮಣ್ಣ ಗೌಡ, ಪ್ರಧಾನ ಕಾರ್ಯದರ್ಶಿ ಭಾಸ್ಕರ್, ರಾಜ್ಯ ಪರಿಷತ್ ಸದಸ್ಯರಾದ ಮಂಜುನಾಥ್, ಜಯಕುಮಾರ್, ತಾಲೂಕು ಕಂದಾಯ ಇಲಾಖೆಯ ಚಂದ್ರಕಲಾ, ವೆಂಕಟೇಶ್, ಲಿಂಗಸ್ವಾಮಿ ಪದಾಧಿಕಾರಿಗಳು ಹಾಗೂ ನೌಕರರು ಭಾಗವಹಿಸಿದರು

## 2025 ರಲ್ಲಿ ರಾಜ್ಯಾದ್ಯಂತ 5,947 ಚಾಲನಾ ಪರವಾನಗಿ ಅಮಾನತು:

# ಬೆಂಗಳೂರಿನಲ್ಲಿ 4,479 ಲೈಸೆನ್ಸ್ ಸಸ್ಪೆಂಡ್!



**ಬೆಂಗಳೂರು:** ಕರ್ನಾಟಕದ ಸಾರಿಗೆ ಇಲಾಖೆಯು 2025 ರಲ್ಲಿ ಕರ್ನಾಟಕದಾದ್ಯಂತ 5,947 ಚಾಲನಾ ಪರವಾನಗಿಗಳನ್ನು ಅಮಾನತುಗೊಳಿಸಿದೆ. ರಾಜ್ಯದ ಆರು ಸಾರಿಗೆ ವಿಭಾಗಗಳಲ್ಲಿ, ಬೆಂಗಳೂರು ನಗರವು 4,479 ಪ್ರಕರಣಗಳೊಂದಿಗೆ ಅಗ್ರಸ್ಥಾನದಲ್ಲಿದೆ.

ಅತಿವೇಗ ಮತ್ತು ನಿರ್ಲಕ್ಷ್ಯದ ಚಾಲನೆ ಮತ್ತು ಇತರ ಸಂಚಾರ ಉಲ್ಲಂಘನೆಗಳಿಗೆ ಸಂಬಂಧಿಸಿದಂತೆ 1,512 ಪ್ರಕರಣಗಳು ಇನ್ನೂ RTO ಗಳಲ್ಲಿ ಬಾಕಿ ಉಳಿದಿವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಕ್ರಿಸ್‌ಮಸ್ ರಜಾದಿನಗಳು ಮತ್ತು ಹೊಸ ವರ್ಷದ ಮುನ್ನಾದಿನದಂದು ಇಲಾಖೆಯು ಪರಿಶೀಲನೆ ತೀವ್ರಗೊಳಿಸುವುದರಿಂದ 2025 ರ ವೇಳೆಗೆ ಅಮಾನತು ಪ್ರಕರಣಗಳ ಸಂಖ್ಯೆ ಹೆಚ್ಚಾಗುವ ನಿರೀಕ್ಷೆಯಿದೆ.

ಮದ್ಯಪಾನ ಮಾಡಿ ಚಾಲನೆ ಮಾಡಿದ್ದಕ್ಕಾಗಿ 4,735 ಡಿಎಲ್ ಅಮಾನತುಗಳಾಗಿವೆ, ಕುಡಿದು ಚಾಲನೆ ಮಾಡುವುದರಿಂದ ಪಾದಚಾರಿಗಳು ಮತ್ತು ಇತರರ ಜೀವಕ್ಕೂ ಅಪಾಯವನ್ನುಂಟು ಮಾಡುತ್ತದೆ. ಹೀಗಾಗಿಸ್ಸು ತಲು, ಡ್ರಂಕ್ ಅಂಡ್ ಡ್ರೈವ್ ಮೊದಲ ಅಪರಾಧದಲ್ಲಿ ಚಾಲನಾ ಪರವಾನಗಿಯನ್ನು ಇಲಾಖೆ ಅಮಾನತುಗೊಳಿಸುತ್ತದೆ" ಎಂದು ಸಾರಿಗೆ ಸಚಿವ ಆರ್ ರಾಮಲಿಂಗಾ ರೆಡ್ಡಿ ಹೇಳಿದರು.

ಸಂಚಾರ ಇಲಾಖೆಯಿಂದ ವರದಿಗಳನ್ನು ಸ್ವೀಕರಿಸಿದ ನಂತರ, ಅವುಗಳನ್ನು ಸಂಬಂಧಪಟ್ಟ ಪ್ರಾದೇಶಿಕ ಸಾರಿಗೆ ಕಚೇರಿಗಳಿಗೆ ಕಳುಹಿಸಲಾಗುತ್ತದೆ ಮತ್ತು ಕ್ರಮ ಕೈಗೊಳ್ಳಲಾಗುತ್ತದೆ ಎಂದು ಬೆಂಗಳೂರು ನಗರ ವಿಭಾಗದ ಸಾರಿಗೆ ಇಲಾಖೆಯ ಜಂಟಿ ಆಯುಕ್ತ ಎಂ. ಶೋಭಾ ತಿಳಿಸಿದ್ದಾರೆ.

ಬೆಂಗಳೂರು ನಗರದ ಸಂಚಾರ ವಿಭಾಗದ ಜಂಟಿ ಆಯುಕ್ತ ಕಾರ್ತಿಕ್ ರೆಡ್ಡಿ ಮಾತನಾಡಿ, ತಪಾಸಣೆಯನ್ನು ತೀವ್ರಗೊಳಿಸಲು 53 ಸಂಚಾರ ಠಾಣೆಗಳಿಗೆ ಸೂಚನೆಗಳನ್ನು ನೀಡಲಾಗಿದೆ. ನಿರ್ದಿಷ್ಟ ಪ್ರದೇಶಗಳಲ್ಲಿ ನಿಯೋಜಿಸಲಾದ ಸಂಚಾರ ಪೊಲೀಸರು ವಿಶೇಷವಾಗಿ ವಾರಾಂತ್ಯದಲ್ಲಿ ವಾಹನ ಚಾಲಕರನ್ನು ಪರಿಶೀಲಿಸುತ್ತಾರೆ ಎಂದು ಅವರು ಹೇಳಿದರು. "ಕುಡಿದು ಚಾಲನೆ ಮಾಡಿದ ಪ್ರಕರಣಗಳ ಬಗ್ಗೆ ಶೂನ್ಯ ಸಹಿಷ್ಣುತೆ ಇದೆ. ಒಮ್ಮೆ ಸಿಕ್ಕಿಬಿದ್ದರೆ, ಪರವಾನಗಿಯನ್ನು ತಕ್ಷಣ ಜಾರಿಗೆ ಬರುವಂತೆ ಅಮಾನತುಗೊಳಿಸಲು ಸಾರಿಗೆ ಇಲಾಖೆಗೆ ಶಿಫಾರಸು ಮಾಡಲಾಗುತ್ತದೆ ಎಂದು ಅವರು ಹೇಳಿದರು.

ಸಾರಿಗೆ ಇಲಾಖೆಯು ಪರವಾನಗಿಯನ್ನು ಮೂರರಿಂದ ಆರು ತಿಂಗಳವರೆಗೆ ಅಮಾನತುಗೊಳಿಸಬಹುದು. "ಕೆಲವು ಸಂದರ್ಭಗಳಲ್ಲಿ ವಿಚಾರಣೆಯನ್ನು ನಡೆಸಲಾಗುತ್ತದೆ, ವಾಹನ ಚಾಲಕರ ಉತ್ತರಗಳು ಮತ್ತು ಸಂಚಾರ ಇಲಾಖೆಯಿಂದ ವರದಿಗಳ ಆಧಾರದ ಮೇಲೆ, ಮುಂದಿನ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತದೆ" ಎಂದು ಅವರು ಹೇಳಿದರು.

# ಶ್ರೀ ಗುರು ರಾಘವೇಂದ್ರ ಸ್ವಾಮಿಗೆ ವಿಶೇಷ ಪೂಜೆ



**ಕೆ.ಆರ್. ನಗರ:** 2026 ನೇ ನೂತನ ವರ್ಷ ಜನವರಿ 1 ಈ ಬಾರಿ ಗುರುವಾರ ಬಂದಿರುವುದರಿಂದ ಕೆ.ಆರ್. ನಗರ ಟೌನಿನಲ್ಲಿರುವ ಶ್ರೀ ಗುರು ರಾಘವೇಂದ್ರ ಸ್ವಾಮಿ ದೇವಸ್ಥಾನದಲ್ಲಿ

ಭಕ್ತಾದಿಗಳು ಅತಿ ಹೆಚ್ಚು ಸಂಖ್ಯೆಯಲ್ಲಿ ಆಗಮಿಸಿ ತಮ್ಮ ಇಷ್ಟ ಕೋರಿಕೆಯನ್ನು ಶ್ರೀ ಗುರುರಾಘವೇಂದ್ರ ಸ್ವಾಮಿಯಲ್ಲಿ ನಿವೇದಿಸಿಕೊಂಡರು .

ಬೆಳಗಿನಿಂದಲೇ ಶ್ರೀ ಗುರು ರಾಘವೇಂದ್ರ ಸ್ವಾಮಿ ಅವರಿಗೆ ಹೂವಿನ ಅಲಂಕಾರಗಳನ್ನು ಮಾಡಿ ವಿಶೇಷ ಪೂಜೆ ಅಭಿಷೇಕವನ್ನು ಮಾಡಲಾಯಿತು. ಭಕ್ತಾದಿಗಳು ಸರಣಿ ಸಾಲಿನಲ್ಲಿ ನಿಂತು ಶ್ರೀ ಗುರು ರಾಘವೇಂದ್ರ ಸ್ವಾಮಿಯವರ ದರ್ಶನವನ್ನು ಪಡೆದರು

# 'ಬದುಕುವ ದಿನಗಳಲ್ಲಿ ಸಮಯ ಎನ್ನುವುದು ಬಹು ಮುಖ್ಯ'

**ಕೆ.ಆರ್ .ನಗರ:** ಮನುಷ್ಯನ ಜೀವನದಲ್ಲಿ ಹುಟ್ಟು–ಸಾವು ಮಧ್ಯ ಬದುಕುವ ದಿನಗಳಲ್ಲಿ ಸಮಯ ಎನ್ನುವುದು ಬಹು ಮುಖ್ಯ ಇದನ್ನು ಸರಿಯಾಗಿ ಬಳಸಿಕೊಂಡ ಪ್ರತಿಯೊಬ್ಬ ವ್ಯಕ್ತಿಯು ತನ್ನದೇ ಆದ ಸಾಧನೆ ಮಾಡಿದ್ದಾರೆ ಎಂದು ಅನಸೋಗೆ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಕರ್ತಾಳ ಮಹಾದೇವಪ್ಪ ತಿಳಿಸಿದರು ಕಚೇರಿಯಲ್ಲಿ ನೂತನ ವರ್ಷದ ಕ್ಯಾಲೆಂಡರ್ ಬಿಡುಗಡೆ ಮಾಡಿ ಮಾತನಾಡಿದರು.

2026 ನೇ ವರ್ಷದಲ್ಲಿ ಸಂಘದ ಎಲ್ಲಾ ಸೇರುದಾರರಿಗೆ ಮತ್ತು ನಿರ್ದೇಶಕರಿಗೆ ಆ ದೇವರು ಒಳ್ಳೆಯದನ್ನ ಮಾಡಲಿ. ರೈತರು ಕೃಷಿಯಲ್ಲಿ ಉನ್ನತ ಸಾಧನೆ ಮಾಡಲಿ. ರೈತರಿಗೆ ಸದಾ ಬೆನ್ನೆಲುಬಾಗಿ ನಿಂತಿರುವ ಕೃಷಿ ಪತ್ತಿನ ಸಹಕಾರ ಸಂಘ ಅಭಿವೃದ್ಧಿಯಾಗಲಿ ಅದಕ್ಕೆ ನಾವೆಲ್ಲರೂ ಉತ್ತಮ ಸಹಕಾರ ನೀಡಿ ರೈತರಿಗೆ ಸಕಾಲದಲ್ಲಿ ಸಾಲ ಸೌಲಭ್ಯ ನೀಡಿ ಅವರ ಕಷ್ಟ ಸುಖದಲ್ಲಿ ಭಾಗಿಯಾಗೋಣ ಇದ್ದರು.

2025ರಲ್ಲಿ ನಡೆದ ಕಹಿ ಮತ್ತು ಸಿಹಿ ಘಟನೆಗಳನ್ನು ಸಮವಾಗಿ ಸ್ವೀಕರಿಸಿದ್ದೇವೆ ಅದೇ ರೀತಿ ಈ ವರ್ಷವೂ ಯಾವುದೇ ಕಹಿ ಘಟನೆಗಳನ್ನ ಉದ್ಭವ ಆಗಲು ಬಿಡದೆ ಹೆಚ್ಚು ಸಿಹಿ ಕಾರ್ಯಕ್ರಮಗಳನ್ನು ಮಾಡಿ

ಯಾವುದೇ ಜಾತಿ ಪಕ್ಷ ಇಲ್ಲದೆ ಅಭಿವೃದ್ಧಿಗಾಗಿ ಎಲ್ಲರೂ ಒಗ್ಗಟ್ಟಿನಿಂದ ಸಹಕಾರ ಸಂಘವನ್ನು ಬೆಳೆಸೋಣ. ಕಳೆದ ವರ್ಷಕ್ಕಿಂತ ಈ ವರ್ಷ ರೈತರಿಗೆ ಉತ್ತಮ ಸೌಲಭ್ಯಗಳನ್ನು ಕಲ್ಪಿಸಿ ಕೊಡೋಣ ಎಂದರು.



ನಿರ್ದೇಶಕ ಹೆಚ್ ಎನ್ ನವೀನ್ ಮಾತನಾಡಿ ಮೈಸೂರು ಚಾಮರಾಜನಗರ ಜಿಲ್ಲಾ ಡಿಸಿಸಿ ಬ್ಯಾಂಕ್ ಅಧ್ಯಕ್ಷರಾಗಿ ನೂತನವಾಗಿ ಆಯ್ಕೆಯಾದ ದೊಡ್ಡ ಸ್ವಾಮಿ ಗೌಡರನ್ನು ಭೇಟಿ ಮಾಡಿ ನಮ್ಮ ಕೃಷಿ ಪತ್ತಿನ ಸಹಕಾರ ಸಂಘಕ್ಕೆ ಹೆಚ್ಚಿನ ಅನುದಾನ ತಂದು ಕೃಷಿ ಸಹಕಾರ ಸಂಘವನ್ನು ಅಭಿವೃದ್ಧಿ ಮಾಡೋಣ ಪಕ್ಷಗಳನ್ನು ಬದಿಗೊತ್ತಿ ಸಂಘದ ಅಭಿವೃದ್ಧಿಗೆ ಎಲ್ಲರ ಸಹಕಾರ ಬಹು ಮುಖ್ಯವಾಗಿದೆ ಇದಕ್ಕೆ ಉಳಿದ ಎಲ್ಲಾ ನಿರ್ದೇಶಕರು ಸಹಕಾರ ನೀಡಿ ಎಂದರು.

ಸಂದರ್ಭದಲ್ಲಿ ಕೃಷಿ ಪತ್ತಿನ ಸಹಕಾರ ಸಂಘದ ಉಪಾಧ್ಯಕ್ಷೆ ಮೀನಾಕ್ಷಮ್ಮ, ನಿರ್ದೇಶಕರಾದ ಎಚ್ ಎಸ್ ಪಾಂಡುರಂಗ, ಅಮ್ಜತ್ ಪಾಷಾ, ಹೆಚ್ ಪಿ ಕರಿಗೌಡ, ಎಚ್ ಕೆ ತಿಮ್ಮೇಗೌಡ, ಹೆಚ್ ಪಿ ಮೋಹನ್, ನೀಲಮ್ಮ, ಎಚ್ ಕೆ ರಾಜಯ್ಯ, ಹೆಚ್ ಟಿ ರಾಜೇಗೌಡ, ಎಚ್ ಟಿ ನಾಗರಾಜನಾಯಕ, ಮೇಲ್ವಿಚಾರಕ ಎನ್ ದಿನೇಶ್, ಸಿಬ್ಬಂದಿಗಳಾದ ಎಚ್ ಪಿ ನಂಜುಂಡಸ್ವಾಮಿ, ಕೆ ಜಿ ರಾಧಾ ಕಿರಣ್, ಜ್ಯೋತಿ ಇತರರು ಇದ್ದರು.

# ಕಲ್ಲಿನಲ್ಲಿ ಕಾವ್ಯ ಬರೆದ ಮಹಾನ್ ಚೇತನ ಅಮರ ಶಿಲ್ಪಿ ಜಕಣಾಚಾರಿ: ಕೆ.ಆರ್. ನಂದಿನಿ

**ಮಂಡ್ಯ:** ಕಲೆಗೆ ಶ್ರದ್ದೆಗೆ ಮತ್ತು ಶಕ್ತಿಗೆ ಕೊನೆ ಇಲ್ಲ ಎಂಬುದನ್ನು ನಿರೂಪಿಸಿದವರು ಹಾಗೂ ಲೇಖನಿಯಲ್ಲೇ ಕಾವ್ಯ ಬರೆಯುವುದು ಕಷ್ಟಕರ ಆಂತದರಲ್ಲಿ ಕಲ್ಲಿನಲ್ಲಿ ಕಾವ್ಯ ಬರೆದ ಮಹಾನ್ ಚೇತನ ಅಮರಶಿಲ್ಪಿ ಜಕಣಾಚಾರಿ ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆ.ಆರ್ ನಂದಿನಿ ಹೇಳಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ನಗರದ ಕಲಾಮಂದಿರದಲ್ಲಿ ಆಯೋಜಿಸಲಾಗಿದ್ದ 2025–2026 ನೇ ಸಾಲಿನ ವಿಶ್ವಕರ್ಮ ಅಮರಶಿಲ್ಪಿ ಜಕಣಾಚಾರಿರವರ ಸಂಸ್ಮರಣ ದಿನಾಚರಣೆ ಕಾರ್ಯಕ್ರಮವನ್ನು ದೀಪ ಬೆಳಗಿಸಿ ಅಮರಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿ ಮಾತನಾಡಿದರು.

ನಿಷ್ಠೆ,ಛಲ,ಹಠ, ಕಲೆ ಮತ್ತು ಸಾಧನೆ ಮಾಡುವ ಗುರಿ ಹೊಂದಿದ ವ್ಯಕ್ತಿಯಿಂದ ಮಾತ್ರ ಕಲ್ಲಿನಲ್ಲಿ ಕಾವ್ಯ ಕೆತ್ತಲು ಸಾಧ್ಯ. ಅಮರಶಿಲ್ಪಿ ಜಕಣಾಚಾರ್ಯ ಅವರು ಯಾವುದೇ ಕೆಲಸವಾದರೂ ಶ್ರದ್ದೆ ನಿಷ್ಠೆ ಮತ್ತು ಪ್ರಾಮಾಣಿಕತೆಯಿಂದ ಪೂರ್ಣಗೊಳಿಸುತ್ತಿದ್ದರು. ಇವತ್ತಿನ ಯುವ ಪೀಳಿಗೆ ಅಮರಶಿಲ್ಪಿ ಜಕಣಾಚಾರಿ ಸ್ಫೂರ್ತಿ ಎಂದು ಹೇಳಿದರು.

ಇಂದಿನ ಆಧುನಿಕ ಕಾಲದಲ್ಲಿ ಎಲ್ಲ ಕಾರ್ಯಗಳು ತತ್ವರಿತವಾಗಿ ಪೂರ್ಣಗೊಳ್ಳಬೇಕು ಎಂಬ ಮನೋಭಾವನೆ ಇದೆ ಆದರೆ ಜಕಣಾಚಾರಿ ಅವರು ಯಶಸ್ಸು ಮಂದಗತಿಯಲ್ಲಿ ಬಂದರೂ ಸಹ ಕಾರ್ಯ ಪರಿಪಕ್ವವಾಗಿ ಇರಬೇಕು ಎಂದು ನಂಬಿದ್ದರು. ಯಶಸ್ಸು ಗಳಿಸಲು ತಾಳ್ಮೆ, ಸಂಯಮ ಅಗತ್ಯ ಎಂದು ತೋರಿಸಿಕೊಟ್ಟ ಮಹಾನ್ ಚೇತನ ಅಮರಶಿಲ್ಪಿ ಜಕಣಾಚಾರಿ ಅವರು ಎಂದು ಬಣ್ಣಿಸಿದರು.



## ಮೆರವಣಿಗೆಗೆ ಚಾಲನೆ

ವರ್ಣರಂಜಿತಾ ಬೆಳ್ಳಿ ರಥದ ಮೇಲೆ ಇರಿಸಲಾಗಿದ್ದ ಅಮರಶಿಲ್ಪಿ ಜಕಣಾಚಾರಿ ಅವರ ಭಾವಚಿತ್ರಕ್ಕೆ ಜಿಲ್ಲಾಧಿಕಾರಿ ಡಾ. ಕುಮಾರ್ ಅವರು ಪುಷ್ಪಾರ್ಚನೆ ಮಾಡಿ ಡೊಳ್ಳು ಬಾರಿಸುವ ಮೂಲಕ ಚಾಲನೆ ನೀಡಿದರು.

ಮೆರವಣಿಗೆಯು ಜಿಲ್ಲಾಧಿಕಾರಿಗಳ ಕಚೇರಿಯಿಂದ ನಗರದ ಪ್ರಮುಖ ಬೀದಿಗಳಲ್ಲಿ ವಿವಿಧ ಕಲಾತಂಡಗಳೊಂದಿಗೆ ಸಂಚರಿಸಿ ನಾಲ್ವಡಿ ಕೃಷ್ಣರಾಜ ಒಡೆಯರ್ ಕಲಾಮಂದಿರ ತಲುಪಿತು.

ಸಾಮಾನ್ಯರಿಗೆ ಕಲ್ಲು ಕಲ್ಲಾಗಿ ಕಂಡರೆ ಅಮರಶಿಲ್ಪ ಜಕಣಚಾರ್ಯ ಅವರಿಗೆ ಕಲ್ಲು ಭಕ್ತಿಯ ಸ್ವರೂಪದಲ್ಲಿ ಗೋಚರಿಸುತ್ತಿತ್ತು ಅಂತಹ ಭಕ್ತಿಯ ಆಂತರ್ಯದ ದೃಷ್ಟಿಯನ್ನು ಚೇತನರು ಹೊಂದಿದ್ದರು. ವಿಶ್ವದಾದ್ಯಂತ ಕಲೆಗಳಿಗೆ ಜಕಣಾಚಾರ್ಯ ಅವರು ಸಹಕಾರ ಮೂರ್ತಿಯಾಗಿ ಕಾಣುತ್ತಾರೆ. ಕಲೆಯನ್ನು ಪ್ರತಿನಿಧಿಸುವ ಸಾಂಸ್ಕೃತಿಕ ರಾಯಭಾರಿಯಾಗಿ ಅಮರಶಿಲಿ ಜಕಣಚಾರಿ ನಿಲ್ಲುತ್ತಾರೆ ಎಂದು ಹೇಳಿದರು.

ಜಕಣಚಾರ್ಯ ಅವರು ಕೇವಲ ವ್ಯಕ್ತಿಯಾಗಿ ಅಲ್ಲದೆ ಶ್ರಮದ ಸಂಕೇತವಾಗಿ ನಾವು ನೋಡಬಹುದು. ಯುವ ಪೀಳಿಗೆ ಅವರು ಜಗತ್ತಿಗೆ ನೀಡಿದ ಮೌಲ್ಯ ಮತ್ತು ಆದರ್ಶಗಳನ್ನು ತಿಳಿದುಕೊಳ್ಳಬೇಕು. ನಿಷ್ಠೆ ಪ್ರಾಮಾಣಿಕತೆ ಶ್ರದ್ಧೆ ಇದ್ದರೆ ಯಾವುದೇ ಕ್ಷೇತ್ರದಲ್ಲೂ ಯಶಸ್ಸು ಕಾಣಬಹುದು. ವ್ಯಕ್ತಿಗಳಿಗೆ ಆಪತ್ತು ಸಂಭವಿಸಬಹುದು ಆದರೆ ವ್ಯಕ್ತಿಯ ಕಲೆಗಳಿಗೆ ವಿಪತ್ತು ಸಂಭವಿಸುವುದಿಲ್ಲ ಎಂದು ಹೇಳಿದರು.


ಡಿ ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಾದ ಬೋರೇಗೌಡ ಅವರು ಸರ್ಕಾರದಿಂದ ವಿಶ್ವಕರ್ಮ ಸಮಾಜವನ್ನು ಆರ್ಥಿಕವಾಗಿ ಸಾಮಾಜಿಕವಾಗಿ ಮತ್ತು ಶೈಕ್ಷಣಿಕವಾಗಿ ಸ್ವಾವಲಂಬಿಯಾಗಿಸಲು ನೀಡಲಾಗುತ್ತಿರುವ ಗಂಗಾ ಕಲ್ಯಾಣ ಯೋಜನೆ ಸ್ವಾವಲಂಬಿ ಸಾರಥಿ ಯೋಜನೆ ಸೇರಿದಂತೆ ಇನ್ನಿತರ ಯೋಜನೆಗಳ ಕುರಿತು ಸಭಿಕರಿಗೆ ಮಾಹಿತಿ ನೀಡಿದರು.

ಜಿಲ್ಲಾ ಕೌಶಲ್ಯ ಅಭಿವೃದ್ಧಿ ಅಧಿಕಾರಿ ನಾಗನಂದ್ ಅವರು ವಿಶ್ವಕರ್ಮ ಸಮಾಜದ ಯುವಕರಿಗೆ ಉದ್ಯೋಗ ದೊರಕಿಸಿಕೊಡುವ ನಿಟ್ಟಿನಲ್ಲಿ ಪಡೆಯಬಹುದಾದ ಯೋಜನೆಗಳ ಕುರಿತು ಮಾಹಿತಿ ನೀಡಿದರು.

ನಂತರ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಕೆಆರ್ ನಂದಿನಿ ಅವರು ವಿಶ್ವಕರ್ಮ ಸಮಾಜದಲ್ಲಿ ವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಾಧಕರಿಗೆ ಸನ್ಮಾನಿಸಿ ಗೌರವಿಸಿದರು.

ಕಾರ್ಯಕ್ರಮದಲ್ಲಿ ಮುಡಾ ಜಿಲ್ಲಾ ಅಧ್ಯಕ್ಷ ಬಿ.ಪಿ ಪ್ರಕಾಶ್, ವಿಶ್ವಕರ್ಮ ಸಮಾಜದ ಅಧ್ಯಕ್ಷ ತಿರುಮಲಾಚಾರಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ನಂದೀಶ್, ವಿಶ್ವಕರ್ಮ ಸಮಾಜದ ಮುಖಂಡರುಗಳಾದ ಸುದರ್ಶನ್,ರಮೇಶ್,ಸೋಮಶೇಖರ್ ಶ್ರೀನಿವಾಸ್ ಮತ್ತಿತರರು ಇದ್ದರು.

# ಸಂಭ್ರಮದಿಂದ ಕ್ರಿಸ್‌ಮಸ್ ಆಚರಣೆ



**ಕೆ.ಆರ್.ನಗರ:** ಕ್ಷೇತ್ರದ ಸಾಲಿಗ್ರಾಮ ಪಟ್ಟಣದ ಶ್ರೀ ಭೈರವೇಶ್ವರ ಇಂಟರ್‌ನ್ಯಾಷನಲ್ ಶಾಲೆಯಲ್ಲಿ ಹೊಸವರ್ಷ ಹಾಗೂ ಕ್ರಿಸ್‌ಮಸ್ ಹಬ್ಬವನ್ನು ಅತ್ಯಂತ ಸಡಗರ, ಸಂಭ್ರಮ ಹಾಗೂ ಉತ್ಸಾಹದಿಂದ ಆಚರಿಸಲಾಯಿತು.

ನವ ವರ್ಷದ ಅಂಗವಾಗಿ ಶಾಲಾ ಆವರಣ ಸಂಪೂರ್ಣವಾಗಿ ಹಬ್ಬದ ವಾತಾವರಣದಿಂದ ಕಂಗೊಳಿಸುತ್ತಿತ್ತು.

ವಿದ್ಯಾರ್ಥಿಗಳು ಭಾಷಣ, ಗೀತಾ ಗಾಯನ, ನೃತ್ಯಗಳು, ನಾಟಕಗಳು ಸೇರಿದಂತೆ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಪ್ರಸ್ತುತಪಡಿಸಿ ಅವುಗಳ ಮೂಲಕ ಪ್ರೀತಿ, ಶಾಂತಿ, ಏಕತೆ ಹಾಗೂ ಮಾನವೀಯ ಮೌಲ್ಯಗಳ ಸಂದೇಶವನ್ನು ಸಾರಿದ್ದು ವಿಶೇಷವಾಗಿತ್ತು.

ಯೇಸು ಕ್ರಿಸ್ತರ ಜನ್ಮವನ್ನು ಆಧರಿಸಿದ ವಿಶೇಷ ನಾಟಕವು ಕ್ರಿಸ್‌ಮಸ್ ಹಬ್ಬದ ನಿಜವಾದ ಅರ್ಥವನ್ನು ಮನಮುಟ್ಟುವಂತೆ ವಿದ್ಯಾರ್ಥಿಗಳು ಪ್ರದರ್ಶಿಸಿದರು.

ನವವರ್ಷವನ್ನು ಉತ್ತಮ ಚಿಂತನೆಗಳು, ಶಿಸ್ತು, ಪರಿಶ್ರಮ ಮತ್ತು ಸದ್ಗುಣಗಳೊಂದಿಗೆ ಆರಂಭಿಸುವಂತೆ ವಿದ್ಯಾರ್ಥಿಗಳಿಗೆ ಶಿಕ್ಷಕರುಗಳು ಪ್ರೇರಣೆ ನೀಡಿದರು.

ವಿದ್ಯಾರ್ಥಿಗಳು ಕೆಂಪು ಮತ್ತು ಬಿಳಿ ಬಣ್ಣದ ವೇಷಭೂಷಣಗಳಲ್ಲಿ ಭಾಗವಹಿಸಿ ಕಾರ್ಯಕ್ರಮಕ್ಕೆ ವಿಶೇಷ ಕಳೆ ನೀಡಿದರು.

ಕೆಲವರು ಸಾಂಟಾ ಕ್ಲಾಸ್ ವೇಷದಲ್ಲಿ ಕಾಣಿಸಿಕೊಂಡು ಮಕ್ಕಳಲ್ಲಿ ಸಂತೋಷ ಮತ್ತು ಉಲ್ಲಾಸವನ್ನು ಹೆಚ್ಚಿಸಿದರು. ವಿವಿಧ ಮನರಂಜನಾ ಆಟಗಳು ಮತ್ತು ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳು ಅತ್ಯಂತ ಉತ್ಸಾಹದಿಂದ ಪಾಲ್ಗೊಂಡಿದ್ದರು.

ಆ ಮೂಲಕ ಶಾಲೆಯಲ್ಲಿ ಅತ್ಯಂತ ಅರ್ಥಪೂರ್ಣವಾದ ಕಾರ್ಯಕ್ರಮವು ನಡೆದು ಶಾಲೆಗೆ ವಿಶೇಷ ಮೆರುಗು ತಂದಿತು.

ಕಾರ್ಯಕ್ರಮದಲ್ಲಿ ಶಾಲೆಯ ಕಾರ್ಯದರ್ಶಿ ಸಿ.ಪಿ.ತ್ರಿವೇಣಿ, ಸಂಯೋಜಕಿ ಅರ್ಪಿತ ಸೇನ್, ಮುಖ್ಯ ಶಿಕ್ಷಕಿ ಯಶಸ್ವಿನಿ, ಶಿಕ್ಷಕರು, ವಿದ್ಯಾರ್ಥಿಗಳು ಇದ್ದರು.


# ಭಾರತ-ಬಾಂಗ್ಲಾದೇಶ ಸಂಬಂಧಗಳಿಗೆ ಖಲೀದಾ ಜಿಯಾ ಕೊಡುಗೆ ನೀಡಿದ್ದಾರೆ: ತಾರಿಕ್ ರೆಹಮಾನ್‌ಗೆ ಪ್ರಧಾನಿ ಮೋದಿ ಪತ್ರ

**ಢಾಕಾ:** ಪ್ರಧಾನಿ ನರೇಂದ್ರ ಮೋದಿ ಬಾಂಗ್ಲಾದೇಶ ರಾಷ್ಟ್ರೀಯವಾದಿ ಪಕ್ಷದ ಹಂಗಾಮಿ ಅಧ್ಯಕ್ಷ ತಾರಿಕ್ ರೆಹಮಾನ್ ಅವರಿಗೆ ತಮ್ಮ ಪತ್ರವನ್ನು ಕಳುಹಿಸಿದ್ದು, ಭಾರತ ಮತ್ತು ಬಾಂಗ್ಲಾದೇಶದ ನಡುವಿನ ದ್ವಿಪಕ್ಷೀಯ ಸಂಬಂಧಗಳನ್ನು ಹೆಚ್ಚಿಸುವಲ್ಲಿ ರೆಹಮಾನ್ ಅವರ ತಾಯಿ ಖಲೀದಾ ಜಿಯಾ ಅವರ ಪಾತ್ರವನ್ನು ಶ್ಲಾಘಿಸಿದ್ದಾರೆ. ಬುಧವಾರ ಜಿಯಾ ಅವರ ಅಂತ್ಯಕ್ರಿಯೆಯ ಸಂದರ್ಭದಲ್ಲಿ ಢಾಕಾದಲ್ಲಿ ಅವರನ್ನು ಭೇಟಿಯಾದ ನಂತರ ಭಾರತದ ವಿದೇಶಾಂಗ ಸಚಿವ ಎಸ್ ಜೈಶಂಕರ್ ಅವರು ಈ ಪತ್ರವನ್ನು ರೆಹಮಾನ್ ಅವರಿಗೆ ಹಸ್ತಾಂತರಿಸಿದರು.

"ಜೂನ್ 2015 ರಲ್ಲಿ ಢಾಕಾದಲ್ಲಿ ಬೇಗಂ ಸಾಹಿಬಾ (ಖಲೇದಾ ಜಿಯಾ) ಅವರೊಂದಿಗಿನ ನನ್ನ ಭೇಟಿ ಮತ್ತು ಚರ್ಚೆಗಳನ್ನುನಾನು ಹೃತ್ಪೂರ್ವಕವಾಗಿ ನೆನಪಿಸಿಕೊಳ್ಳುತ್ತೇನೆ. ಅವರು ಅಪರೂಪದ ದೃಢಸಂಕಲ್ಪ ಮತ್ತು ದೃಢಸಂಕಲ್ಪದ ನಾಯಕಿಯಾಗಿದ್ದರು ಮತ್ತು ಬಾಂಗ್ಲಾದೇಶದ ಮೊದಲ ಮಹಿಳಾ ಪ್ರಧಾನಿ ಎಂಬ ಹೆಗ್ಗಳಿಕೆಯನ್ನು ಹೊಂದಿದ್ದರು. ಅವರು ಬಾಂಗ್ಲಾದೇಶದ ಅಭಿವೃದ್ಧಿಗೆ ಹಾಗೂ ಭಾರತ–ಬಾಂಗ್ಲಾದೇಶ ಸಂಬಂಧಗಳ ಬಲವರ್ಧನೆಗೆ ಅನೇಕ ಪ್ರಮುಖ ಕೊಡುಗೆಗಳನ್ನು ನೀಡಿದ್ದಾರೆ" ಎಂದು ಪ್ರಧಾನಿ ಮೋದಿ ತಮ್ಮ ಪತ್ರದಲ್ಲಿ ಬರೆದಿದ್ದಾರೆ.

ಜಿಯಾ ಅವರ ನಿಧನದ ನಂತರ ಪ್ರಧಾನಿ ಮೋದಿ ಅವರು ಸಂತಾಪ ಸೂಚಿಸಿದ್ದಾರೆ. ಜಿಯಾ ಅವರ ಸಾವು ದೇಶದಲ್ಲಿ ಭರಿಸಲಾಗದ ಶೂನ್ಯವನ್ನು ಸೃಷ್ಟಿಸುತ್ತದೆ ಎಂದು ಉಲ್ಲೇಖಿಸಿದ ಅವರು, ಮುಂಬರುವ ದಿನಗಳಲ್ಲಿ ತಾರಿಕ್ ರೆಹಮಾನ್ ಅವರ ಮೇಲ್ವಿಚಾರಣೆಯಲ್ಲಿ ಅವರ ಪರಂಪರೆಯನ್ನು ಮುಂದುವರಿಸಲಾಗುವುದು ಎಂದು ಒತ್ತಿ ಹೇಳಿದರು.

"ಅವರ ನಿಧನ ಭರಿಸಲಾಗದ ಶೂನ್ಯವನ್ನು ತುಂಬಿದ್ದರೂ, ಅವರ ದೃಷ್ಟಿಕೋನ ಮತ್ತು ಪರಂಪರೆ ಶಾಶ್ವತವಾಗಿರುತ್ತದೆ. ಬಾಂಗ್ಲಾದೇಶ ರಾಷ್ಟ್ರೀಯತಾವಾದಿ ಪಕ್ಷದ ನಿಮ್ಮ ಸಮರ್ಥ ನಾಯಕತ್ವದಲ್ಲಿ ಅವರ ಆದರ್ಶಗಳು ಮುಂದುವರಿಯುತ್ತವೆ ಮತ್ತು ಭಾರತ ಮತ್ತು ಬಾಂಗ್ಲಾದೇಶದ ನಡುವಿನ ಆಳವಾದ ಮತ್ತು ಐತಿಹಾಸಿಕ ಪಾಲುದಾರಿಕೆಯ ಹೊಸ ಆರಂಭ ಮತ್ತು ಪುಷ್ಟೀಕರಣವನ್ನು ಖಚಿತಪಡಿಸಿಕೊಳ್ಳಲು ಮಾರ್ಗದರ್ಶಕ ಬೆಳಕಾಗಿ ಕಾರ್ಯನಿರ್ವಹಿಸುವುದನ್ನು ಮುಂದುವರಿಸುತ್ತವೆ ಎಂದು ನನಗೆ ವಿಶ್ವಾಸವಿದೆ" ಎಂದು ಮೋದಿ ಹೇಳಿದ್ದಾರೆ. ಬುಧವಾರ, ಬಾಂಗ್ಲಾದೇಶದ ಮಾಜಿ ಪ್ರಧಾನಿ ಖಲೀದಾ ಜಿಯಾ ಅವರ ಅಂತ್ಯಕ್ರಿಯೆ



ಢಾಕಾದಲ್ಲಿ ಸರ್ಕಾರಿ ಗೌರವಗಳೊಂದಿಗೆ ನಡೆಯಿತು. ವಿದೇಶಾಂಗ ಸಚಿವ ಎಸ್ ಜೈಶಂಕರ್ ಸೇರಿದಂತೆ ಸಾವಿರಾರು ಜನರು ಮತ್ತು ಹಲವಾರು ಗಣ್ಯರು ಅಂತ್ಯಕ್ರಿಯೆಯಲ್ಲಿ ಭಾಗವಹಿಸಿದ್ದರು.

80ವರ್ಷದಬಾಂಗ್ಲಾದೇಶರಾಷ್ಟ್ರೀಯತಾವಾದಿ ಪಕ್ಷದ (ಬಿಎನ್‌ಪಿ) ಪ್ರಮುಖರನ್ನು ದೇಶದ ಸಂಸತ್ತಿನ ನೆಲೆಯಾದ ಶೇರ್–ಎ–ಬಾಂಗ್ಲಾ ನಗರದಲ್ಲಿ ಅವರ ಪತಿ ಮತ್ತು ಮಾಜಿ ಅಧ್ಯಕ್ಷ ಜಿಯಾವುರ್ ರೆಹಮಾನ್ ಅವರ ಪಕ್ಕದಲ್ಲಿ ಸಮಾಧಿ ಮಾಡಲಾಯಿತು.

ಅಂತ್ಯಕ್ರಿಯೆಗೆ ಮೊದಲು, ಜೈಶಂಕರ್ ಖಲೀದಾ ಜಿಯಾ ಅವರ ಮಗ ಮತ್ತು ಮುಂದಿನ ಬಾಂಗ್ಲಾದೇಶ ಪ್ರಧಾನಿ ಎಂದು ವ್ಯಾಪಕವಾಗಿ ಭಾವಿಸಲಾದ ಬಿಎನ್‌ಪಿ ಅಧ್ಯಕ್ಷ ತಾರಿಕ್ ರೆಹಮಾನ್ ಅವರನ್ನು ಭೇಟಿಯಾದರು.

# ಮಾತೃಮಂಡಳಿ ಪ್ರೌಢಶಾಲೆಯ ವಾರ್ಷಿಕೋತ್ಸವ




**ಮೈಸೂರು:** ಜೀವನ ಕಳೆದುಕೊಳ್ಳಬೇಡಿ, ಬದುಕಿ ಸಾಧಿಸಿ ಎಂದು ಅಂತಾರಾಷ್ಟ್ರೀಯ ಖ್ಯಾತಿಯ ಜಾನಪದ ಗಾಯಕ ಅಮ್ಮ ರಾಮಚಂದ್ರ ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ನಗರದ ವಿ.ವಿ. ಮೊಹಲ್ಲಾದ ಮಾತೃಮಂಡಳಿ ಪ್ರೌಢಶಾಲೆಯಲ್ಲಿ ಗುರುವಾರ ನಡೆದ ವಾರ್ಷಿಕೋತ್ಸವದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಅವರು, ನಾನು ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ನಾಲ್ಕು ವಿಷಯಗಳಲ್ಲಿ ಫೇಲಾದಾಗ ಆತ್ಮಹತ್ಯೆ ಮಾಡಿಕೊಳ್ಳಬೇಕು ಎಂದಿದ್ದೆ. ಆದರೆ ನನ್ನ ತಾಯಿ ತಡೆದು, ಬುದ್ಧಿವಾದ ಹೇಳಿದರು. ಅದರಂತೆ ನಾನು ಕಷ್ಟಪಟ್ಟು ಓದಿ, ಎರಡು ವಿಷಯದಲ್ಲಿ ಸ್ನಾತಕೋತ್ತರ ಪದವಿಯನ್ನು ಚಿನ್ನದ ಪದಕದೊಂದಿಗೆ ಪಡೆದು, ಈಗ ಪಿಎಚ್.ಡಿಯೂ ಮುಗಿದಿದ್ದು, ಜ.5 ರಂದು ನಡೆಯುವ ಮೈಸೂರು ವಿವಿ ಘಟಿಕೋತ್ಸವದಲ್ಲಿ ಡಾಕ್ಟರೇಟ್ ಪಡೆಯುತ್ತಿದ್ದೇನೆ. ಆದ್ದರಿಂದ ನೀವು ಕಡೆ ತಂದೆ– ತಾಯಿಯ ಕಣ್ಣಲ್ಲಿ ನೀರು ಹಾಕಿಸದೇ ಆನಂದಭಾಷ್ಪ ಬರುವ ರೀತಿಯಲ್ಲಿ ಓದಬೇಕು ಎಂದರು.

ವಿದ್ಯೆ ಇವತ್ತು ಬಹುಮುಖ್ಯ.ಡಾ.ಬಿ.ಆರ್. ಅಂಬೇಡ್ಕರ್ ಅವರು ತಮ್ಮ ವಿದ್ಯೆಯಿಂದಲೇ ವಿಶ್ವಜ್ಞಾನಿಯಾದರು. ಆದ್ದರಿಂದ ವಿದ್ಯಾರ್ಥಿಗಳು ಟಿವಿ ನೋಡುವುದನ್ನು ಬಿಟ್ಟು, ಮೊಬೈಲ್ ಬಳಕೆ ಕಡಿಮೆ ಮಾಡಿ, ಓದುವುದರತ್ತ ಸದಾ ಚಿತ್ತ ಹರಿಸಬೇಕು, ವಿದ್ಯಾರ್ಥಿಗಳಿಗೆ ಶಿಕ್ಷಣ ಹಾಗೂ ಸಂಸ್ಕೃತಿ ಮುಖ್ಯ ಎಂದು ಅವರು ಹೇಳಿದರು.

ಕಾರ್ಯಕ್ರಮ ಉದ್ಘಾಟಿಸಿದ ಹಿರಿಯ ಪತ್ರಕರ್ತ ಅಂಶಿ ಪ್ರಸನ್ನಕುಮಾರ್ ಮಾತನಾಡಿ, ಶಿಸ್ತು, ಕಠಿಣ ಪರಿಶ್ರಮ, ಆತ್ಮವಿಶ್ವಾಸ, ಛಲದಿಂದ ಏನು ಬೇಕಾದರೂ ಸಾಧಿಸಬಹುದು. ಶಿಕ್ಷಕರು ಹಾಗೂ ಪೋಷಕರ ಬೆಂಬಲದಿಂದ ಗುರಿ ಸಾಧಿಸುವ ಕಡೆ ಗಮನ ನೀಡಿ ಎಂದು ಸಲಹೆ ಮಾಡಿದರು.

ಮಾತೃಮಂಡಳಿ ವಿದ್ಯಾಸಂಸ್ಥೆಯ ಗೌರವ ಕಾರ್ಯದರ್ಶಿ ವಾಣಿ ಪ್ರಸಾದ್ ಅಧ್ಯಕ್ಷತೆ ವಹಿಸಿದ್ದರು. ಗೌರವಾಧ್ಯಕ್ಷೆ ವಿಜಯಲಕ್ಷ್ಮಿ ಅರಸ್, ಉಪಸ್ಥಿತರಿದ್ದರು. ಸದಸ್ಯೆ ಶಕುಂತಲಾ ವೇಣುಗೋಪಾಲ್ ವಿಶೇಷ ಆಹ್ವಾನಿತರಾಗಿದ್ದರು. ಸದಸ್ಯರಾದ ಪದ್ಮಾ, ಉಷಾ ಹೆಗಡೆ, ಪಿಯು ಕಾಲೇಜು ಪ್ರಾಂಶುಪಾಲ ಸುರೇಶ್, ಸುಮಿತ್ರಾ, ಆನಂದರಾಮ್, ಮಮತಾ, ಹರೀಶ್ ಮೊದಲಾದವರು ಇದ್ದರು. ಮುಖ್ಯ ಶಿಕ್ಷಕಿ ಅನಿತಾ ಸ್ವಾಗತಿಸಿದರು. ಸಹ ಶಿಕ್ಷಕಿ ಶೋಭಾ ಕಾರ್ಯಕ್ರಮ ನಿರೂಪಿಸಿದರು. ರಮ್ಯಾ ಹಾಗೂ ಅನುರಾಧ ಅತಿಥಿಗಳನ್ನು ಪರಿಚಯಿಸಿದರು.



# ಪ್ರಭಾಸ್-ಸಂಜಯ್ ದತ್ ನಡುವಿನ ಹೈ ವೋಲ್ಟೇಜ್ ಕಾದಾಟ; ಕುತೂಹಲ ಕೆರಳಿಸಿದ 'ದಿ ರಾಜಾಸಾಬ್' ಟ್ರೈಲರ್

ಭಾರತೀಯ ಚಿತ್ರರಂಗದ ಬಹುನಿರೀಕ್ಷಿತ ಹಾರರ್ ಫ್ಯಾಂಟಸಿ ಚಿತ್ರ 'ದಿ ರಾಜಾಸಾಬ್'ನ ಟ್ರೈಲರ್ 2.0 ಬಿಡುಗಡೆಯಾಗಿದ್ದು, ಚಿತ್ರದ ಕಥೆ ಮತ್ತು ಭಾವನಾತ್ಮಕ ಆಯಾಮಗಳ ಮೇಲೆ ಹೊಸ ಬೆಳಕು ಚೆಲ್ಲಿದೆ.

ಪ್ರಭಾಸ್ ನಾಯಕನಾಗಿ ನಟಿಸಿರುವ ಈ ಚಿತ್ರದಲ್ಲಿ, ಸಂಮೋಹನ ವಿದ್ಯೆಯ ಮೂಲಕ ಭಯವನ್ನು ನಿಯಂತ್ರಿಸುವ ಶಕ್ತಿಯಾಗಿ ಸೂಪರ್‌ಸ್ಟಾರ್ ಸಂಜಯ್ ದತ್ ಅಬ್ಬರಿಸಿದ್ದಾರೆ.

ಚಿತ್ರದಲ್ಲಿ ಪ್ರಭಾಸ್ 'ರಾಜಾಸಾಬ್' ಎಂಬ ಪಾತ್ರದಲ್ಲಿ ಕಾಣಿಸಿಕೊಂಡಿದ್ದು, ಅಜ್ಜಿ ಮೇಲೆ ಅಪಾರ ಪ್ರೀತಿ ಹೊಂದಿರುವ ವ್ಯಕ್ತಿಯಾಗಿ ನಟಿಸಿದ್ದಾರೆ. ತನ್ನ ಪ್ರಶ್ನೆಗಳಿಗೆ ಉತ್ತರ ಹುಡುಕುತ್ತಾ ಹೋದ ನಾಯಕ, ಅಂತಿಮವಾಗಿ ಪಾಳುಬಿದ್ದ ಬಂಗಲೆ ತಲುಪುತ್ತಾನೆ. ಆ ಬಂಗಲೆಯೇ ದಿ ರಾಜಸಾಬ್ ಸಿನಿಮಾದ ಕರಾಳ ರಹಸ್ಯಗಳ ತಾಣ. ಅಲ್ಲಿ ಸಂಮೋಹನ ವಿದ್ಯೆಯ ಮೂಲಕ ಮನಸ್ಸನ್ನೇ ಸೆರೆಹಿಡಿಯುವ ವಿಲನ್ ಸಂಜಯ್ ದತ್ ಎದುರಾಗುತ್ತಾರೆ. ದೈಹಿಕ ಬಲಕ್ಕಿಂತ ಹೆಚ್ಚಾಗಿ ಮಾನಸಿಕ ಆಟಗಳ ಮೂಲಕ ಪ್ರಭಾಸ್ ಅವರನ್ನು ಕಟ್ಟಿಹಾಕುವ ವಿಭಿನ್ನ ಪಾತ್ರದಲ್ಲಿ ಸಂಜಯ್ ದತ್ ಮಿಂಚಿದ್ದಾರೆ.

ಬೋಮನ್ ಇರಾನಿ ನಿಗೂಢ ಮನೋವೈದ್ಯ ಮತ್ತು ಪ್ಯಾರಾನಾರ್ಮಲ್ ತನಿಖಾಧಿಕಾರಿಯಾಗಿ ಚಿತ್ರಕ್ಕೆ ಹೊಸ ತಿರುವು ನೀಡಿದ್ದಾರೆ. ಮಾಳವಿಕಾ ಮೋಹನನ್, ನಿಧಿ ಅಗರ್ವಾಲ್ ಮತ್ತು ರಿದ್ಧಿ ಕುಮಾರ್ ಕಥೆಗೆ ಗ್ಲಾಮರ್ ಮತ್ತು ಭಾವನಾತ್ಮಕ ಬಲ ತುಂಬಿದ್ದಾರೆ. ಚಿತ್ರವು ಉನ್ನತ ಮಟ್ಟದ ಗಿಈಫಿ ಮತ್ತು ಅದ್ದೂರಿ ಸೆಟ್‌ಗಳನ್ನು ಹೊಂದಿದ್ದು, ಹಾರರ್ ಪ್ರಿಯರಿಗೆ ಹೊಸ ಅನುಭವ ನೀಡಲಿದೆ.

ನಟ ಪ್ರಭಾಸ್ ಮಾತು: "ಕಳೆದ ಮೂರು ವರ್ಷಗಳ



ಪರಿಶ್ರಮ ಮತ್ತು ಜವಾಬ್ದಾರಿಯು ನಿರ್ದೇಶಕ ಮಾರುತಿ ಅವರ ಕಣ್ಣಲ್ಲಿ ನೀರು ತರಿಸಿದೆ. ಸಾಲು ಸಾಲು ಆಕ್ಷನ್ ಸಿನಿಮಾಗಳ ನಡುವೆ ಪ್ರೇಕ್ಷಕರಿಗೆ ಒಂದು ಪರಿಪೂರ್ಣ ಮನರಂಜನಾ ಸಿನಿಮಾ ನೀಡಬೇಕೆಂಬ ಹಂಬಲದಿಂದ ಈ 'ಹಾರರ್-ಕಾಮಿಡಿ' ಸಿದ್ಧವಾಗಿದೆ. ಈ ಚಿತ್ರದ ಕ್ಲೈಮ್ಯಾಕ್ಸ್



ಬಗ್ಗೆ ಕೇಳಿದಾಗ ನಾನು ಮಾರುತಿ ಅವರ ಬರವಣಿಗೆಯ ಫ್ಯಾನ್ ಆದೆ. 15 ವರ್ಷಗಳ ನಂತರ ನನ್ನ ಅಭಿಮಾನಿಗಳಿಗೆ 'ಡಾರ್ಲಿಂಗ್' ಶೈಲಿಯ ಪೂರ್ಣ ಪ್ರಮಾಣದ ಎಂಟರ್‌ಟೈನ್‌ಮೆಂಟ್ ಸಿಗಲಿದೆ. ಈ ಸಂಕ್ರಾಂತಿಗೆ ಎಲ್ಲ ಸಿನಿಮಾಗಳು ಗೆಲ್ಲಲಿ, ಅದರ ಜೊತೆಗೆ 'ರಾಜಾಸಾಬ್' ಬ್ಲಾಕ್‌ಬಸ್ಟರ್ ಆಗಲಿ" ಎಂದು ಆಶಿಸಿದರು.

ನಿರ್ದೇಶಕ ಮಾರುತಿ ಮಾತು: "ಪ್ರಭಾಸ್ ಅವರಂತಹ ದೊಡ್ಡ ನಟರಿದ್ದಾಗ ನಿರೀಕ್ಷೆಗಳು ಆಕಾಶ ಮುಟ್ಟಿರುತ್ತವೆ. ಅದಕ್ಕೆ ತಕ್ಕಂತೆ ನಾವು ಕಳೆದ ಮೂರು ವರ್ಷಗಳಿಂದ ಹಗಲಿರುಳು ಶ್ರಮಿಸಿದ್ದೇವೆ. ಈ ಹಾರರ್-ಕಾಮಿಡಿ ಪ್ರಕಾರವು ಅಂತರಾಷ್ಟ್ರೀಯ ಮಟ್ಟದಲ್ಲಿ ಮಿಂಚುವ ಸಾಮರ್ಥ್ಯ ಹೊಂದಿದೆ. ಸಂಕ್ರಾಂತಿ ಹಬ್ಬದ ಸಂಭ್ರಮಕ್ಕೆ ಈ ಸಿನಿಮಾ ಪ್ರೇಕ್ಷಕರಿಗೆ ರಸದೌತಣ ನೀಡಲಿದೆ" ಎಂದರು.

ಮಾರುತಿ ನಿರ್ದೇಶನದ ಹಾಗೂ ಪೀಪಲ್ ಮೀಡಿಯಾ ಫ್ಯಾಕ್ಟರಿ ಬ್ಯಾನರ್ ಅಡಿಯಲ್ಲಿ ಟಿ.ಜಿ. ವಿಶ್ವಪ್ರಸಾದ್ ನಿರ್ಮಿಸಿರುವ ಈ ಚಿತ್ರ ಇದೇ 9 ರಂದು ವಿಶ್ವದಾದ್ಯಂತ ಕನ್ನಡ ಸೇರಿದಂತೆ ತೆಲುಗು, ಹಿಂದಿ, ತಮಿಳು ಮತ್ತು ಮಲಯಾಳಂ ಭಾಷೆಗಳಲ್ಲಿ ಬಿಡುಗಡೆಯಾಗಲಿದೆ.

# ಕೊನೆಗೂ 'ಡಿ'ಗೆ ಸಿಕ್ಕಿತು ಫೆಬ್ರವರಿಯಲ್ಲಿ ಬಿಡುಗಡೆಯ ಭಾಗ್ಯ

ತಿರುಮಲೇಶ್ ವಿ ನಿರ್ದೇಶನದ ಅದ್ವಿತ ಫಿಲಂ ಫ್ಯಾಕ್ಟರಿ ಹಾಗೂ ಮಸ್ಕ್ಯುಲರ್ ಗ್ರೂಪ್ ಲಾಂಛನದಲ್ಲಿ ಭಾರ್ಗವಿ ಮುರಳಿ ಹಾಗೂ ರಂಗನಾಥ್ ಬಿ ನಿರ್ಮಿಸಿರುವ "ಆಪರೇಶನ್ ಡಿ" ಚಿತ್ರವನ್ನು 2026 ಫೆಬ್ರವರಿ ಯಲ್ಲಿ ಬಿಡುಗಡೆ ಮಾಡಲು ಚಿತ್ರತಂಡ ನಿರ್ಧರಿಸಿದ್ದಾರೆ.

ಹಿಂದೆ ಬಿಡುಗಡೆಗೊಂಡಿದ್ದ ಟೀಸರ್ ಗೆ ಆಕ್ಷನ್ ಪ್ರಿನ್ಸ್ ಧ್ರುವಸರ್ಜಾ ಅವರ ಸಾತ್ ಜೊತೆಗೆ ನಿರ್ದೇಶಕ ಶ್ರೀನಿ, ನಟ ಸುದರ್ಶನ್ ರಂಗಪ್ರಸಾದ್ ಹಾಗೂ ಸಂಗೀತ ಭಟ್ ಸುದರ್ಶನ್ ತಮ್ಮ ಕಂಠದೊಂದಿಗೆ ಸಾತ್ ನೀಡಿದ್ದರು

"ಆಪರೇಷನ್ ಡಿ" ಸಸ್ಪೆನ್ಸ್ ಥ್ರಿಲ್ಲರ್ ಹಾಗೂ ಮರ್ಡರ್ ಮಿಸ್ಟರಿ ಕಥೆ ಆಧರಿಸಿದ ಚಿತ್ರ ಬಹುತೇಕ ರಂಗಭೂಮಿ ಕಲಾವಿದರೆ ಇದರಲ್ಲಿ ಅಭಿನಯಿಸಿದ್ದಾರೆ ಎನ್ನುವುದು ವಿಶೇಷ

ಚಿತ್ರದಲ್ಲಿ ನಾಲ್ಕು ಹಾಡುಗಳಿದೆ, ವೇದಿಕ ಕೆಂಪಗಿರಿ ತಿರುಮಲೇಶ್ ಹಾಡನ್ನು ಬರೆದಿದ್ದಾರೆ , ಭಗೀರ, ಡೆವಿಲ್, ಮಾರ್ಕ್ ಖ್ಯಾತಿಯ ಗಾಯಕ ಅನಿರುದ್ಧಶಾಸ್ತ್ರಿ ಅವರ ಮೊದಲ ಆಲ್ಬಮ್, ಈ ಸಿನಿಮಾದ ಮೂಲಕ ಅವರು ಒಂದೇ ಸಿನಿಮಾದಲ್ಲಿ 4 ಹಾಡನ್ನು ಹಾಡಿದ್ದಾರೆ ಇವರ ಜೊತೆ ಪೃಥ್ವಿಭಟ್ ಹಾಗೂ ವೇದಿಕ ಧ್ವನಿಗೂಡಿಸಿದ್ದಾರೆ

ವೇದಿಕ ಹಾಗೂ ಸಂತೋಷ್ ಆರ್ಮುಗಮ್ ಸಂಗೀತ ನಿರ್ದೇಶನ ಹಾಗೂ ರಾಹುಲ್ ಅರ್ಜ್ ಕಲಾ ಃಉಬ ನೀಡಿದ್ದಾರೆ , ಭಾರ್ಗವಿ ಮುರಳಿ, ರಂಗನಾಥ್ ಹಾಗೂ ಸುರೇಶ್ ಅವರು ನಿರ್ಮಾಣದ ಹೊಣೆಯನ್ನು ಹೊತ್ತಿದ್ದಾರೆ

ಇನ್ನು ಚಿತ್ರದಲ್ಲಿ ನಟಿಸಿರುವ ರುದ್ರೇಶ್ ಬೂದನೂರು, ಸುಹಾಸ್ ಆತ್ರೇಯಸ್, ವಿನೋದ್



ದೇವ್, ಸ್ನೇಹ ಭಟ್, ಇಂಚರ ಭರತ್ ರಾಜ್, ಮಹೇಶ್ ಎಸ್ ಕಲಿ, ಶ್ರೀಧರ್, ಪೃಥ್ವಿ ಬನವಾಸಿ, ರೂಪ, ಆಶಾ, ಧನಲಕ್ಷ್ಮೀ, ಶಿವಾನಂದ್, ಸಂಚಯ ನಾಗರಾಜ್, ವೆಂಕಟಾಚಲ, ಸೂರ್ಯವಂಶಿ, ಶಿವಮಂಜು, ನಂಜಪ್ಪ ಎಸ್ ದೊಡ್ಡಮದುರೆ, ಶಿವಲಿಂಗು, ಕ್ರೇಜಿ ನಾಗರಾಜ್, ಜೂ.ನರಸಿಂಹರಾಜು ಹಾಗೂ ಮುಂತಾದವರು ನಟಿಸಿದ್ದಾರೆ.. ಸಂಕಲನಕಾರ ವಿಕ್ರಮ್ ಶ್ರೀಧರ್, ಛಾಯಾಗ್ರಾಹಕ ಕಾರ್ತಿಕ್ ಪ್ರಸಾದ್, ಸಂಭಾಷಣೆ ರಾಜರವಿಶಂಕರ್, ನೃತ್ಯನಿರ್ದೇಶಕ ಜೈಹರಿಪ್ರಸಾದ್, ಕಲಾ ನಿರ್ದೇಶಕ ತರ್ಮಾಕೋಲ್ ಶ್ರೀನಿವಾಸ್ ಸೇರಿದಂತೆ ಅನೇಕ ತಂತ್ರಜ್ಞರು ಕೆಲಸವನ್ನು ಚೆನ್ನಾಗಿ ನಿರ್ವಹಿಸಿದ್ದಾರೆ ಸಿನಿಮಾವು ಫೆಬ್ರವರಿ ಮೊದಲ ವಾರ ತೆರೆಗೆ ತರಲು ಸಿದ್ಧತೆ ನಡೆಯುತ್ತಿದೆ ಎಂದು ನಿರ್ದೇಶಕ ತಿರುಮಲೇಶ್ ವಿ ತಿಳಿಸಿದ್ದಾರೆ

# ಆರ್‌ಸಿ ಸ್ಟುಡಿಯೋಸ್‌ನ 'ಫಾದರ್' ಚಿತ್ರ ಬಿಡುಗಡೆಗೆ ಸಿದ್ಧ

ಆರ್‌ಸಿ ಸ್ಟುಡಿಯೋಸ್‌ನ ಫಾದರ್ ಚಿತ್ರ ಬಿಡುಗಡೆಗೆ ಸಿದ್ಧವಾಗಿದೆ.

ಇತ್ತೀಚೆಗೆ ಫಾದರ್' ಸಿನಿಮಾದ ಥೀಮ್ ವಿಡಿಯೋ ಅದ್ದೂರಿಯಾಗಿ ರಿಲೀಸ್ ಆಯಿತು. ಚಂದ್ರು ಅವರ 'ಫಾದರ್'. ಬಿಡುಗಡೆ ಮಾಡಿದ್ದು ವಿಶೇಷ.

ಅಪ್ಪ ಮಗನ ವ್ಯಾಲ್ಯೂ ತಿಳಿಸುವ ಸಿನಿಮಾ ನಿರ್ಮಾಣ ಮಾಡಿರುವುದು ವಿಶೇಷ. ಈ ಥೀಮ್ ವಿಡಿಯೋ ನೋಡಿದವರಿಗೆ ಇದು ಗೊತ್ತಾಗುತ್ತಿದೆ.

ತಂದೆಯ ಪಾತ್ರದಲ್ಲಿ ಪ್ರಕಾಶ್ ರಾಜ್, ಮಗನ



ಪಾತ್ರದಲ್ಲಿ ಡಾರ್ಲಿಂಗ್ ಕೃಷ್ಣ, ಈ ಅಪರೂಪದ ಕಾಂಬೋದಲ್ಲಿ ಬರುತ್ತಿರುವ 'ಫಾದರ್', ಸಾಕಷ್ಟು ನಿರೀಕ್ಷೆ ಹುಟ್ಟಿಸಿದೆ. ಮೈಸೂರು, ಧರ್ಮಸ್ಥಳ, ಮಂಗಳೂರು, ಬೆಂಗಳೂರು ಹಾಗೂ ವಾರಣಾಸಿಯಲ್ಲೂ ಚಿತ್ರೀಕರಣಗೊಂಡಿದೆ.

ಆರ್.ಸಿ.ಸ್ಟುಡಿಯೋಸ್ ಮೂಲಕ ನಿರ್ಮಾಣವಾಗಿರುವ ಈ ಚಿತ್ರಕ್ಕೆ ರಾಜಮೋಹನ್ ನಿರ್ದೇಶನ ಮಾಡಿದ್ದಾರೆ, ಸುಜ್ಞಾನ್ ಛಾಯಾಗ್ರಹಣ, ನಕುಲ್ ಅಭಯಂಕರ್ ಸಂಗೀತ ನಿರ್ದೇಶನ ಮಾಡಿದ್ದಾರೆ.

# 'ಕೊರಗಜ್ಜ' ಸಿನಿಮಾದ ಹಾಡುಗಳ ಪ್ರೀಮಿಯರ್ ರೀಲ್ಸ್ ಕಾಂಟೆಸ್ಟ್‌ಗೆ ಕೋಟಿ ರುಪಾಯಿಯಷ್ಟು ಬಹುಮಾನ ಘೋಷಣೆ

ಇತ್ತೀಚೆಗೆ ಬಿಡುಗಡೆಗೊಂಡಿದ್ದ ಸುಧೀರ್ ಅತ್ತಾವರ್ ರವರ 'ಕೊರಗಜ್ಜ' ಸಿನಿಮಾದ ಹಾಡುಗಳನ್ನು ಹೊಟೆಲ್ ಹಾಲಿಡೇ ಇನ್ ನಲ್ಲಿ ನಡೆದ ವರ್ಣ ರಂಜಿತ ಸಮಾರಂಭದಲ್ಲಿ ಬಿಗ್ ಎಫ್ ಎಮ್ 92.7 ಮತ್ತು ಸುಮಾರು ಮುನ್ನೂರಕ್ಕೂ ಹೆಚ್ಚಿನ ಆಡಿಯೋ ಪ್ಲಾಟ್ ಫಾರ್ಮ್ ಗಳಲ್ಲಿ ಹೊಸವರ್ಷಾರಂಭದ ವರ್ಣರಂಜಿತ ಕಾರ್ಯಕ್ರಮದ ನಡುವೆ ನೆರೆದ ಗಣ್ಯರ ಮತ್ತು ಪತ್ರಕರ್ತರ ಸಮ್ಮುಖದಲ್ಲ

"ಸಾಂಗ್ಸ್ ಪ್ರೀಮಿಯರ್" ಎನ್ನುವ ವಿನೂತನ ಕಾರ್ಯಕ್ರಮದ ಮುಖಾಂತರ ಹರಿಬಿಡಲಾಯಿತು.

ದೇಶದ ಮೊದಲ ಪಾಪ್ ತಾರೆ ಹಾಗೂ ಅಂತಾರಾಷ್ಟ್ರೀಯ ಖ್ಯಾತಿಯ ಶರೋನ್ ಪ್ರಭಾಕರ್,ಹಿರಿಯ ನಟಿ ಭವ್ಯ ನಿರ್ದೇಶಕ ನಾಗತಿ ಹಳ್ಳಿ ಚಂದ್ರಶೇಕರ್, ಮೊದಲಾದ ಸೆಲೆಬ್ರೆಟಿಗಳು ಈ ಸಮಾರಂಭಕ್ಕೆ ಸಾಕ್ಷಿಯಾದರು.

ವೇದಿಕೆಯಲ್ಲಿ ಕುಣಿದು ಕುಪ್ಪಳಿಸಿದ ಆರ್ ಜೆ ಗಳು:

ಚಿತ್ರದ ಅಫಿಷಿಯಲ್ ರೇಡಿಯೋ ಪಾರ್ಟ್ ನರ್ಸ್ ಆಗಿರುವ 92.7 ಬಿಗ್ ಎಫ್ ಎಮ್ ನ ದಕ್ಷಿಣ ಭಾರತದ ಮುಖ್ಯಸ್ಥ ವಿಶ್ವಾಸ್ ರವರು ಮಾತನಾಡುತ್ತಾ, ಕೊರಗಜ್ಜ ಚಿತ್ರದ ಅಫಿಷಿಯಲ್ ರೇಡಿಯೋ ಪಾರ್ಟ್ ನರ್ಸ್ ಆಗಿರುವುದು ಅವಿಸ್ಮರಣೀಯ ಕ್ಷಣ ಎಂದು ಬಣ್ಣಿಸಿ, ಎಲ್ಲಾ ಆರ್ ಜೆ ಗಳ ಸಮೇತ ಟೆಕ್ನಿಕಲ್ ಟೀಮನ್ನು ಪರಿಚಯಿಸಿದರು.ನಂತರ ತ್ರಿವಿಕ್ರಮ ಸಿನೆಮಾಸ್ ಮತ್ತು ಸಕ್ಸಸ್ ಫಿಲಂಸ್ ಬ್ಯಾನರ್ ಅಡಿಯ "ಕೊರಗಜ್ಜ" ಚಿತ್ರದ ಹಾಡುಗಳ ಪ್ರೀಮಿಯರ್ ಆಗಿ ಕೇಳುಗರಿಗೆ ತೆರೆದುಕೊಳ್ಳುತ್ತಿದ್ದಂತೆಯೇ ಆರ್ ಜೆ ವಿಕ್ಕಿ, ಆರ್ ಜೆ ದುಶ್ಯಂತ್, ಆರ್ ಜೆ ಪ್ರದೀಪ್ ಸಮೇತ ಬಿಗ್ ಎಫ್ ಎಮ್ ನ ಸಂಪೂರ್ಣ ತಂಡ ಕೊರಗಜ್ಜ ಚಿತ್ರದ ಹಾಡುಗಳಿಗೆ

ಹೆಜ್ಜೆ ಹಾಕಿ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ತಂದರು.

ಮಂತ್ರ ಮುಗ್ಧ ಗೊಳಿಸಿದ ಎಐ ಸ್ಪರ್ಷದ ಗಾಳಿ ಗಂಧ ಹಾಡು:

ವರ್ಷಾರಂಭದ ಕೌಂಟ್ ಡೌನ್ ಆಗುತ್ತಿದ್ದಂತೆಯೇ ಹ್ಯಾಪ್ಪೀ ನ್ಯೂ ಇಯರ್ ಎಂದು ಎಲ್ಲರೂ ಶುಭಾಶಯ ವಿನಿಮಯ ಮಾಡುತ್ತಿರುವಾಗಲೇ ಎಲ್ ಇ ಡಿ ಸ್ಕ್ರೀನ್ ಮೇಲೆ ಶ್ರೇಯ ಘೋಷಾಲ್ ಮತ್ತು ಆರ್ಮಾನ್ ಮಲಿಕ್ ಹಾಡಿದ್ದ



ಸುಧೀರ್ ಅತ್ತಾವರ್ ಸಾಹಿತ್ಯ, ಗೋಪಿ ಸುಂದರ್ ನ ವಿಶೇಷ ಕಂಪೋಸಿಷನ್ ನ ಎ ಐ ಸ್ಪರ್ಷದ "ಗಾಳಿ ಗಂಧ ..." ಹಾಡು ಮೂಡಿಬರುತ್ತಿದ್ದಂತೆಯೇ ಇದು ವರ್ಲ್ಡ್ ಕ್ಲಾಸ್ ವಿಷುವಲ್ಸ್ ಎಂದು ಶರೋನ್ ಪ್ರಭಾಕರ್ ಸಮೇತ ನೆರೆದಿದ್ದ ಎಲ್ಲರಿಂದಲೂ ಪ್ರಶಂಸೆ ಗೊಳಪಟ್ಟಿತು.

ಹಿರಿಯ ಕಲಾವಿದೆ ಭವ್ಯ ರವರ ಯಕ್ಷಗಾನ: ಮಹಿಷಾಸುರ"ಯಕ್ಷಗಾನ ಸನ್ನಿವೇಶದಲ್ಲಿ ಮಹಿಷನ ತಾಯಿ ಮಾಲಿನಿ ಪಾತ್ರದಲ್ಲಿ ಹಿರಿಯ ನಟಿ ಭವ್ಯ ಎಲ್ಲರ ಗಮನಸೆಳೆದರು. ಮಂಗಳೂರಿನ ಜಯದೇವ್ ಮತ್ತು ತಂಡ " ಮಹಿಷಾಸುರ" ಯಕ್ಷಗಾನದ ತುಣುಕು ಪ್ರದರ್ಶಿಸಿತು.

ಹಿನ್ನೆಲೆ ಗಾಯಕರಾದ ರಮೇಶ್ಚಂದ್ರ ಮತ್ತು ಪ್ರತಿಮಾ ಭಟ್ ಹಾಡುಗಳು ಸಮಾರಂಭಕ್ಕೆ ಕಳೆಕಟ್ಟಿತ್ತು ಅನೇಕ ಹಿರಿಯ ಜರ್ನಲಿಸ್ಟ್ ಗಳೂ ಹಾಡು-ಕುಣಿತದಲ್ಲಿ ಭಾಗವಹಿದರು. ಆರ್ ಜೆ ಪ್ರದೀಪ್ ಮತ್ತು ನಿರ್ದೇಶಕ ಸುಧೀರ್ ಅತ್ತಾವರ್ ಕಾರ್ಯಕ್ತಮ ನಿರ್ವಹಿಸಿದರು.ನಿರ್ಮಾಪಕ ತ್ರಿವಿಕ್ರಮ ಸಪಲ್ಯ ಮತ್ತು ಇಪಿ ವಿದ್ಯಾಧರ್ ಶೆಟ್ಟಿ ಅಥಿತಿಗಳನ್ನು ಗೌರವಿದರು.

ಅನೇಕ ಪತ್ರಕರ್ತರು ಸ್ಪಾಟ್ ಬಹುಮನಗಳನ್ನೂ ಗೆದ್ದರು.

# ಯುವಪ್ರತಿಭೆ ಶಕ್ತಿಪ್ರಸಾದ್ ನಿರ್ದೇಶನದ ಈ ಚಿತ್ರದ ಪ್ರಮುಖ ಪಾತ್ರದಲ್ಲಿ ಚೈತ್ರಾ ಜೆ ಆಚಾರ್ ನಟನೆ

ಸುರಾಮ್ ಮೂವೀಸ್ ಲಾಂಛನದಲ್ಲಿ ಜಯರಾಮ್ ದೇವಸಮುದ್ರ ನಿರ್ಮಿಸುತ್ತಿರುವ ಹಾಗೂ ಶಕ್ತಿಪ್ರಸಾದ್ ನಿರ್ದೇಶನದಲ್ಲಿ ಚೈತ್ರಾ ಜೆ ಆಚಾರ್ ಪ್ರಮುಖಪಾತ್ರದಲ್ಲಿ ನಟಿಸುತ್ತಿರುವ **"LSD"**(ಲೈಲಾಸ್ ಸ್ವೀಟ್ ಡ್ರೀಮ್) ಚಿತ್ರದ ಟೈಟಲ್ ಟೀಸರ್ ಇತ್ತೀಚೆಗೆ ಬಿಡುಗಡೆಯಾಗಿದೆ. ಟೈಟಲ್ ಟೀಸರ್ ಬಹಳ ಕುತೂಹಲ ಮೂಡಿಸಿದೆ. ಟೀಸರ್ ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು.

**"LSD",** ನಮ್ಮ ಸುರಾಮ್ ಮೂವೀಸ್ ನಿರ್ಮಾಣದ ನಾಲ್ಕನೇ ಚಿತ್ರ. "ನಿದ್ರಾದೇವಿ ನೆಕ್ಸ್ಟ್ ಡೋರ್" ನಮ್ಮ ಸಂಸ್ಥೆಯ ಮೊದಲ ನಿರ್ಮಾಣದ ಚಿತ್ರ. ನಂತರ ಶ್ರೀಮುರಳಿ ಅಭಿನಯದ "ಉಗ್ರಾಯಧಮ್" ಹಾಗೂ "ನೀ ನಂಗೆ ಅಲ್ವಾ" ಚಿತ್ರಗಳ ಚಿತ್ರೀಕರಣ ನಡೆಯುತ್ತಿದೆ. ಹೊಸಪ್ರತಿಭೆಗಳಿಗೆ ಅವಕಾಶ ಮಾಡಿಕೊಡಬೇಕೆಂಬುದು ನಮ್ಮ ಸಂಸ್ಥೆಯ ಮುಖ್ಯ ಉದ್ದೇಶ. ಹಾಗಾಗಿ ಯುವ ಪ್ರತಿಭೆ ಶಕ್ತಿಪ್ರಸಾದ್ ಅವರು ಬಂದು **"LSD"** ಚಿತ್ರದ ಕಥೆ ಹೇಳಿದಾಗ ಬಹಳ ಇಷ್ಟವಾಯಿತು. ನಿರ್ಮಾಣಕ್ಕೆ ಮುಂದಾದೆ. ಚೈತ್ರಾ ಜೆ ಆಚಾರ್, ಎಂ.ಡಿ.ಪಲ್ಲವಿ, ಅವಿನಾಶ್ ಮುಂತಾದವರು ಈ ಚಿತ್ರದ ಪ್ರಮುಖಪಾತ್ರದಲ್ಲಿ ನಟಿಸುತ್ತಿದ್ದಾರೆ. ನಮ್ಮ ಚಿತ್ರಕ್ಕೆ ನಿಮ್ಮೆಲ್ಲರ ಪ್ರೋತ್ಸಾಹವಿರಲಿ ಎಂದರು ನಿರ್ಮಾಪಕ ಜಯರಾಮ್ ದೇವಸಮುದ್ರ.

ನಾನು ನನ್ನ ತಂಡದ ಜೊತೆಗೆ ಅನೇಕ ಕಿರುಚಿತ್ರಗಳನ್ನು ನಿರ್ಮಾಣ ಮಾಡಿದ್ದೇನೆ. ಬೆಳ್ಳಿತೆರೆಯಲ್ಲಿ ಇದು ನನ್ನ ಮೊದಲ ಚಿತ್ರ. ಅವಕಾಶ ಮಾಡಿಕೊಟ್ಟ ನಿರ್ಮಾಪಕರಿಗೆ ಧನ್ಯವಾದ. "ಐಖಆ" ಎಂದರೆ "ಲೈಲಾಸ್ ಸ್ವೀಟ್ ಡ್ರೀಮ್" ಅಂತ. ಇದೊಂದು ವಿಭಿನ್ನ



ಕಥಾಹಂದರ ಹೊಂದಿರುವ ಚಿತ್ರ. ತಾಯಿ - ಮಗಳ ಬಾಂಧವ್ಯದ ಚಿತ್ರವೂ ಹೌದು. ಚೈತ್ರಾ ಜೆ ಆಚಾರ್ ಪ್ರಮುಖಪಾತ್ರದಲ್ಲಿ ಅಭಿನಯಿಸುತ್ತಿದ್ದು, ಅವರ ತಾಯಿ ಪಾತ್ರದಲ್ಲಿ ಎಂ.ಡಿ.ಪಲ್ಲವಿ ನಟಿಸುತ್ತಿದ್ದಾರೆ. ಬ್ಯುಸ್ ನೆಸ್ ಮ್ಯಾನ್ ಪಾತ್ರದಲ್ಲಿ ಹಿರಿಯನಟ ಅವಿನಾಶ್ ಕಾಣಿಸಿಕೊಳ್ಳುತ್ತಿದ್ದಾರೆ. ಮಿಥುನ್ ಮುಕುಂದನ್ ಸಂಗೀತ ನಿರ್ದೇಶನ, ರಿತೇಶ್ ಛಾಯಾಗ್ರಹಣ ಹಾಗೂ ಬಲರಾಮ್ ಅವರ ಸಂಕಲನವಿರುವ ಈ ಚಿತ್ರಕ್ಕೆ ಈಗಾಗಲೇ ಒಂದು ಹಂತದ ಚಿತ್ರೀಕರಣ ಮುಕ್ತಾಯವಾಗಿದ್ದು, ಜನವರಿ 15 ರಿಂದ ಎರಡನೇ ಹಂತದ ಚಿತ್ರೀಕರಣ ಆರಂಭವಾಗಲಿದೆ ಎಂದು ನಿರ್ದೇಶಕ ಶಕ್ತಿಪ್ರಸಾದ್ ತಿಳಿಸಿದರು.

ನನಗೆ ಶಕ್ತಿಪ್ರಸಾದ್ ಅವರು ಸುಮಾರು ಒಂದುವರೆ ವರ್ಷಗಳ ಹಿಂದೆ ಈ ಕಥೆ ಹೇಳಿದರು. ತುಂಬಾ ಇಷ್ಟವಾಯಿತು. ಶಕ್ತಿಪ್ರಸಾದ್ ಈ ಮೊದಲು ಬೇರೆ ಭಾಷೆಗಳ ನಿರ್ಮಾಪಕರ ಬಳಿ ಈ ಕಥೆ ಹೇಳಿದ್ದಾರೆ. ಅವರೆಲ್ಲರೂ ಕಥೆ ಮೆಚ್ಚಿಕೊಂಡು ನಿರ್ಮಾಣಕ್ಕೆ ಮುಂದಾಗಿದ್ದರು. ಆದರೆ ಕನ್ನಡದಲ್ಲೇ ಈ ಚಿತ್ರ ಮಾಡಬೇಕೆಂಬ ಉದ್ದೇಶದಿಂದ ಅವರು ಬೇರೆ ಭಾಷೆಗಳಲ್ಲಿ ಈ ಚಿತ್ರ ಮಾಡಲಿಲ್ಲ. ನಂತರ ನಿರ್ಮಾಪಕ ಜಯರಾಮ್ ದೇವಸಮುದ್ರ ಅವರು ಕನ್ನಡದಲ್ಲಿ ನಿರ್ಮಾಣಕ್ಕೆ ಮುಂದಾದರು. ನಾನು ಈ ಚಿತ್ರದಲ್ಲಿ ಈವರೆಗೂ ಮಾಡಿರದ ಪಾತ್ರದಲ್ಲಿ ಅಭಿನಯಿಸುತ್ತಿದ್ದೇನೆ ಎಂದು ನಟಿ ಚೈತ್ರಾ ಜೆ ಆಚಾರ್ ಹೇಳಿದರು.

ಕೆಲವು ವರ್ಷಗಳ ನಂತರ ಮತ್ತೆ ಸಿನಿಮಾದಲ್ಲಿ ನಾನು ಈ ಸಿನಿಮಾದಲ್ಲಿ ನಟಿಸುತ್ತಿದ್ದೇನೆ. ಚೈತ್ರಾ ಜೆ ಆಚಾರ್ ಅವರ ಮೂಲಕ ನನಗೆ ಈ ವಿಷಯ ತಿಳಿಯಿತ್ತು. ಶಕ್ತಿಪ್ರಸಾದ್ ಅವರು ಒಳ್ಳೆಯ ಕಥೆ ಮಾಡಿಕೊಂಡಿದ್ದಾರೆ. ನಾನು ಚೈತ್ರಾ ಜೆ ಆಚಾರ್ ಅವರ ಅಮ್ಮನ ಪಾತ್ರದಲ್ಲಿ ಅಭಿನಯಿಸುತ್ತಿದ್ದೇನೆ ಎಂದರು ಎಂ.ಡಿ.ಪಲ್ಲವಿ.

ನಾನು ಸಾಕಷ್ಟು ಸಿನಿಮಾ ತಂಡಗಳ ಜೊತೆಗೆ ಕೆಲಸ ಮಾಡಿದ್ದೇನೆ. ಆದರೆ ಈ ತಂಡದ ಜೊತೆಗೆ ಕೆಲಸ ಮಾಡಿರುವುದು ಬಹಳ ಖುಷಿಯಾಗಿದೆ. ನನ್ನದು ಈ ಚಿತ್ರದಲ್ಲಿ ಬ್ಯುಸಿನೆಸ್ ಮ್ಯಾನ್ ಪಾತ್ರ ಎಂದು ಹಿರಿಯ ನಟ ಅವಿನಾಶ್ ಹೇಳಿದರು.

ಸಂಗೀತ ನಿರ್ದೇಶನದ ಕುರಿತು ಮಿಥುನ್ ಮುಕುಂದನ್ ಹಾಗೂ ಛಾಯಾಗ್ರಹಣದ ಬಗ್ಗೆ ರಿತೇಶ್ ಮಾತನಾಡಿದರು.

# ಪ್ರೀತಿಗಾಗಿ 'ಸೂರ್ಯನ ಸಮರ ಸಂಕ್ರಾಂತಿ ಹಬ್ಬಕ್ಕೆ SOME ಕ್ರಾಂತಿ

ಯುವಕನೊಬ್ಬ ತನ್ನ ಪ್ರೀತಿಯನ್ನು ಪಡೆದುಕೊಳ್ಳಲು ಏನೆಲ್ಲ ಹೋರಾಟ, ಸಾಹಸ ಮಾಡುತ್ತಾನೆ ಎಂಬುದನ್ನು ಈ ಚಿತ್ರದ ಮೂಲಕ ನಿರ್ದೇಶಕ ಯುವ ನಿರ್ದೇಶಕ ಸಾಗರ್ ದಾಸ್ ಅವರು ಹೇಳಹೊರಟಿದ್ದಾರೆ. ಯುವನಟ ಪ್ರಶಾಂತ್ ಚಿತ್ರದಲ್ಲಿ ನಾಯಕನಾಗಿ ನಟಿಸಿದ್ದು, ಹರ್ಷಿತಾ ನಾಯಕಿ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ಆರ್ಮುಗಂ ರವಿಶಂಕರ್ ಅವರನ್ನು ಈವರೆಗೆ ನೋಡಿರದಂಥ ಪಾತ್ರದಲ್ಲಿ ಕಾಣಬಹುದು. ಅಲ್ಲದೆ ನಟಿ ಶೃತಿ ರವರ ಪಾತ್ರ ಕೂಡ ಪ್ರೇಕ್ಷಕರಿಗೆ ತುಂಬಾ ಹತ್ತಿರವಾದಂತ ಪಾತ್ರ, ಪ್ರಮೋದ್ ಶೆಟ್ಟಿ ಅವರಿಲ್ಲಿ ಉತ್ತರ ಕರ್ನಾಟಕ ಭಾಗದ ವಿಲನ್ ಆಗಿ ಕಾಣಿಸಿಕೊಂಡಿದ್ದಾರೆ ಟಿ.ಎಸ್. ನಾಗಾಭರಣ, ಬಲ ರಾಜವಾಡಿ, ಭಜರಂಗಿ ಪ್ರಸನ್ನ, ಪ್ರಮೋದ್ ಶೆಟ್ಟಿ, ಕುಂಕುಮ್ ಹರಿಹರ, ದೀಪಿಕಾ, ಕಡ್ಡಿಪುಡಿ ಚಂದ್ರು ಈ ಚಿತ್ರದ ಉಳಿದ ಪಾತ್ರ ವರ್ಗದಲ್ಲಿದ್ದಾರೆ.

ಚಿತ್ರದ 5 ಹಾಡುಗಳಿಗೆ ಶ್ರೀ ಶಾಸ್ತ್ರ ಅವರು ಸಂಗೀತ ಸಂಯೋಜನೆ ಮಾಡಿದ್ದು, ಬಹದ್ದೂರ್ ಚೇತನ್, ಪ್ರಮೋದ್ ಮರವಂತೆ, ನಿರ್ದೇಶಕ ಸಾಗರ್ ಕೂಡ ಸಾಹಿತ್ಯ ರಚಿಸಿದ್ದಾರೆ ಮನುರಾಜ್ ಅವರ ಛಾಯಾಗ್ರಹಣ, ಮಣಿಕಂಠ ಕೆ.ವಿ. ಅವರ ಸಂಭಾಷಣೆ, ನರಸಿಂಹ ಅವರ ಸ್ಟಂಟ್, ವಸಂತ್ ಕುಮಾರ್ ನೃತ್ಯ ಸಂಯೋಜನೆ ಮಾಡಿದ್ದಾರೆ

ಈಗೀಗ ಉತ್ತರ ಕರ್ನಾಟಕ ಭಾಗದ ಅನೇಕ ನಿರ್ಮಾಪಕರು ಕನ್ನಡ ಚಿತ್ರರಂಗಕ್ಕೆ ಬರುತ್ತಿದ್ದಾರೆ. ಅದೇರೀತಿ ಬೆಳಗಾವಿ ಮೂಲದ ಬಸವರಾಜ ಬೆಣ್ಣೆ ಹಾಗೂ ರವಿ ಬೆಣ್ಣೆ ಸಹೋದರರೂ ತಮ್ಮ ಕೊಡುಗೆ ನೀಡಲು ಅಣಿಯಾಗಿದ್ದಾರೆ. ನಂದಿ ಸಿನಿಮಾಸ್ ಮೂಲಕ



"ಸೂರ್ಯ" ಎಂಬ ಮಾಸ್ ಲವ್ ಸ್ಟೋರಿಯನ್ನು ನಿರ್ಮಿಸಿ, 15 / 01/ 2026 ಕ್ಕೆ ತೆರೆಗೆ ತರುವ ಸಿದ್ಧತೆ ನಡೆಸಿದ್ದಾರೆ.

ಇತ್ತೀಚೆಗೆ ಬಿಡುಗಡೆಯಾದ ಉತ್ತರ ಕರ್ನಾಟಕ ಶೈಲಿಯ ಚಿತ್ರದ ಟ್ರೈಲರ್ ಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ಪಡೆದುಕೊಂಡಿದೆ?.

ಸೂರ್ಯ ಇದು ನಾಯಕನ ಹೆಸರು. ಆತ ತನ್ನ ಪ್ರೀತಿಗೋಸ್ಕರ ಯುದ್ಧದ ರೀತಿಯಲ್ಲಿ ಸಮರ ಸಾರಿ ಹೇಗೆ ಉಳಿಸಿಕೊಳ್ಳುತ್ತಾನೆ ಎನ್ನುವುದೇ ಚಿತ್ರದ ಕಥಾಹಂದರ ಇದೆ ಎಂದು ನಿರ್ದೇಶಕ ಸಾಗರ್ ದಾಸ್ ಹೇಳಿದ್ದಾರೆ

# ಪೃಥ್ವಿ ಅಂಬಾರ್-ಧನ್ಯ ರಾಮ್ ಕುಮಾರ್ ಸಿನಿಮಾಗೆ ಧ್ರುವ ಸರ್ಜಾ ಸಾಥ್

ರಥಾವರ ಸಿನಿಮಾ ಖ್ಯಾತಿಯ ಚಂದ್ರಶೇಖರ್ ಬಂಡಿಯಪ್ಪ ಸಾರಥ್ಯದಲ್ಲಿ ಮೂಡಿ ಬಂದಿರುವ ಸಿನಿಮಾ ಚೌಕಿದಾರ್. ಈಗಾಗಲೇ ಟೀಸರ್ ಹಾಗೂ ಹಾಡಿನ ಮೂಲಕ ಕುತೂಹಲ ಹೆಚ್ಚಿಸಿರುವ ಈ ಚಿತ್ರದ ಬಿಡುಗಡೆ ದಿನಾಂಕ ಘೋಷಣೆಯಾಗಿದೆ. ಆಕ್ಷನ್ ಪ್ರಿನ್ಸ್ ಧ್ರುವ ಸರ್ಜಾ ಚೌಕಿದಾರ್ ರಿಲೀಸ್ ಡೇಟ್ ಅನೌನ್ಸ್ ಮಾಡಿ, ಇಡೀ ತಂಡಕ್ಕೆ ಶುಭ ಹಾರೈಸಿದ್ದಾರೆ. ಇದೇ ತಿಂಗಳ 30ರಂದು ಚೌಕಿದಾರ್ ಸಿನಿಮಾ ತೆರೆಗೆ ಬರಲಿದೆ.

ಪೃಥ್ವಿ ಅಂಬಾರ್ ನಾಯಕನಾಗಿ ಹಾಗೂ ಧನ್ಯ ರಾಮ್ ಕುಮಾರ್ ನಾಯಕಿಯಾಗಿ ನಟಿಸಿರುವ ಚೌಕಿದಾರ್ ಸಿನಿಮಾದಲ್ಲಿ ಚಿತ್ರರಂಗದಲ್ಲಿ 50 ವರ್ಷ ಪೂರೈಸಿರುವ ಹಿರಿಯ ನಟ ಸಾಯಿ ಕುಮಾರ್ ಅವರು ವಿಶೇಷ ಪಾತ್ರದಲ್ಲಿ ನಟಿಸಿದ್ದಾರೆ. ಚೈತ್ರದ ಪ್ರೇಮಾಂಜಲಿ ಚಿತ್ರದ ನಾಯಕಿ ಶ್ವೇತಾ, ಸುಧಾರಾಣಿ ಪ್ರಮುಖ ಪಾತ್ರಗಳಿಗೆ ಜೀವ ತುಂಬಿದ್ದಾರೆ. ಧರ್ಮ, ಬಿಗ್ ಬಾಸ್ ಖ್ಯಾತಿಯ ಗಿಲ್ಲಿ ನಟ ಸೇರಿದಂತೆ ಹಲವರು ತಾರಾಬಳಗದಲ್ಲಿದ್ದಾರೆ.

ವಿ ಎಸ್ ಎಂಟರ್ಟೈನ್ಮೆಂಟ್ ಬ್ಯಾನರ್ಡಿ ಕಲ್ಲಹಳ್ಳಿ ಚಂದ್ರಶೇಖರ್ ನಿರ್ಮಾಣ ಮಾಡಿದ್ದಾರೆ. ವಿದ್ಯಾದೇವಿ ನಿರ್ಮಾಣದಲ್ಲಿ ಸಾಥ್ ಕೊಟ್ಟಿದ್ದಾರೆ.ವಿ.ನಾಗೇಂದ್ರ ಪ್ರಸಾದ್, ಪ್ರಮೋದ್ ಮರವಂತೆ, ಸಂತೋಷ್ ನಾಯಕ್ ಹಾಡುಗಳಿಗೆ ಸಾಹಿತ್ಯ ಬರೆದಿದ್ದಾರೆ. ಸಿದ್ದು ಕಂಚನಹಳ್ಳಿ ಛಾಯಾಗ್ರಹಣ, ಸಚಿನ್ ಬಸ್ರೂರ್ ಸಂಗೀತ ನಿರ್ದೇಶನ



ಚಿತ್ರಕ್ಕಿದೆ. ಫ್ಯಾಮಿಲಿ, ಅಪ್ಪ-ಮಗನ ಬಾಂಧವ್ಯದ ಕಥೆ ಹೊಂದಿರುವ ಈ ಸಿನಿಮಾವನ್ನ ಸೆನ್ಸಾರ್ ಮಂಡಳಿ ಸದಸ್ಯರು ಶ್ಲಾಘಿಸಿದ್ದಾರೆ. ಈ ಚಿತ್ರಕ್ಕೆ U/A ಸರ್ಟಿಫಿಕೇಟ್ ನೀಡಿದ್ದಾರೆ. ಮುರುಳಿ ಮಾಸ್ಟರ್ ಕೊರಿಯೋಗ್ರಫಿ ಮಾಡಿದ್ದಾರೆ. ಜ್ಞಾನೇಶ್ ಮಾತಾಡ್ ಸಂಕಲನ, ಜೈ ಸುಬ್ರಹ್ಮಣ್ಯ ಸಾಹಸ ದೃಶ್ಯಗಳು ಚಿತ್ರಕ್ಕಿದೆ.

Published by Mihir Akash K.R Printed by M.S.Shivaprakash on behalf of Mihir Akash K.R. Printed at M.S. Shivaprakash, IDEAL OFFSET PRINTERS, #337, SLJ Temple Street, Old Town Mandya Dist-571401, Karnataka. Published from Mihir Akash K.R, #78, Daya Marga Near Geetha School, Siddartha Nagar Mysore-570011, Editor K.N Ravi,